ಸಂಪುಟ: ೦೭/ ಸಂಚಿಕೆ: ೧೨೪/ರವಿವಾರ ದಿನಾಂಕ : ೨೯-೦೬-೨೦೨೫/ ಪುಟ: ೬/ ಬೆಲೆ ೨-೦೦

ಸತ್ಯಕ್ಕೆ ಕಿರಣ ಸುಳ್ಳಿಗೆ ಕಿಡಿ

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ಧಾರವಾಡ ಬಾಗಲಕೋಟ ವಿಜಯಪುರ ಗದಗ ಕೊಪ್ಪಳ ಹಾವೇರಿ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 07/ ISSUE : 124/ SUNDAY Date : 29-06-2025/ RNI No. KARKAN/2019/77640/ Postal Reg No. PMG/KA/NK/BM/135/2025-27 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಕೆಆರ್‌ಎಸ್ ಹೊಸ ದಾಖಲೆ

### ಇತಿಹಾಸದಲ್ಲಿ ಮೊದಲ ಬಾರಿ ಜೂನ್‌ನಲ್ಲೇ ಭರ್ತಿ: ನಾಳೆ ಮುಖ್ಯಮಂತ್ರಿ ಬಾಗಿನ ಅರ್ಪಣೆ



ಮಂಡ್ಯ: ರೈತರ ಜೀವನಾಡಿ'ಯಾದ ಕೃಷ್ಣರಾಜಸಾಗರ ಜಲಾಶಯವು ಇದೇ ಮೊದಲ ಬಾರಿಗೆ ಜೂನ್ ತಿಂಗಳಲ್ಲೇ ಭರ್ತಿಯಾಗಿದ್ದು, ಹೊಸ ದಾಖಲೆ ಸೃಷ್ಟಿಸಿದೆ.

ಕೆಆರ್‌ಎಸ್ ಅಣೆಕಟ್ಟೆ ಭರ್ತಿಯಾಗಿರುವ ಸಂಭ್ರಮದ ಅಂಗವಾಗಿ ಜೂನ್ 30ರಂದು ಬೆಳಿಗ್ಗೆ 11ಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು 4ನೇ ಬಾರಿಗೆ ಬಾಗಿನ ಅರ್ಪಿಸಲಿದ್ದಾರೆ. ಈಗಾಗಲೇ 2013, 2014, 2024 ಈ ಮೂರು ವರ್ಷ ಕಾವೇರಿ ತಾಯಿಗೆ ಬಾಗಿನ ಅರ್ಪಿಸಿ, ಪೂಜೆ ಸಲ್ಲಿಸಿದ್ದಾರೆ. ಕೆಆರ್‌ಎಸ್ ಅಣೆಕಟ್ಟೆಯಲ್ಲಿ ಪ್ರಸ್ತುತ 121 ಅಡಿ ನೀರಿದ್ದು, ಭರ್ತಿಗೆ 3 ಅಡಿ ಮಾತ್ರ ಬಾಕಿ ಇದೆ. ಜೂನ್ 29ರ ವೇಳೆಗೆ ಡ್ಯಾಂ ಸಂಪೂರ್ಣ ಭರ್ತಿಯಾಗುವ ನಿರೀಕ್ಷೆಯಿದೆ ಎಂದು ಎಂಜಿನಿಯರ್‌ಗಳು ತಿಳಿಸಿದ್ದಾರೆ.

ಈ ಬಾರಿ ಕಾವೇರಿ ಜಲಾನಯನ ಪ್ರದೇಶದಲ್ಲಿ ಮುಂಗಾರು ಮಳೆ ಉತ್ತಮವಾಗಿ ಸುರಿದ ಕಾರಣ, ಜಲಾಶಯ ಜೂನ್‌ನಲ್ಲೇ ಭರ್ತಿಯಾಗಿದೆ. ಕೆಆರ್-ಎಸ್ ಅಣೆಕಟ್ಟೆ ನಿರ್ಮಾಣವಾದ 1931ನೇ ಸಾಲಿನಿಂದ ಇಲ್ಲಿಯವರೆಗೆ ಅಂದರೆ 94 ವರ್ಷಗಳ ಇತಿಹಾಸದಲ್ಲಿ ಇದೇ ಮೊದಲ ಬಾರಿಗೆ ಜೂನ್ ತಿಂಗಳಲ್ಲೇ ಡ್ಯಾಂ ಭರ್ತಿಯಾಗುತ್ತಿರುವುದು ರೈತರ ಸಂತಸ ಹೆಚ್ಚಿಸಿದೆ.

ಮಂಡ್ಯ ಜಿಲ್ಲೆಯ ಶ್ರೀರಂಗಪಟ್ಟಣ ತಾಲೂಕಿನ ಕೃಷ್ಣರಾಜ ಸಾಗರ (ಕೆಆರ್‌ಎಸ್) ಅಣೆಕಟ್ಟಿನಲ್ಲಿ ಕಾವೇರಿ ನದಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜೂನ್ 30 ರಂದು ಕಾವೇರಿ ಮಾತೆಗೆ ಪೂಜೆ ಸಲ್ಲಿಸಿ ಬಾಗಿನ ಸಮರ್ಪಣೆ ಮಾಡಲಿದ್ದಾರೆ. ಸಿಎಂ ಗೆ ಬೆಂಗಳೂರು ನಗರಾಭಿವೃದ್ಧಿ ಹಾಗೂ ಜಲ ಸಂಪನ್ಮೂಲ ಸಚಿವ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕೇಂದ್ರ ಸರ್ಕಾರದ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವರು ಹಾಗೂ ಮಂಡ್ಯ ಲೋಕಸಭಾ ಕ್ಷೇತ್ರದ ಸಂಸದ ಹೆಚ್ ಡಿ ಕುಮಾರಸ್ವಾಮಿ, ಕೃಷಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎನ್ ಚಲುವರಾಯಸ್ವಾಮಿ ಸೇರಿದಂತೆ ಹಲವು ನಾಯಕರು ಸಾಥ್ ಕೊಡಲಿದ್ದಾರೆ.

## ಶಾಂತಿಯುತವಾಗಿ ಗ್ರಾಮ ದೇವತೆಯ ಜಾತ್ರಾ ಮಹೋತ್ಸವ ನಡೆಯಲಿ: ಸಚಿವ ಸತೀಶ ಜಾರಕಿಹೊಳಿ ಎಚ್ಚರಿಕೆ

### ಜಾತ್ರಾ ಸಮಯದಲ್ಲಿ ಹೆಚ್ಚಿನ ಭದ್ರತೆ ಒದಗಿಸಲು ಪೋಲೀಸ್ ಅಧಿಕಾರಿಗಳಿಗೆ ಸಚಿವರು ಸೂಚನೆ

ಗೋಕಾಕ: ಗೋಕಾಕ ಗ್ರಾಮ ದೇವತೆಯರ ಜಾತ್ರೆ ಐತಿಹಾಸಿಕ ಜಾತ್ರೆಯಾಗಿದ್ದು ಲಕ್ಷಾಂತರ ಜನ ಈ ಜಾತ್ರೆಯಲ್ಲಿ ಪಾಲ್ಗೊಳ್ಳಲಿದ್ದು ಜಾತ್ರಾ ಸಮಯದಲ್ಲಿ ಕಳೆದ ಬಾರಿ ಆದ ಸಮಸ್ಯೆಗಳು ಮರಕಳಿಸದಂತೆ ನಿಗಾವಹಿಸುವದು ಅತ್ಯವಶ್ಯವಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಅವರು, ನಗರದ ಶ್ರೀ ಮಹಾಲಕ್ಷ್ಮೀ ಸಭಾ ಭವನದಲ್ಲಿ ಗೋಕಾಕ ಗ್ರಾಮ ದೇವತೆಯರ ಜಾತ್ರಾ ಮಹೋತ್ಸವ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಈಗಾಗಲೇ ನಗರಸಭೆಯಿಂದ ಕಳೆದ ಒಂದು ತಿಂಗಳಿನಿಂದ ನಗರದ ಸ್ವಚ್ಛತೆಗೆ ಆದ್ಯತೆ ನೀಡಿದ್ದಾರೆ. ಪೋಲಿಸ್ ಇಲಾಖೆಯವರು ಕಾನೂನು ಸುವ್ಯಸ್ಥೆ ಕಾಪಾಡಿಕೊಳ್ಳುವ ನಿಟ್ಟಿನಲ್ಲಿ ಹೆಚ್ಚಿನ ಸಿಬ್ಬಂಧಿ ನಿಯೋಜನೆಗೆ ಸೂಚನೆ ನೀಡಲಾಗಿದೆ. ಹೆಚ್ಚಿನ ಜನದಟ್ಟನೆ ಆಗದಂತೆ ನಗರದಲ್ಲಿ ವಾಹನಗಳ ಸಂಚಾರಕ್ಕೆ ಸೂಕ್ತಕ್ರಮವನ್ನು ಇಲಾಖೆ ಕೈಗೊಂಡಿದೆ. ಸಾರ್ವಜನಿಕರು ಸಹ ಇಲಾಖೆಯೊಂದಿಗೆ ಸಹಕಾರ ನೀಡಿ ಜಾತ್ರಾ ಮಹೋತ್ಸವ ಯಶಸ್ವಿಗೊಳಿಸಬೇಕು ಎಂದರು.

ಬ್ಯಾನರ್ ಅಳವಡಿಕೆ ಬಗ್ಗೆ ನಗರಸಭೆ ಅಧಿಕಾರಿಗಳಿಗೆ ಸೂಚನೆ ನೀಡಿದ ಸಚಿವರು ಜಾತ್ರಾ ಮಹೋತ್ಸವ ಶಾಂತಿಯುತವಾಗಿ ನಡೆಯಬೇಕು ಆ ನಿಟ್ಟಿನಲ್ಲಿ ನಗರಸಭೆಯಿಂದ ಬ್ಯಾನರ್ ಅಳವಡಿಸುವವರಿಗೆ ಅನುಮತಿಯನ್ನು ನೀಡಬೇಕು. ಈ ವಿಚಾರವಾಗಿ ಯಾರೂ ಪ್ರತಿಭಟನೆ ಮಾಡುವ ಅವಶ್ಯಕತೆ ಇಲ್ಲ. ಇಲ್ಲಿ ಎಲ್ಲರು ಬ್ಯಾನರಗಳನ್ನು ಹಾಕಿಕೊಳ್ಳಬಹುದು. ಈ ಜಾತ್ರೆ ಭಂಡಾರದ ಜಾತ್ರೆಯಾಗಿದ್ದು ಭಂಡಾರದ ಟೇಸ್ಟಿಂಗ್ ಮಾಡಿಸಿ ಮಾರಾಟಕ್ಕೆ ಅವಕಾಶ ಕಲ್ಪಸಿಲಾಗುತ್ತಿದೆ. ಈ ಜಾತ್ರಾ ಮಹೋತ್ಸವ ಯಶಸ್ವಿಯಾಗಲು ಎಲ್ಲ ಸಹಕರಿಸಬೇಕು. ಜಾತ್ರೆಗೆ ಬರುವ ಜನರು ಗೋಕಾಕ ಜಲಪಾತ ವೀಕ್ಷಣೆಗೆ ತೆರಳುತ್ತಾರೆ ಅಲ್ಲಿಯೂ ಸಹ ಹೆಚ್ಚಿನ ಸಿಬ್ಬಂಧಿ ನಿಯೋಜನೆ ಮಾಡಲಾಗುತ್ತದೆ ಎಂದರು.

ಜಾತ್ರಾ ಕಮೀಟಿ ಅಧ್ಯಕ್ಷ ಹಾಗೂ ಶಾಸಕ ರಮೇಶ ಜಾರಕಿಹೊಳಿ ಅವರು ಮಾತನಾಡಿ, ಕಳೆದ ಮೂರು ದಿನಗಳಿಂದ ಬ್ಯಾನರ್ ವಿಚಾರವಾಗಿ ನಡೆಯುತ್ತಿರುವ ಪ್ರತಿಭಟನೆ, ಮನಸ್ತಾಪಗಳ ತಿಳಿದು ಬಂದಿಲ್ಲ. ತಾಲೂಕಾಡಳಿತ ಹಾಗೂ ನಗರಸಭೆಯವರು ಎಲ್ಲರಿಗೂ ಅವಕಾಶ ನೀಡಲಿ. ಜಿಲ್ಲಾಡಳಿತ ಹಾಗೂ ಪೋಲಿಸ್ ಇಲಾಖೆಯೊಂದಿಗೆ ಜಾತ್ರಾ ಕಮೀಟಿಯವರ ಸಹಕಾರವಿದ್ದು ಈ ಐತಿಹಾಸಿಕ ಜಾತ್ರೆಯನ್ನು ಯಶಸ್ವಿಗೊಳಿಸುವ ನಿಟ್ಟಿನಲ್ಲಿ ಎಲ್ಲರೂ ಒಗ್ಗಟ್ಟಾಗಿ ಕಾರ್ಯನಿರ್ವಹಿಸೋಣ ಎಂದರು.

ಜಿಲ್ಲಾಧಿಕಾರಿ ಮಹ್ಮದ ರೋಷಣ ಮಾತನಾಡಿ, ಕಳೆದ ಬಾರಿ ಜಾತ್ರೆಯ ಸಂದರ್ಭದಲ್ಲಿ ಆದ ಟ್ರಾಫೀಕ್, ಪಾರ್ಕಿಂಗ್ ಮತ್ತು ಜೇಬುಕಳ್ಳತನದ ಬಗ್ಗೆ ಮಾಹಿತಿ ನೀಡಿದ್ದು ಇದಕ್ಕೆ ಪೋಲಿಸ್ ಇಲಾಖೆಯಿಂದ ಸುಮಾರು 2500ಕ್ಕೂ ಹೆಚ್ಚುಜನ ಸಿಬ್ಬಂಧಿ ನಿಯೋಜನೆ ಹಾಗೂ ಫೇಸ್ ಟ್ರ್ಯಾಪಿಂಗ್ ಕ್ಯಾಮರಾ ಅಳವಡಿಸಲಾಗುತ್ತಿದೆ ಎಂದು ಕಳ್ಳ-ರಿಗೆ ಎಚ್ಚರಿಕೆ ನೀಡಿದ ಅವರು, ಕಡಬಗಟ್ಟಿ ರಸ್ತೆ ಮಾರ್ಗವಾಗಿ ಬರುವ ಜನರಿಗೆ ಎರಡು ಕಡೆ ಪಾರ್ಕಿಂಗ್, ಗೋಕಾಕ ಫಾಲ್ಸ ಮಾರ್ಗವಾಗಿ, ಹುಬ್ಬಳ್ಳಿ-ಧಾರವಾಡ ಮಾರ್ಗವಾಗಿ ಹಾಗೂ ಲೋಳಸೂರ ಮಾರ್ಗವಾಗಿ ಬರುವ ಸಾರ್ವಜನಿಕರಿಗೆ ಎರಡೆರಡು ಕಡೆ ಪಾರ್ಕಿಂಗ್ ವ್ಯವಸ್ಥೆ ಹಾಗೂ ನಗರದ ಮಯೂರ ಶಾಲೆಯ ಆವರಣದಲ್ಲಿ ಸೇರಿ 9ಸ್ಥಳಗಳಲ್ಲಿ ಪಾರ್ಕಿಂಗ ವ್ಯವಸ್ಥೆ ಮಾಡಲಾಗಿದೆ. ಜಾತ್ರಾ ಕಮೀಟಿಯಿಂದ ಡ್ರೋಣಗಳ ವ್ಯವಸ್ಥೆ ಹಾಗೂ ಸಾರ್ವಜನಿಕರು ಇರುವ ಸ್ಥಳದಲ್ಲೆ ಎಲ್.ಇ.ಡಿ ಸ್ಕ್ರೀನ್‌ಗಳ ಮೂಲಕ ವೀಕ್ಷಣೆ ಮಾಡಲು ಅವಕಾಶ ಕಲ್ಪಿಸಿದ್ದು ಜಾತ್ರಾ ಕಮೀಟಿಗೆ ಜಿಲ್ಲಾಧಿಕಾರಿಗಳು ಧನ್ಯವಾದ ತಿಳಿಸಿದರು. ಆರೋಗ್ಯ ಇಲಾಖೆಯಿಂದ ಪ್ರಮುಖ ಸ್ಥಳಗಳಲ್ಲಿ ಪ್ರಾಥಮಿಕ ಚಿಕಿತ್ಸೆ ಮತ್ತು ಅಂಬ್ಯಲೇನ್ಸ್ ವ್ಯವಸ್ಥೆ ಮಾಡಲಾಗುತ್ತದೆ. ಅಗ್ನಿ ಅವಘಡಗಳು ಆಗದಂತೆ ಹೆಸ್ಕಾಂ ಅಧಿಕಾರಿಗಳು ರಥ ಬೀದಿಯ ಪಕ್ಕದಲ್ಲಿ ಬರುವ ಗಿಡ ಮರಗಳ ರೆಂಬೆಕೊಂಬೆಗಳನ್ನು ಕತ್ತರಿಸಿ ಸ್ವಚ್ಛಗೊಳಿಸಲು ಹಾಗೂ ರಸ್ತೆಯ ಕ್ರಾಸ್ ಮೇಲೆ ಹಾಕಲಾಗ ವೈರಗಳನ್ನು ತೆರವುಗೊಳಿಸಲು ಸೂಚನೆ ನೀಡಲಾಗಿದೆ. ನಗರದ ಗ್ರಾಮ ದೇವತೆಯರ ದೇವಸ್ಥಾನ ಸೇರಿ ರಥ ಬೀದಿಯ ವರೆಗೆ ಸಂಚ-ರಿಸಲು ಉಚಿತ ಸಾರಿಗೆ ಬಸ್ಸುಗಳ ವ್ಯವಸ್ಥೆ, ಹುಬ್ಬಳ್ಳಿ-ಧಾರವಾಡ ಭಾಗದಿಂದ ಬರುವ ಸಾರಿಗೆ ವಾಹನಗಳಿಗೆ ಎಪಿಎಮ್‌ಸಿಯಲ್ಲಿ ನಿಲುಗಡೆ ವ್ಯವಸ್ಥೆ ಮಾಡಿದ್ದು ಅಲ್ಲಿಂದ ನಗರಕ್ಕೆ ಬರಲು ಬಸ್ಸುಗಳ ವ್ಯವಸ್ಥೆ, ಶೌಚಾಲಯ, ಕುಡಿಯುವ ನೀರು ಸೇರಿದಂತೆ ಎಲ್ಲ ವ್ಯವಸ್ಥೆಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸುವಂತೆ ತಿಳಿಸಲಾಗಿದೆ. ಸಾರ್ವಜನಿಕರು ದೇವಿಯರ ದರ್ಶನ ಪಡೆದು ದೇವರ ಕೃಪೆಗೆ ಪಾತ್ರರಾಗುವಂತೆ ತಿಳಿಸಿದರು.

> 9ದಿನಗಳ ವರೆಗೆ ನಡೆಯುವ ಗ್ರಾಮ ದೇವತೆಯರ ಜಾತ್ರಾ ಮಹೋತ್ಸವದಲ್ಲಿ ದಿನಾಲೂ ಲಕ್ಷಾಂತರ ಸಂಖ್ಯೆಯಲ್ಲಿ ಜನ ಸೇರಲಿದ್ದಾರೆ. ಜನದಟ್ಟನೆಯ ಭಾಗದಲ್ಲಿ ಚಿಕ್ಕಮಕ್ಕಳ ಬಗ್ಗೆ ಜಾಗೃತೆ ವಹಿಸಬೇಕು. ಮತ್ತು ರಥೋತ್ಸವ ಸಂದರ್ಭದಲ್ಲಿ ಸಾರ್ವಜನಿಕರು ತಮ್ಮ ಮಕ್ಕಳನ್ನು ಕರೆ ತರದಂತೆ ಮನವಿ ಮಾಡಿದರು. ಅಮ್ಯೂಜಮೆಂಟ್ ಪಾರ್ಕಗಳಲ್ಲಿ ಜನದಟ್ಟನೆ ಹೆಚ್ಚಾಗುವ ವಿಚಾರವಾಗಿ ಈಗಾಗಲೇ ಪೋಲಿಸ್ ಇಲಾಖೆಯೊಂದಿಗೆ ಮಾತನಾಡಿ ದೇವಸ್ಥಾನದ ಪಕ್ಕದಲ್ಲಿರುವ ಸ್ಥಳದ ಕೆಲವನ್ನು ಸ್ಥಳಾಂತರ ಮಾಡಲಾಗುವದು.
> -ಮಹ್ಮದ ರೋಷಣ, ಜಿಲ್ಲಾಧಿಕಾರಿಗಳು ಬೆಳಗಾವಿ.



ಗೋಕಾಕ: ನಗರದ ಶ್ರೀ ಮಹಾಲಕ್ಷ್ಮೀ ಸಭಾ ಭವನದಲ್ಲಿ ಗೋಕಾಕ ಗ್ರಾಮ ದೇವತೆಯರ ಜಾತ್ರಾ ಮಹೋತ್ಸವ ಪೂರ್ವಭಾವಿ ಸಭೆಯನ್ನು ಉದ್ದೇಶಿಸಿ ಜಿಲ್ಲಾ ಉಸ್ತುವಾರಿ ಸಚಿವ ಸತೀಶ ಜಾರಕಿಹೊಳಿ ಮಾತನಾಡುತ್ತಿರುವದು.

> 'ಗೋಕಾಕ ಗ್ರಾಮ ದೇವತೆ ಜಾತ್ರಾ ಮಹೋತ್ಸವದ ಹಿನ್ನಲೆ ಜಾರಕಿಹೊಳಿ ಸಹೋದರರು ಒಂದೇ ವೇದಿಕೆ ಹಂಚಿಕೊಂಡಿದ್ದು ಅಪರೂಪದ ಸಂಗತಿ. ಜಾರಕಿಹೊಳಿ ಸಹೋದರರಲ್ಲಿ ಹಿರಿಯಣ್ಣ ಶಾಸಕ ರಮೇಶ ಜಾರಕಿಹೊಳಿ, ಎರಡನೇಯವರು ಸಚಿವ ಸತೀಶ ಜಾರಕಿಹೊಳಿ ಈ ಇಬ್ಬರೂ ಸಹೋದರರು ವೇದಿಕೆಯಲ್ಲಿ ಕಾಣಸಿಕೊಂಡಿರಲಿಲ್ಲ. ಉಳಿದ ಸಹೋದರರು ಎಲ್ಲರೊಂದಿಗೂ ವೇದಿಕೆ ಹಂಚಿಕೊಂಡಿದ್ದಾರೆ ಆದರೆ ಇದೆ ಪ್ರಥಮ ಬಾರಿಗೆ ಜಾತ್ರಾ ಮಹೋತ್ಸವದ ಪೂರ್ವಭಾವಿ ಸಭೆಯಲ್ಲಿ ಅಕ್ಕಪಕ್ಕದಲ್ಲೆ ಕುಳಿತು ವೇದಿಕೆ ಹಂಚಿಕೊಂಡಿದ್ದು ಅಪರೂಪದಲ್ಲಿ ಅಪರೂಪವೆಂದು ಹೇಳಬಹುದು.

### ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ

## ಸಂಭವನೀಯ ಪ್ರವಾಹ ಪರಿಸ್ಥಿತಿ ನಿರ್ವಹಣೆಗೆ ಸಜ್ಜಾಗಿರಲು ಜಿಲ್ಲಾಧಿಕಾರಿ ಸೂಚನೆ

ಬೆಳಗಾವಿ, : ನೆರೆಯ ಮಹಾರಾಷ್ಟ್ರದಲ್ಲಿ ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಬೆಳಗಾವಿ ಜಿಲ್ಲೆಯಲ್ಲಿನ ನದಿಗಳ ಒಳಹರಿವು ಹೆಚ್ಚಾಗುತ್ತಿದೆ. ಜಿಲ್ಲೆಯ ನದಿ ಪಾತ್ರದ ಗ್ರಾಮಗಳಲ್ಲಿ ಸಂಭವಿಸಬಹುದಾದ ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕವಾಗಿ ನಿಭಾಯಿಸಲು ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಬೇಕು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಅವರು ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ (ಜೂ.28) ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ವಿಡಿಯೋ ಸಂವಾದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಹಾರಾಷ್ಟ್ರದ ಘಟ್ಟ ಪ್ರದೇಶಗಳಲ್ಲಿ ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಅಲ್ಲಿನ ಬಹುತೇಕ ಆಣೆಕಟ್ಟುಗಳು ಭರ್ತಿಯಾಗುತ್ತಿವೆ. ಜಲಾಶಯಗಳ ನೀರಿನ ಮಟ್ಟ ಕುರಿತು ಅಲ್ಲಿನ ಅಧಿಕಾರಿಗಳ ಜೊತೆ ನಿರಂತರ ಸಂಪರ್ಕ ಸಾಧಿಸಿ ನಿಯಮಿತವಾಗಿ ವರದಿ ಪಡೆದುಕೊಂಡು ಜಾಗೃತರಾಗಿರುವಂತೆ ತಿಳಿಸಿದರು.

ಜಿಲ್ಲೆಯಲ್ಲಿ ಪ್ರವಾಹಕ್ಕೆ ತುತ್ತಾಗಬಹುದಾದ ಗ್ರಾಮಗಳಲ್ಲಿನ ಜನ-ಜಾನುವಾರುಗಳನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಅಗತ್ಯದ ಸಿದ್ಧತೆ ಮಾಡಿಕೊಳ್ಳಬೇಕು.

ಜಿಲ್ಲೆಯಲ್ಲಿ ಗುರುತಿಸಲಾಗಿರುವ ಕಾಳಜಿ ಕೇಂದ್ರಗಳಲ್ಲಿ ಮೂಲ ಸೌಕರ್ಯಗಳ ವ್ಯವಸ್ಥೆಗೆ ಕ್ರಮವಹಿಸಬೇಕು. ಈ ಕುರಿತು ಸಂಬಂಧಿಸಿದ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿ ಗುರುತಿಸಲಾಗಿರುವ ಕಾಳಜಿ ಕೇಂದ್ರಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲಿಸುವಂತೆ ಸೂಚಿಸಿದರು.



ಅಪಾಯ ಮಟ್ಟ ಮೀರಿ ಹರಿಯುವ ನದಿ, ಹಳ್ಳ ಕೊಳ್ಳಗಳ ಪಾತ್ರದ ಹತ್ತಿರ ಜನ-ಜಾನುವಾರುಗಳ ಸಂಚಾರ ನಿಷೇಧಿಸಬೇಕು. ಸೇತುವೆಗಳ ಮೇಲೆ ಜನ, ವಾಹನ ಸಂಚಾರ ಮಾಡದಂತೆ ಅಪಾಯದ ಕುರಿತು ಪ್ರದರ್ಶನ ಫಲಕ ಅಳವಡಿಕೆ ಹಾಗೂ ಅಗತ್ಯವಿದ್ದಲ್ಲಿ ಪೋಲಿಸ ಸಿಬ್ಬಂದಿಯನ್ನು ನಿಯೋಜಿಸಲು ಜಿಲ್ಲಾಧಿಕಾರಿ ತಿಳಿಸಿದರು.

ಪ್ರವಾಹ ಪರಿಸ್ಥಿತಿಯನ್ನು ಸಮರ್ಪಕ ನಿರ್ವಹಣೆಗಾಗಿ ಈಗಾಗಲೇ ನೋಡಲ್ ಅಧಿಕಾರಿಗಳನ್ನು ನಿಯೋಜಿಸಲಾಗಿದೆ. ನೋಡಲ್ ಅಧಿಕಾರಿಗಳು ನಿಯಮಿತವಾಗಿ ಸಭೆಗಳನ್ನು ಜರುಗಿಸಿ ಪ್ರವಾಹ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗೃತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದರು.

ಮಳೆ ಹೆಚ್ಚಾಗುತ್ತಿರುವ ಹಿನ್ನಲೆಯಲ್ಲಿ ಜಿಲ್ಲೆಯಲ್ಲಿನ ಅನೇಕ ಪ್ರವಾಸಿ ಸ್ಥಳಗಳಿಗೆ ಹೆಚ್ಚಿನ ಜನ ಬರುವಂತಹ ಸ್ಥಳಗಳಲ್ಲಿ ಯಾವುದೇ ದುರ್ಘಟನೆಗಳು ಆಗದಂತೆ ಅಗತ್ಯದ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ಸೂಚಿಸಿದರು.

ಡಿ.ಸಿ.ಪಿ. ರೋಹನ್ ಜಗದೀಶ್ ಅವರು ಮಾತನಾಡಿ, ಸಂಭವನೀಯ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ನಗರ ವ್ಯಾಪ್ತಿಯಲ್ಲಿ ಕಂಟ್ರೋಲ್ ರೂಂ ಸ್ಥಾಪಿಸಲಾಗಿದೆ. ನಗರ ಹಾಗೂ ಜಿಲ್ಲೆಯಲ್ಲಿ ಯಾವುದೇ ರಿತಿಯ ತೊಂದರೆಗಳು ಎದುರಾದಲ್ಲಿ ಸಾರ್ವಜನಿಕರು 112 ಕ್ಕೆ ಕರೆ ಮಾಡಿದಲ್ಲಿ ತ್ವರಿತವಾಗಿ ಕ್ರಮ ಕೈಗೊಳ್ಳಲು ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹ ಶಿಂಧೆ ಅವರು ಮಾತನಾಡಿ ಪ್ರವಾಹ ಭೀತಿಗೆ ಒಳಗಾಗಬಹುದಾದ ನದಿಪಾತ್ರದ ಗ್ರಾಮಗಳಿಗೆ ಅಗತ್ಯದ ಮುಂಜಾಗೃತಾ ಕ್ರಮವಹಿಸುವಂತೆ ಸ್ಥಳೀಯ ಆಡಳಿತಕ್ಕೆ ಸೂಚನೆ ನೀಡಿದರು.

ಮಳೆ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಶಾಲಾ ಮಕ್ಕಳನ್ನು ಸುರಕ್ಷಿತವಾಗಿ ಮನೆ ಸೇರಿಸುವ ಕು-ರಿತು ಶಾಲಾ ಮುಖ್ಯಸ್ಥರು, ಸ್ಥಳೀಯ ಆಡಳಿತ ನಿಗಾವಹಿಸಬೇಕು. ಶಿಥಿಲಾವಸ್ಥೆಯಲ್ಲಿರುವ ಶಾಲಾ ಕೊಠಡಿಗಳಲ್ಲಿ ತರಗತಿಗಳನ್ನು ನಡೆಸದಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ಮಹಾನಗರ ಪಾಲಿಕೆ ಆಯುಕ್ತರಾದ ಶುಭ.ಬಿ,

ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾ ನಿರ್ದೇಶಕ ಗಂಗಾಧರ ದಿವಟರ, ಶಿಕ್ಷಣ ಇಲಾಖೆ ಉಪ ನಿರ್ದೇಶಕಿ ಲೀಲಾವತಿ ಹಿರೇಮಠ, ಕೈಮಗ್ಗ ಮತ್ತು ಜವಳಿ ಇಲಾಖೆ ಉಪ ನಿರ್ದೇಶಕ ಬಸವರಾಜ ಪಾಟೀಲ, ತೋಟಗಾರಿಕೆ ಉಪ ನಿರ್ದೇಶಕ ಮಹಾಂತೇಶ ಮುರಗೋಡ ಸೇರಿಯಂತೆ ಹೆಸ್ಕಾಂ, ಪೊಲೀಸ್ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು. ಎಲ್ಲ ತಹಶೀಲ್ದಾರಗಳು, ತಾಲೂಕಾ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ವಿಡಿಯೋ ಸಂವಾದದಲ್ಲಿ ಹಾಜರಿದ್ದರು.

****

## ನಾಡಹಬ್ಬ ಮೈಸೂರು ದಸರಾ 11 ದಿನ ಅದ್ದೂರಿ ಆಚರಣೆ: ಸಿದ್ದರಾಮಯ್ಯ



ಬೆಂಗಳೂರು: ಈ ಬಾರಿ ರಾಜ್ಯಾದ್ಯಂತ ಮಳೆ-ಬೆಳೆ ಉತ್ತಮವಾಗಿದ್ದು, ನದಿ, ಕೆರೆಗಳು ತುಂಬಿದ್ದು, ವೈಭವದಿಂದ ದಸರಾ ಆಚ-ರಿಸಲಾಗುವುದು. ಸೆಪ್ಟೆಂಬರ್ 22 ರಂದು ದಸರಾ ಹಬ್ಬಕ್ಕೆ ಚಾಲನೆ ದೊರೆಯಲಿದ್ದು, ಅಕ್ಟೋಬರ್ 2 ರಂದು ವಿಜಯದಶಮಿ, ಜಂಬೂ ಸವಾರಿ ನಡೆಯಲಿದೆ. ದಸರಾ ಈ ಬಾರಿ 10 ದಿನಗಳ ಬದಲು 11 ದಿನಗಳ ಕಾಲ ನಡೆಯಲಿದೆ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ನಾಡಹಬ್ಬ ಮೈಸೂರು ದಸರಾ-2025 ಆಚರಣೆ ಕುರಿತು ವಿಧಾನಸೌಧ ಸಭಾಂಗಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಶನಿವಾರದಂದು ನಡೆದ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ವಿಜೃಂಭಣೆ ಭರದಲ್ಲಿ ದಸರಾದ ಚಾರಿತ್ರಿಕ ಮಹತ್ವ ಮರೆಯಾಗಬಾರದು. ಅನಗತ್ಯವಾಗಿ ಹಣ ಖರ್ಚು ಮಾಡುವುದು ವೈಭವ ಅಲ್ಲ. ಜನರ, ಪ್ರವಾಸಿಗರ ಸುರಕ್ಷತೆ ಮತ್ತು ಅನುಕೂಲಕ್ಕೆ ಮೊದಲ ಆದ್ಯತೆ ಇರಲಿ ಎಂದು ಸೂಚಿಸಿದರು.

ದಸರಾಕ್ಕೆ ತನ್ನದೇ ಆದ ಚಾರಿತ್ರಿಕ, ಧಾರ್ಮಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆಯಿದ್ದು, ಇದಕ್ಕೆ ಪೂರಕವಾಗಿ ದಸರಾ ಆಚರಿಸಲಾಗುವುದು, ವಿಶ್ವ ವಿಖ್ಯಾತ ದಸರಾದ ಪರಂಪರೆ ಮುಂದುವರೆಸುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜಿಸಬೇಕು ಎಂದು ಸೂಚಿಸಿದರು.

ಪೊಲೀಸರು ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಬೇಕು. ಕಾನೂನು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ಎಲ್ಲಾ ಜಿಲ್ಲೆಗಳಿಂದ ಆಗಮಿಸುವ ಸ್ತಬ್ಧಚಿತ್ರಗಳು ವೈವಿಧ್ಯಮಯವಾಗಿರಬೇಕು. ಈ ಬಾರಿ ಸ್ತಬ್ಧಚಿತ್ರಗಳಲ್ಲಿ ಗಾಂಧೀಜಿ ವಿಚಾರಧಾರೆಗಳಿಗೂ ಸಹ ಅವಕಾಶ ಕಲ್ಪಿಸಬೇಕು ಎಂದರು.

ಕಳೆದ ವರ್ಷ ದಸರಾ ಆಚರಣೆಗೆ ರೂ. 40 ಕೋಟಿ ಅನುದಾನ ಒದಗಿಸಲಾಗಿತ್ತು. ಈ ಬಾರಿ ಅದ್ದೂ-ರಿಯಾಗಿ ದಸರಾ ಆಚರಣೆಗೆ ಅಗತ್ಯವಾದಷ್ಟು ಅನುದಾನ ಒದಗಿಸಲಾಗುವುದು ಎಂದು ಮುಖ್ಯಮಂತ್ರಿ ತಿಳಿಸಿದರು.

ಸಚಿವರಾದ ಡಾ. ಎಚ್.ಸಿ.ಮಹದೇವಪ್ಪ, ಕೆ.ಜೆ. ಜಾರ್ಜ್, ಶಿವರಾಜ ತಂಗಡಗಿ, ಕೆ.ವೆಂಕಟೇಶ್, ಶಾಸಕರಾದ ಜಿ.ಟಿ.ದೇವೇಗೌಡ, ರಮೇಶ್ ಬಂಡಿಸಿದ್ದೇಗೌಡ, ಪುಟ್ಟರಂಗಶೆಟ್ಟಿ, ತನ್ವೀರ್ ಸೇಠ್, ಡಾ.ಯತೀಂದ್ರ ಎಸ್, ಡಾ.ಡಿ.ತಿಮ್ಮಯ್ಯ, ಅನಿಲ್ ಕುಮಾರ್, ಎ.ಆರ್. ಕೃಷ್ಣಮೂರ್ತಿ, ಮಧು ಜಿ ಮಾದೇಗೌಡ, ಕೆ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ ಮತ್ತಿತರರು ಸಭೆಯಲ್ಲಿ ಪಾಲ್ಗೊಂಡರು.

****

# ಲಕ್ಷ್ಮೀ ದೇವಿಯ ಜಾತ್ರೆಗೆ ಸಿಂಗಾರಗೊಂಡ ಕರದಂಟು ನಾಡು

## ಗೋಕಾಕನಲ್ಲಿ ಜೂನ್ 30 ರಿಂದ ಜುಲೈ 8 ವರೆಗೆ ಜಾತ್ರೆ ಸಡಗರ- ಈ ಜಾತ್ರೆಯ ಸಂಭ್ರಮ ಕಣ್ತುಂಬಿಕೊಳ್ಳಲು ತುದಿಗಾಲಿನಲ್ಲಿ ನಿಂತ ಭಕ್ತರು


ಬೆಳಗಾವಿ: ಕರದಂಟು ನಾಡಿನಲ್ಲಿ ಅದ್ದೂರಿ ರಥೋತ್ಸವ.. ಅಲಂಕಾರಗೊಂಡ ಕಂಗೊಳಿಸುತ್ತಿರುವ ಲಕ್ಷ್ಮೀ ದೇವಿ ದೇವಸ್ಥಾನ.. ಬಂಡಾರದಲ್ಲಿ ಮಿಂದೇಳುತ್ತಿರುವ ಭಕ್ತ ಸಾಗರ..ಇಂತಹ ದೃಶ್ಯಗಳು ಈ ಜಾತ್ರೆಯಲ್ಲಿ ಕಂಡು ಬರುತ್ತೆ.

ಹೌದು...ಇತಿಹಾಸ ಪ್ರಸಿದ್ಧ ಕರದಂಟು ನಾಡಿನಲ್ಲಿ ಲಕ್ಷ್ಮೀ ದೇವಿ ಜಾತ್ರೆ ದಿನಗಣನೆ ಶುರುವಾಗಿದ್ದು, ಜೂನ್ 30 ರಿಂದ ಜುಲೈ 8 ವರೆಗೆ ಅದ್ದೂರಿ ಜಾತ್ರಾ ಮಹೋತ್ಸವ ನೆರವೇರಲಿದೆ. ಸದ್ಯ ಗೋಕಾಕನಲ್ಲಿ ಈಗ ಮನೆ ಮನೆಯಲ್ಲೂ ಲಕ್ಷ್ಮೀ ದೇವಿ ಜಾತ್ರೆ ಸಂಭ್ರಮ ಮನೆ ಮಾಡಿದೆ. ಎಲ್ಲಿ ನೋಡಿದ್ರೂ ಲಕ್ಷ್ಮೀ ದೇವಿಯ ಆರಾಧನೆ ಕಂಡು ಬರುತ್ತಿದೆ. ಇಲ್ಲಿ ಪ್ರತಿ ವರ್ಷವೂ ಲಕ್ಷ್ಮೀ ದೇವಿ ಜಾತ್ರೆ ನಡೆಯುವುದಿಲ್ಲ ಬದಲಿಗೆ ಪ್ರತಿ 5 ವರ್ಷಕ್ಕೊಮ್ಮೆ ನಡೆಯುವ ಜಾತ್ರೆ ಈ ಭಾರಿ 10 ವರ್ಷಕ್ಕೆ ಈ ಜಾತ್ರೆ ನಡೆಯುತ್ತಿದೆ.

ಜಾತ್ರೆಗೆ ಲಕ್ಷಾಂತರ ಭಕ್ತರ ಆಗಮನ: ಸರ್ವಧರ್ಮೀಯರು ಶ್ರದ್ಧಾಭಕ್ತಿಯಿಂದ ಪೂಜಿಸುವ ಲಕ್ಷ್ಮೀ ದೇವಿ ಜಾತ್ರೆಯ ಸೊಬಗನ್ನು ಕಣ್ತುಂಬಿಕೊಳ್ಳಲು ಭಕ್ತರು ತುದಿಗಾಲ ಮೇಲೆ ನಿಂತಿ-ದ್ದಾರೆ. ಸ್ಥಳೀಯರು ತಮ್ಮ ಮನೆಗಳನ್ನು ಸಿಂಗರಿಸಿ ಸಂಬಂಧಿಗಳನ್ನು ಆಹ್ವಾನಿಸುತ್ತಿದ್ದಾರೆ. ಜಾತ್ರೆಗೆ ರಾಜ್ಯ, ಹೊರರಾಜ್ಯಗಳ ಲಕ್ಷಾಂತರ ಭಕ್ತರು ಭೇಟಿ ನೀಡಲಿದ್ದಾರೆ. ಇಷ್ಟಾರ್ಥ ಸಿದ್ಧಿಗಾಗಿ ಹರಕೆ ಹೊತ್ತು ತೀರಿಸಿ, ಭಕ್ತಿ ಸಮರ್ಪಿಸುತ್ತಾರೆ.

ಸಿಂಗಾರಗೊಳ್ಳಲಿದೆ ರಥ: ವೈಭವೋಪಿತ ಬಣ್ಣಬಣ್ಣದ ವಿದ್ಯುತ್ ದೀಪಗಳ ಅಲಂಕಾರದಿಂದ ಇಲ್ಲಿನ ಲಕ್ಷ್ಮೀ ದೇವಿ ಮಂದಿರಕ್ಕೆ ತರಹೇವಾರಿ ಹೂಗಳಿಂದ ಹಾಗೂ ವಿದ್ಯುತ್ ದೀಪದಿಂದ ಸಿಂಗಾರ ಮಾಡಲಾಗುತ್ತಿದೆ. ಅಲ್ಲದೇ ರಥಗಳನ್ನು ಸಂಪೂರ್ಣ ಅಲಂಕರಿಸಲಾಗುತ್ತಿದ್ದು, ರಥವು ಬಂಗಾರ ಲೇಪಿನ ನೋಡುಗರನ್ನು ಆಕರ್ಷಿಸುತ್ತಿದೆ.

46 ಶಿಲ್ಪಿಗಳ ಕೈಚಳಕ ರೆಡಿಯಾದ ರಥಗಳು: ವಿಶ್ವಕರ್ಮ ಶಿಲ್ಪಿಗಳಿಂದ 9 ತಿಂಗಳ ಕಾಲ ಈ ಎರಡು ರಥಗಳನ್ನು ಕೆತ್ತಲಾಗಿದೆ. ರಥ ತಲಾ 15 ಟನ್ ತೂಕವಿದ್ದು, ಉಡುಪಿ ಜಿಲ್ಲೆಯ ಕೋಟೇಶ್ವರದಲ್ಲಿ ಈ ರಥಗಳನ್ನು ನಿರ್ಮಾಣ ಮಾಡಲಾಗಿದೆ. ಕೋಟೇಶ್ವದ ವಿಶ್ವಕರ್ಮ ಕರಕುಶಲ ಶಿಲ್ಪಕಲಾ ಕೇಂದ್ರ ಕುಂಬಾಶಿಯ ರಥ ಶಿಲ್ಪಿ ರಾಜಗೋಪಾಲ ಆಚಾರ್ಯ ಅವರ ಪುತ್ರ ಲಕ್ಷ್ಮೀ ನಾರಾಯಾಣ ಆಚಾರ್ಯ ಅವರು ಈ ರಥಗಳನ್ನು ನಿರ್ಮಿಸಿದ್ದಾರೆ. ರಥ ನಿರ್ಮಾಣದಲ್ಲಿ ಒಟ್ಟು 46 ಜನ ಶಿಲ್ಪಿಗಳ ಕೆಲಸ ಮಾಡಿದ್ದು, ಸದ್ಯ ಈ ರಥ ಗೋಕಾಕಕ್ಕೆ ಆಗಮಿಸಿದೆ. ವೈಭವೋಪಿತ ಬಣ್ಣಬಣ್ಣದ ವಿದ್ಯುತ್ ದೀಪಗಳ ಅಲಂಕಾರದಿಂದ ಇಲ್ಲಿನ ಲಕ್ಷ್ಮೀ ದೇವಿ ಮಂದಿರಕ್ಕೆ ತರಹೇವಾರಿ ಹೂಗಳಿಂದ ಹಾಗೂ ವಿದ್ಯುತ್ ದೀಪದಿಂದ ಸಿಂಗಾರ ಮಾಡಲಾಗುತ್ತಿದೆ. ಅಲ್ಲದೇ ರಥಗಳನ್ನು ಸಂಪೂರ್ಣ ಅಲಂಕರಿಸಲಾಗುತ್ತಿದ್ದು, ರಥವು ಬಂಗಾರ ಲೇಪಿನ ನೋಡುಗರನ್ನು ಆಕರ್ಷಿಸುತ್ತಿದೆ.



ಭಂಡಾರದಲ್ಲಿ ಮಿಂದೇಳಲಿದ್ದಾರೆ ಭಕ್ತರು: ಇಲ್ಲಿ ಪ್ರತಿ ಮನೆಯಲ್ಲೂ ಹಬ್ಬದ ವಾತಾವರಣವಿದ್ದು, 10 ದಿನಗಳ ಕಾಲ ಈ ದೇವಿಯ ಜಾತ್ರೆಯನ್ನ ಆಚರಿಸಲಾಗುತ್ತಿದೆ. ಈ ಜಾತ್ರೆಯಲ್ಲಿ ಮುಖ್ಯವಾಗಿ ದೇವಿಯನ್ನ ತೇರಿನಲ್ಲಿ ಕುಡಿಸಿ ಮುಖ್ಯ ಓಣಿಗಳಲ್ಲಿ ಒಟ್ಟಾಗಿ ಸಾಗುವುದೆ ವಿಶೇಷ. ಈ ವರ್ಷ ನಡೆಯುವ ಜಾತ್ರೆಯನ್ನ ಕಣ್ತುಂಬಿಕೊಳ್ಳಲು ಸಾವಿರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸುತ್ತಿದ್ದಾರೆ. ಕರದಂಟು ನಾಡಿನ ಮನೆ ಮನೆಯಲ್ಲೂ ಹಬ್ಬದ ವಾತಾವರಣ ಕಂಡು ಬರುತ್ತಿದ್ದು, ಭಕ್ತರು ಫುಲ್ ಕುಣಿದು ಕುಪ್ಪಳಿಸಲಿದ್ದಾರೆ. 10 ದಿನಗಳ ಕಾಲ ನಡೆಯುವ ಲಕ್ಷ್ಮೀ ದೇವಿ ಜಾತ್ರೆಗೆ ನಾಡಿದ್ದು ಚಾಲನೆ ಸಿಗಲಿದೆ. ಇನ್ನೂ ಲಕ್ಷ್ಮೀ ದೇವಿಯ ಮೂರ್ತಿಯನ್ನ ತೇರಿನಲ್ಲಿ ಕೂರಿಸಿ ನಂತ್ರ ಗ್ರಾಮಸ್ಥರೆಲ್ಲರೂ ಎಳೆಯಲಿದ್ದು, ಈ ವೇಳೆ ಭಂಡಾರದಲ್ಲಿ ಲಕ್ಷಾಂತರ ಭಕ್ತರು ಮಿಂದೇಳಲಿದ್ದಾರೆ.

ಜಾತ್ರೆ ಕಾರ್ಯಕ್ರಮ ವಿವಿರ: ಜೂನ್ 30ರಂದು ದೇವಿಯನ್ನು ಜಿನಗಾರ ಮನೆಯಿಂದ ಅಂಬಿಗೇರ ಓಣಿಯಲ್ಲಿ ಕೂಡಿಸಲಾಗುವುದು, ಜುಲೈ 2 ರಂದು ಮಹಾಲಕ್ಷ್ಮೀದೇವಿಯರಿಗೆ ಅಭಿಷೇಕ & ಪೂಜಾ ಕಾರ್ಯ ನಡೆಯುವುದು. ಅಲ್ಲದೇ ಮಧ್ಯಾಹ್ನ ಪುರುಜನರಿಂದ ನೈವೈದ್ಯ ಕಾರ್ಯಕ್ರಮ ರಾತ್ರಿ ದೇವಿಯರ ಹೊನ್ನಾಟ ಜರಗುವುದು. ಅಂದೇ ದ್ಯಾಮವ್ವಾದೇವಿಯರನ್ನು ರಥ-'ದಲ್ಲಿ ಕೂಡಿಸುವ ಕಾರ್ಯಕ್ರಮ ನಡೆಯುವುದು. ಎರಡು ರಥಗಳು ಸೋಮವಾರ ಪೇಠದಿಂದ ಶ್ರೀ ದ್ಯಾಮವ್ವದೇವಿಯ ಗುಡಿಯವರೆಗೆ ಬರುವುದು. 3ರಂದು ಮಧ್ಯಾಹ್ನ ರಥೋತ್ಸವ ಜರಗುವುದು, 2 ರಥಗಳು ಶ್ರೀ ದ್ಯಾಮವ್ವಾದೇವಿಯ ಗುಡಿಯಿಂದ ಚೌಧರಿ ಕೂಟದವರೆಗೆ ಬರುವುದು, 04ರಂದು ಮಧ್ಯಾಹ್ನ ರಥೋತ್ಸವ ಜರಗುವುದು, ಒಂದು ರಥವು ಶ್ರೀ ಚೌಧರಿ ಕೂಟದಿಂದ ಲಕ್ಷ್ಮೀದೇವಿ ದೇವಸ್ಥಾನದವರೆಗೆ ಹೋಗುವುದು, ನಂತರ (ಒಂದು ರಥವು ಶ್ರೀ ಚೌಧರಿ ಕೂಟದಿಂದ ಕೆಳಗಿನಪೇಟ ಲಕ್ಷ್ಮೀದೇವಿ ದೇವಸ್ಥಾನದವರೆಗೆ ಹೋಗುವುದು, 5ರಂದು ಪುರಜನರಿಂದ ನೈವೈದ್ಯ ಕೊಡುವ ಕಾರ್ಯಕ್ರಮ. ವಿವಿಧ ಶರ್ತುಗಳು 2 ಕೋಣಗಳನ್ನು ಶ್ರೀ ಮಹಾಲಕ್ಷ್ಮೀ ದೇವಸ್ಥಾನಕ್ಕೆ ನಮಸ್ಕಾರ ಮಾಡಿಸುವುದು ಹಾಗೂ ಮದ್ದು ಹಾ-ರಿಸುವ ಕಾರ್ಯಕ್ರಮ ನಡೆಯಲಾಗುವುದು. 6ರಿಂದ 8ರವೆರೆಗೆ ವಿವಿಧ ಸ್ಪರ್ಧೆಗಳು ಸೇರಿದಂತೆ ಕುಸ್ತಿ ಪಂದ್ಯಾವಳಿಗಳು ಹಾಗೂ ಗ್ರಾಮದ ಎಲ್ಲ ದೇವರುಗಳಿಗೆ ನೈವೈದ್ಯ ಕಾರ್ಯಕ್ರಮ ನಡೆಯಲಿದೆ ಎಂದು ಜಾತ್ರಾ ಕಮೀಟಿ ಸದಸ್ಯರು ತಿಳಿಸಿದ್ದಾರೆ.

ಜಾತ್ರೆ ನಿಮಿತ್ತ ಮದ್ಯ ಮಾರಾಟ ನಿಷೇಧ: ಗೋಕಾಕ ಮಹಾಲಕ್ಷ್ಮೀ ದೇವಿ ಜಾತ್ರಾ ಮಹೋತ್ಸವಕ್ಕೆ ಲಕ್ಷಾಂತರ ಭಕ್ತರು ಏಕಕಾಲಕ್ಕೆ ಭಾಗವಹಿಸುತ್ತಿರುವ ಹಿನ್ನೆಲೆ ಮುನ್ನೆಚ್ಚರಿಕೆ ಕ್ರಮವಾಗಿ ಜಾತ್ರೆಯ ರಥ-'ೋತ್ಸವ ನಡೆಯುವ ಎರಡು ದಿನ ಮುಂಚೆ ಹಾಗೂ ರಥೋತ್ಸವ ನಡೆದ ಎರಡು ದಿನ ಸೇರಿದಂತೆ ಒಟ್ಟು 5 ದಿನ ದೇವಸ್ಥಾನದ 10 ಕಿಮೀ ವ್ಯಾಪ್ತಿ ಮದ್ಯ ಮಾರಾಟ ಸಂಪೂರ್ಣ ನಿಷೇಧಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್ ತಿಳಿಸಿದ್ದಾರೆ.

# ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳು ನಡೆಯುತ್ತಿವೆ - ಸಂಸದ ಕೆ.ರಾಜಶೇಖರ ಹಿಟ್ನಾಳ

ಕೊಪ್ಪಳ : ಜನರ ಆಶೀರ್ವಾದದಿಂದ 2024ರ ಜೂನ್‌ನಲ್ಲಿ ಸಂಸದನಾಗಿ ಆಯ್ಕೆಯಾದ ನಂತರ ಕೊಪ್ಪಳ ಲೋಕಸಭಾ ಕ್ಷೇತ್ರದಲ್ಲಿ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಲಾಗುತ್ತಿದೆ ಎಂದು ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ ಹೇಳಿದರು.



ಅವರು ಶುಕ್ರವಾರ ಕೊಪ್ಪಳ ಜಿಲ್ಲಾಡಳಿತ ಭವನದಲ್ಲಿರುವ ಲೋಕಸಭಾ ಸದಸ್ಯರ ಕಛೇರಿಯಲ್ಲಿ ತಾವು ಸಂಸದರಾಗಿ ಒಂದು ವರ್ಷ ಪೂರೈಸಿರುವ ಹಿನ್ನೆಲೆಯಲ್ಲಿ ಈ ಅವಧಿಯಲ್ಲಿ ಮಾಡಿದ ಅಭಿವೃದ್ಧಿ ಕಾರ್ಯಕ್ರಮಗಳ ಕುರಿತು ಮಾಹಿತಿ ನೀಡಲು ಕರೆದ ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಎನ್.ಹೆಚ್.ಎಐ ರಸ್ತೆಗಳಲ್ಲಿ ಕೆಲವು ಸಮಸ್ಯೆಗಳಿದ್ದು, ವಿಶೇಷವಾಗಿ ಎನ್.ಹೆಚ್-50ರಲ್ಲಿ ಟೋಲ್‌ಗೇಟ್ ನಿಂದ ಟನಲ್ ಬಳಿ ಬಹಳಷ್ಟು ಅಪಘಾತಗಳಾಗುತ್ತಿದ್ದವು. ಇದರಿಂದ ಪ್ರತಿವರ್ಷ 100 ಜನರ ಸಾವು ಉಂಟಾಗುತ್ತಿತ್ತು. ಈ ಸಮಸ್ಯೆಯನ್ನು ತಡೆಯಲು ಓವರ್ ಬ್ರಿಡ್ಜ್ ಮಾಡಬೇಕೆಂದು ಮಾಜಿ ಸಂಸದರಾದ ಕರಡಿ ಸಂಗಣ್ಣನವರು ಪ್ರಯತ್ನ ಮಾಡಿದ್ದರು. ನಾನು ಸಂಸದನಾದ ನಂತರ ಟೆಂಡರ್ ಮಾಡಿಸಿ, ಹೊಸಲಿಂಗಾಪುರ ಕ್ರಾಸ್, ಹೊಸಳ್ಳಿ ಕ್ರಾಸ್, ಹಿಟ್ನಾಳ್ ಕ್ರಾಸ್ ಮೆತಗಲ್ ಕ್ರಾಸ್ ಸೇರಿದಂತೆ ರೂ. 1190 ಲಕ್ಷಗಳ ಅನುದಾನದಲ್ಲಿ ನಾಲ್ಕು ಫ್ಲೈಓವರ್ ನಿರ್ಮಾಣ ಮಾಡಲಾಗುತ್ತಿದ್ದು, ಕಾಮಗಾರಿ ಪ್ರಗತಿಯಲ್ಲಿದೆ. ಪ್ರಸ್ತುತ ಅಪಘಾತ ಪ್ರಮಾಣ ಶೇ.70ರಷ್ಟು ಕಡಿಮೆಯಾಗಿದ್ದು, ರಸ್ತೆ ಅಪಘಾತ ಪ್ರಮಾಣವನ್ನು ಶೂನ್ಯಕ್ಕೆ ತರುವ ಪ್ರಯತ್ನ ಮಾಡಲಾಗುವುದು. ರಾಷ್ಟ್ರೀಯ ಹೆದ್ದಾರಿ 50ರಲ್ಲಿ ರಸ್ತೆ ಅಪಘಾತಗಳನ್ನು ತಡೆಗಟ್ಟಲು ವಾಹನ ವೇಗ ನಿಯಂತ್ರಣ ಮಾಡಲು ಸೆಕ್ಯೂರಿಟಿ ಸಿಸ್ಟಮ್ & ಸಿಸಿ ಟಿವಿ ಅಳವಡಿಕೆಗಾಗಿ ಕೇಂದ್ರ ಸಾರಿಗೆ ಸಚಿವರಾದ ನಿತಿನ್ ಗಡ್ಕರಿ ಅವರಿಗೆ ಮನವಿ ಮಾಡಿದ್ದು, ಇದಕ್ಕಾಗಿ ರೂ. 2 ಕೋಟಿಗಳನ್ನು ಮಂಜೂರು ಮಾಡಿದ ಕೇಂದ್ರ ರಸ್ತೆ ಸಾರಿಗೆ ಸಚಿವರಿಗೆ ಅಭಿನಂದನೆಯನ್ನು ಸಲ್ಲಿಸಲು ಬಯಸುತ್ತೇನೆ. ಈ ಕಾಮಗಾರಿಗಳು ಪ್ರಗತಿಯಲ್ಲಿವೆ ಎಂದರು.

ಅಂಚೆ ಇಲಾಖೆಯಿಂದ ಇನ್ಸೂರೆನ್ಸ್, ಪಿಂಚಣಿ, ಆರ್.ಡಿ ಸೇರಿದಂತೆ ಹಲವಾರು ಪೋಸ್ಟಲ್ ಸೇವೆಗಳು ಸಾರ್ವಜನಿಕರಿಗೆ ಸಿಗುತ್ತಿವೆ. ಆದರೆ, ಅಂಚೆ ಕಛೇರಿಗೆ ಬರುವ ಸಾರ್ವಜನಿಕ-ರಿಗೆ ಮೂಲಭೂತ ಸೌಕರ್ಯಗಳ ಕೊರತೆಯಿದ್ದು, ಸಿ.ಎಸ್.ಆರ್ ಅನುದಾನದಲ್ಲಿ ರೂ. 13.50 ಲಕ್ಷಗಳ ವೆಚ್ಚದಲ್ಲಿ ಪ್ರಾಥಮಿಕ ಹಂತದಲ್ಲಿ ಕುಣಿಕೇರಿ ಮತ್ತು ಹಿರೇಬಗನಾಳ ಗ್ರಾಮಗಳಲ್ಲಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆ ಮತ್ತು ಗುಳದಳ್ಳಿ ಗ್ರಾಮದಲ್ಲಿ ಭೂಮಿ ಪೂಜೆ ಮಾಡಲಾಗಿದೆ. ನಮ್ಮ ಜಿಲ್ಲೆಯಲ್ಲಿ 182 ಪೋಸ್ಟ್ ಆಫೀಸ್‌ಗಳಿದ್ದು, ಇವುಗಳ ಅಭಿವೃದ್ಧಿಗಾಗಿ ಜಿಲ್ಲೆಯ ವಿವಿಧ ಕಂಪನಿಗಳಿಗೆ ಮನವಿ ಮಾಡಲಾಗಿದೆ. ಎಕ್ಸ್ ಇಂಡಿಯಾದವರು ಮತ್ತು ಮುಕುಂದ್ ಕಂಪನಿಯವರು ತಲಾ ಎರಡು ಅಂಚೆ ಕಛೇರಿಯ ಕಟ್ಟಡಗಳನ್ನು ಮಾಡುತ್ತಿದ್ದಾರೆ ಹಾಗೂ ಕಿರ್ಲೋಸ್ಕರ್ ಮತ್ತು ಕಲ್ಯಾಣಿ ಕಂಪನಿಯವರು ತಲಾ 15 ಅಂಚೆ ಕಛೇರಿಯ ಕಟ್ಟಡಗಳನ್ನು ಮಾಡುವುದಾಗಿ ಹೇಳಿದ್ದಾರೆ. ಈ ವರ್ಷ ಸುಮಾರು 35 ರಿಂದ 40 ಪೋಸ್ಟ್ ಆಫೀಸ್ ಕಟ್ಟಡಗಳನ್ನು ನಿರ್ಮಾಣ ಮಾಡಿ, ಜನರಿಗೆ ಅನುಕೂಲ ಮಾಡಿಕೊಡಲಾಗುವುದು ಎಂದು ಹೇಳಿದರು.

ಎಂ.ಜಿ.ಎನ್.ಆರ್.ಇ.ಜಿ ಅನುದಾನದಲ್ಲಿ ಕೊಪ್ಪಳ ಜಿಲ್ಲಾ ಪಂಚಾಯತ್ ದತ್ತುಗ್ರಾಮ ಯೋಜನೆಯ ಮೊದಲ ಹಂತದಲ್ಲಿ ಕಾಮನೂರ ಮತ್ತು ಮೋರನಾಳ ಗ್ರಾಮಗಳನ್ನು ದತ್ತು ತೆಗೆದುಕೊಂಡು ವಿವಿಧ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದು, ಕಾಮಗಾರಿಗಳು ಪ್ರಗತಿಯಲ್ಲಿವೆ. ಎರಡನೇ ಹಂತದಲ್ಲಿ ಜಿಲ್ಲೆಯ ಆಯಾ ವಿಧಾನಸಭಾ ವ್ಯಾಪ್ತಿಯಲ್ಲಿ ಕುಷ್ಟಗಿ ತಾಲ್ಲೂಕಿನ ಹಯಲೇಗೇರಿ ಮತ್ತು ಮುದೇನೂರ, ಗಂಗಾವತಿ ತಾಲ್ಲೂಕಿನ ಸಂಗಾಪೂರ, ಕಾರಟಗಿ ತಾಲ್ಲೂಕಿನ ಬೇನ್ನೂರ ಮತ್ತು ಕಕ್ಕರಗೋಳ, ಯಲಬುರ್ಗಾ ತಾಲ್ಲೂಕಿನ ಹಿರೇಮ್ಯಾಗೇರಿ ಹಾಗೂ ಕೊಪ್ಪಳ ತಾಲ್ಲೂಕಿನ ಮಾದಿನೂರ, ಈ ಎಲ್ಲಾ ಗ್ರಾಮಗಳನ್ನು ದತ್ತು ಗ್ರಾಮಗಳಾಗಿ ಆಯ್ಕೆ ಮಾಡಲಾಗಿದ್ದು, ಕ್ರೀಯಾ ಯೋಜನೆ ಅನುಮೋದನೆಗೆ ಬಾಕಿ ಇರುತ್ತದೆ ಎಂದರು.

ಎಸ್.ಎಸ್.ಎಲ್.ಸಿ ಫಲಿತಾಂಶದಲ್ಲಿ ಕೊಪ್ಪಳ ಜಿಲ್ಲೆಯ ಫಲಿತಾಂಶವು ಕಡಿಮೆಯಿದ್ದು, ಈ ಪ್ರಮಾಣವನ್ನು ಹೆಚ್ಚಿಸಲು ಸಾರ್ವಜನಿಕ ಶಿಕ್ಷಣ ಇಲಾಖೆಯಿಂದ ಏಕ ಮಾದ-ರಿಯ ತರಗತಿ ಮತ್ತು ಸ್ಮಾರ್ಟ ಕ್ಲಾಸ್ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದ್ದು, ಕಾಮಗಾರಿ ಪ್ರಗತಿಯಲ್ಲಿವೆ. ಜಿಲ್ಲೆಯ ಎಲ್ಲಾ ಶಾಲೆಗಳಿಗೆ ಬಿ.ಎಸ್.ಎನ್.ಎಲ್ ಮೂಲಕ ಅಂತರ್ಜಾಲ ಸಂಪರ್ಕ ಕಲ್ಪಿಸಲು ಮನವಿ ಮಾಡಿದ್ದೇವೆ. ಈಗಾಗಲೇ ಪ್ರಾಥಮಿಕ ಹಂತದಲ್ಲಿ 43 ಶಾಲೆಗಳಿಗೆ ಅಂತರ್ಜಾಲ ಸಂಪರ್ಕ ಕಲ್ಪಿಸಲು ಶಾಲೆಗಳನ್ನು ಆಯ್ಕೆ ಮಾಡಲಾಗಿದೆ. ಬಾಕಿ ಶಾಲೆಗಳಿಗೆ ಅಂತರ್ಜಾಲ ಸೌಲಭ್ಯ ಕಲ್ಪಿಸಲು ಸರ್ವೇ ಕಾರ್ಯ ಪ್ರಗತಿಯಲ್ಲಿದೆ ಎಂದರು.

ರೈಲ್ವೆ ನಿಲ್ದಾಣಗಳ ಹೆಸರು ಬದಲಾವಣೆ ಮಾಡಲು ಭಾನಾಪೂರ ರೈಲು ನಿಲ್ದಾಣಕ್ಕೆ ಮಹಾತ್ಮ ಗಾಂಧಿ, ಗಂಗಾವತಿ ರೈಲು ನಿಲ್ದಾಣಕ್ಕೆ ಕಿಷ್ಕಿಂದಾ ಮತ್ತು ಮುನಿರಾಬಾದ್ ರೈಲು ನಿಲ್ದಾಣಕ್ಕೆ ಹುಲಿಗೇಮ್ಮದೇವಿ ರೈಲ್ವೆ ನಿಲ್ದಾಣ ಎಂದು ನಾಮಕರಣ ಮಾಡಲು ಮನವಿ ಸಲ್ಲಿಸಿದ್ದು, ರಾಜ್ಯ ಸರ್ಕಾರದಿಂದ ಕೇಂದ್ರಕ್ಕೆ ಪ್ರಸ್ತಾವನೆ ಹೋಗಬೇಕಿದೆ. ಈ ಹೆಸರುಗಳಿಂದ ಐತಿಹಾಸಿಕ ಸ್ಥಳಗಳ ಬಗ್ಗೆ ಜಾಗೃತಿ ಮೂಡಿಸಿದಂತಾಗುತ್ತದೆ. ಹುಲಿಗೇಮ್ಮದೇವಿ ದೇವಸ್ಥಾನ ಸಮಗ್ರ ಅಭಿವೃದ್ಧಿಗಾಗಿ ಪ್ರವಾಸೋದ್ಯೋಮ ಇಲಾಖೆಯಿಂದ ಕೇಂದ್ರ ಸರ್ಕಾರದ ಪ್ರಸಾದ್-2 ಯೋಜನೆಯಡಿ 169 ಕೋಟಿ ರೂ.ಗಳ ಅನುದಾನದಲ್ಲಿ ವಿಸ್ತೃತ ಯೋಜನಾ ವರದಿಯೊಂದಿಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿರುತ್ತದೆ ಎಂದು ಹೇಳಿದರು.

ಸಿಂಧನೂರ ಪಟ್ಟಣದಲ್ಲಿ ಹೊಸ ಕೇಂದ್ರಿಯ ವಿದ್ಯಾಲಯ 2025-26ನೇ ಸಾಲಿನ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಅನುಮೋದನೆಯಾಗಿದೆ. ಇದರ ಜೊತೆಗೆ ಬಾಗಲಕೋಟ-ಗಂಗಾವತಿ ಹೊಸ ರೈಲ್ವೆ ಲೈನ್ ನಿರ್ಮಾಣ ಕಾಮಗಾರಿಗೆ 2025-26ನೇ ಸಾಲಿನ ಕೇಂದ್ರ ಸರ್ಕಾರದ ಬಜೆಟ್‌ನಲ್ಲಿ ಅನುಮೋದನೆ ದೊರೆತಿದೆ.

ಸಂಸದರ ಪ್ರದೇಶಾಭಿವೃದ್ಧಿ ಅನುದಾನದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಡಿ ಕೇಲವು ರಸ್ತೆ ಮತ್ತು ಪೇವರ್ಸ್ ಅಳವಡಿಸುವ ಕಾಮಗಾರಿಗಳು ಮುಕ್ತಾಯಗೊಂಡಿರುತ್ತವೆ. ಕೊಪ್ಪಳ ಪಟ್ಟಣದ ಉಪ ಪ್ರಾದೇಶಿಕ ಕೇಂದ್ರದಲ್ಲಿ ತಾತ್ಕಾಲಿಕ ಕೌಶಲ್ಯಾಭಿವೃದ್ಧಿ ಕೇಂದ್ರ ನಿರ್ಮಾಣ ಕಾಮಗಾರಿಯಡಿ ಕೆ.ಆರ್.ಐ.ಡಿ.ಎಲ್ ಮೂಲಕ ಕೃತಕ ಬುದ್ದಿಮತ್ತೆ ತರಬೇತಿ ಕೇಂದ್ರ ಕಾಮಗಾರಿ ಭೂಮಿ ಪೂಜೆ ಮಾಡುವುದು ಬಾಕಿ ಇದೆ ಎಂದರು.

ಪವರ್ ಗ್ರಿಡ್ ಕಾರ್ಪೋರೇಷನ್ ಇವರಿಂದ ಸಿ.ಎಸ್.ಆರ್ ಅನುದಾನದಡಿ 2 ಮಾದರಿ ಶಾಲೆಗಳ ನಿರ್ಮಾಣ, ಲೋಕೋಪಯೋಗಿ ಇಲಾಖೆಯಿಂದ ರಾಷ್ಟ್ರೀಯ ಹೆದ್ದಾರಿ-150ಎ ರಲ್ಲಿ 7 ಮೇಲ್ಸೆತುವೆ ನಿರ್ಮಾಣ ಕಾಮಗಾರಿಗಳಿಗೆ ರೂ. 23.88 ಕೋಟಿ ಅನುದಾನದಡಿ ಗುಡದೂರ, ರಂಗಾಪೂರ, ಮುದ್ದಾಪೂರ ಕ್ರಾಸ್, ಎಲೆಕುಡ್ಲಗಿ, ಬಸಾಪೂರ, ಕಲ್ಲೂರ ಮತ್ತು ಸಿಂಧನೂರಗಳಲ್ಲಿ ಮೇಲ್ಸೆತುವೆ ನಿರ್ಮಾಣ ಕಾಮಗಾರಿ ಮಾಡಲಾಗುತ್ತದೆ. ಇದರ ಭೂಮಿ ಪೂಜೆ ಮಾಡುವುದು ಬಾಕಿ ಇರುತ್ತದೆ ಎಂದು ಹೇಳಿದರು.

ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದಿಂದ ಸಿರಗುಪ್ಪ ಪಟ್ಟಣದಲ್ಲಿ ಒನ್ ಟೈಮ್ ಇಂಪ್ರುಮೆಂಟ್ ರೋಡ್ (ಔಟಿಜ ಣುಟಜ ುಟಠಿಡಿಾತಜಟಜಟಣ ಖಂಚಿಜ) ನಿರ್ಮಾಣ ಕಾಮಗಾರಿಗಾಗಿ ರೂ. 60 ಕೋಟಿ ವೆಚ್ಚದಲ್ಲಿ ಕೊಪ್ಪಳದಲ್ಲಿ ಈಗಾಗಲೇ ನಿರ್ಮಾಣ ಮಾಡಲಾಗಿರುವ ಸಿಮೆಂಟದ ರಸ್ತೆ ಮಾದರಿಯಲ್ಲಿ ಈ ಕಾಮಗಾರಿಯನ್ನು ಕೈಗೊಳ್ಳಲಾಗುವುದು. ನಬಾರ್ಡ ವತಿಯಿಂದ ಕೊಪ್ಪಳ ಲೋಕಸಭಾ ಕ್ಷೇತ್ರದ ವ್ಯಾಪ್ತಿಯ ಮೆತಗಲ್ ಗ್ರಾಮದಲ್ಲಿ ಆಹಾರ ಸಂಸ್ಕರಣ ಘಟಕವನ್ನು 4 ಕೋಟಿ ವೆಚ್ಚದಲ್ಲಿ ನಿರ್ಮಾಣ ಮಾಡಲು ಯೋಜನೆ ರೂಪಿಸಲಾಗಿದ್ದು, ಕಾಮಗಾರಿ ಪ್ರಾರಂಭಿಸುವುದು ಬಾಕಿ ಇದೆ ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಸಂಸದರ ಆಪ್ತ ಸಹಾಯಕರಾದ ಅರುಣ, ವೀರಭದ್ರಪ್ಪ ನಾಯಕ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಸಹಾಯಕ ನಿರ್ದೇಶಕ ಡಾ. ಸುರೇಶ್ ಜಿ. ಸೇರಿದಂತೆ ವಿವಿಧ ಮಾಧ್ಯಮ ಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ನೌಕರರ ಭವಿಷ್ಯ ನಿಧಿ: ಹೈಯರ್ ಪೆನ್ಷನ್ ಸಮಸ್ಯೆಗೆ ಶೀಘ್ರ ಪರಿಹಾರ ಸಚಿವೆ ಶೋಭಾ ಕರಂದ್ಲಾಜೆ ಭರವಸೆ




ಬೆಂಗಳೂರು : ನೌಕರರ ಭವಿಷ್ಯ ನಿಧಿ ಯೋಜನೆ ಅಡಿ ಬರುವ "ಹೈಯರ್ ಪೆನ್ಷನ್ ಸ್ಕೀಜಿಮ್" ನಲ್ಲಿ ಉಂಟಾಗಿರುವ ಸಮಸ್ಯೆಯನ್ನು ಅತಿ ಶೀಘ್ರವಾಗಿ ಪರಿಹಾರ ಮಾಡುವುದಾಗಿ ಕೇಂದ್ರ ಕಾರ್ಮಿಕ ಖಾತೆ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ ಅವರು ಶನಿವಾರ ತಮ್ಮನ್ನು ಭೇಟಿ ಮಾಡಿದ ಹಿರಿಯ ಪತ್ರಕರ್ತರ ನಿಯೋಗಕ್ಕೆ ಭರವಸೆ ನೀಡಿದರು.

ಕರ್ನಾಟಕದ ಅನೇಕ ಪತ್ರಕರ್ತರು ಸುಪ್ರೀಂ ಕೋರ್ಟ್ ಆದೇಶದ ಅನ್ವಯ ಹೈಯರ್ ಪೆನ್ಷನ್ ಪಡೆಯುವ ಬಗ್ಗೆ ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಗೆ ಅರ್ಜಿ ಸಲ್ಲಿಸಿದ್ದಾರೆ. ಅವು ಅನೇಕ ತಿಂಗಳಿನಿಂದ ಇತ್ಯರ್ಥ-ರ್ಕ ಕಾಣದೆ ಪತ್ರಕರ್ತರು ಅದರಲ್ಲೂ ನಿವೃತ್ತ ನೌಕರರು ತೀವ್ರ ಆರ್ಥಿಕ ಸಮಸ್ಯೆಗೆ ತುತ್ತಾಗಿರುವ ಸಂಗತಿಯನ್ನು ನಿಯೋಗ ಸಚಿವರ ಗಮನಕ್ಕೆ ತಂದಿತು. ಅನೇಕ ಪತ್ರಕರ್ತರು ಪ್ರಾದೇಶಿಕ ಭವಿಷ್ಯ ನಿಧಿ ಕಚೇರಿಯಿಂದ ಬಂದ ಡಿಮ್ಯಾಂಡ್ ನೋಟ್ ಅನುಸಾರ ಹೆಚ್ಚುವರಿ ಮೊತ್ತವನ್ನು ಜನವರಿ ತಿಂಗಳಲ್ಲೇ ಪಾವತಿ ಮಾಡಿದ್ದಾರೆ, ಇದುವರೆವಿಗೂ ಇದು ಇತ್ಯರ್ಥವಾಗಿಲ್ಲ. ಆರು ತಿಂಗಳಿನಿಂದ ಕಟ್ಟಿದ ದುಡ್ಡಿಗೆ ಬಡ್ಡಿಯೂ ಇಲ್ಲ ಹೆಚ್ಚಿನ ಪೆನ್ಷನ್ನೂ ಇಲ್ಲ ಎಂಬ ಸ್ಥಿತಿ ನಿರ್ಮಾಣವಾಗಿದೆ ಎಂದು ನಿಯೋಗ ವಾಸ್ತವ ಚಿತ್ರಣವನ್ನು ಸಚಿವರ ಮುಂದೆ ತೆರೆದಿಟ್ಟಿತು.

ಈ ಸಮಸ್ಯೆಗೆ ಕೂಡಲೇ ಸ್ಪಂದಿಸಿದ ಸಚಿವೆ ಶೋಭಾ ಕರಂದ್ಲಾಜೆ , ಈಗಾಗಲೇ ಡಿಮಾಂಡ್ ನೋಟ್ ವಿತರಿಸಿ ಹಣ ಕಟ್ಟಿಸಿಕೊಂಡ ಉದ್ಯೋಗಿಗಳ ಅರ್ಜಿಯನ್ನು ಕೂಡಲೇ ಇತ್ಯರ್ಥ ಪಡಿಸಲು ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಇನ್ನು ಕೆಲವು ಸಂಸ್ಥೆಗಳ ಭವಿಷ್ಯ ನಿಧಿಯನ್ನು ಆಯಾ ಸಂಸ್ಥೆಗಳ ಟ್ರಸ್ಟ್ ಗಳೇ ನಡೆಸುತ್ತಿದ್ದು ತಾಂತ್ರಿಕ ಕಾರಣದ ಮೇಲೆ ಇಂಥ ಅರ್ಜಿಗಳು ತಿರಸ್ಕಾರ ಗೊಂಡಿರುವ ಸಂಗತಿಯನ್ನು ಸಚಿವರ ಗಮನಕ್ಕೆ ತರಲಾಯಿತು. ಈ ವಿಷಯ ಸರ್ಕಾರದ ಮಟ್ಟದಲ್ಲಿ ಈಗಾಗಲೇ ಚರ್ಚೆಯಲ್ಲಿದ್ದು ಅತಿ ಶೀಘ್ರದಲ್ಲೇ ಪರಿಹಾರ ಹುಡುಕುವ ಭರವಸೆ ನೀಡಿದರು.

ನಿಯೋಗದಲ್ಲಿ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಶಿವಾನಂದ ತಗಡೂರು, ಹಿರಿಯ ಪತ್ರಕರ್ತರಾದ , ಶ್ರೀವತ್ಸ ನಾಡಿಗ್, ನೆತ್ತನಕೆರೆ ಉದಯಶಂಕರ, ಎಂ ನಾಗರಾಜ, ,ಬಿ ಎನ್ ರಾಘವೇಂದ್ರ, ವಾದಿರಾಜ ದೇಸಾಯಿ, ಚಂದ್ರಶೇಖರ ಮತ್ತು ಹನುಮೇಶ್ ಕೆ ಯಾವಗಲ್ ಇದ್ದರು.

# ಆರ್ಥಿಕ ಸೇರ್ಪಡೆ ಯೋಜನೆಗಳ ಸ್ಯಾಚುರೇಶನ್ ಅಭಿಯಾನ

ಕಾರವಾರ, ಹಣಕಾಸು ಸೇವೆಗಳ ಇಲಾಖೆ, ಭಾರತ ಸರ್ಕಾರ ಇವರ ನಿರ್ದೇಶನದಂತೆ ಉತ್ತರ ಕನ್ನಡ ಜಿಲ್ಲೆಯ ಎಲ್ಲಾ 229 ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಜುಲೈ 1 ರಿಂದ ಸೆಪ್ಟೆಂಬರ 30 ರ ವರೆಗೆ ಆರ್ಥಿಕ ಸೇರ್ಪಡೆ ಯೋಜನೆಗಳ ಸ್ಯಾಚುರೇಶನ್ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ.

ಈ ಅಭಿಯಾನದಲ್ಲಿ ಎಲ್ಲಾ ನಿಷ್ಕ್ರಿಯ ಬ್ಯಾಂಕ ಖಾತೆಗಳ ಮರು ಏಜಅ ಮಾಡಿಸುವುದು.ಬ್ಯಾಂಕನಲ್ಲಿ ಖಾತೆಯನ್ನು ಹೊಂದಿಲ್ಲದವರಿಗೆ ಹೊಸ ಖಾತೆಯನ್ನು ತೆರೆಯುವುದು.

ಪ್ರಧಾನಮಂತ್ರಿ ಜೀವನಜ್ಯೋತಿ ವಿಮೆ ಮತ್ತು ಪ್ರಧಾನಮಂತ್ರಿ ಸುರಕ್ಷಾ ವಿಮಾ ಯೋಜನೆಗಳನ್ನು ಮಾಡಿಸುವುದು. ಅಟಲ್ ಪಿಂಚಣಿ ಯೀಜನೆಯನ್ನು ಮಾಡಿಸುವುದು.

ಡಿಜಿಟಲ್ ಸೈಬರ್ ವಂಚನೆಗಳ ಬಗ್ಗೆ ಜಾಗ್ರತಿ ಮೂಡಿಸಲಾಗುವುದು.

ಗ್ರಾಮ ಪಂಚಾಯಿತಿಗಳಲ್ಲಿ ಅಭಿಯಾನ ನಡೆಯುವ ದಿನಾಂಕಗಳನ್ನು ಗ್ರಾಮ ಪಂಚಾಯಿತಿ ವತಿಯಿಂದ ಮತ್ತು ಬ್ಯಾಂಕ್ ವತಿಯಿಂದ ಮುಂಚಿತವಾಗಿ ತಿಳಿಸಲಾಗುವುದು. ಎಲ್ಲಾ ನಾಗರೀಕರು ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಅಭಿಯಾನ ನಡೆಯುವ ದಿನಾಂಕಗಳನ್ನು ತಿಳಿದುಕೊಂಡು ಅಗತ್ಯ ಧಾಖಲೆಗಳೊಂದಿಗೆ ಭೇಟಿ ನೀಡಿ ಈ ಎಲ್ಲ ಸೌಲಭ್ಯಗಳ ಪ್ರಯೋಜನವನ್ನು ಪಡೆದುಕೊಳುವಂತೆ ಲೀಡ್ ಬ್ಯಾಂಕ್ ಮೆನೇಜರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಂಠಿ ಕುಟುಂಬಕ್ಕೆ ಮಾಜಿ ಶಾಸಕ ನಡಹಳ್ಳಿ ಸಾಂತ್ವನ
## ಇತ್ತೀಚೆಗೆ ನಿಧನರಾಗಿದ್ದ ಪುರಸಭೆಯ ಬಿಜೆಪಿ ಸದಸ್ಯ ಚನ್ನಪ್ಪ ಕಂಠಿ



ಮುದ್ದೇಬಿಹಾಳ: ನಗರದ ವೀರಶೈವ ಲಿಂಗಾಯತ ಸಮಾಜದ ಹಿರಿಯರು ಮುಖಂಡರು ಹಾಗೂ ಪುರಸಭೆ ಸದಸ್ಯರಾದ ಚನ್ನಪ್ಪ ಕಂಠಿ ಅಕಾಲಿಕ ನಿಧನದ ಹಿನ್ನಲೆಯಲ್ಲಿ ಬಿಜೆಪಿ ರೈತ ಮೋರ್ಚಾ ರಾಜ್ಯಾಧ್ಯಕ್ಷ ಹಾಗೂ ಮಾಜಿ ಶಾಸಕ ಎ. ಎಸ್.ಪಾಟೀಲ್ (ನಡಹಳ್ಳಿ) ಅವರು ಹಾಗೂ ಪಕ್ಷದ ಮುಖಂಡರು, ಕಾರ್ಯಕರ್ತರು ವಿರೇಶ್ವರ ನಗರ ಬಡಾವಣೆಯ ಕಂಠಿ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದವರಿಗೆ ಸಾಂತ್ವನ ಹೇಳಿದರು. ಇದೇ ವೇಳೆ ಮಾತನಾಡಿದ ಅವರು, ಲಿಂಗಾಯತ ಸಮುದಾಯದ ನಾಯಕರಾಗಿ, ಮಾರ್ಗದರ್ಶಕ ಮತ್ತು ದಾರ್ಶನಿಕನ ಗುಣಗಳನ್ನು ಸಾಕಾರಗೊಳಿಸಿದ ಗಮನಾರ್ಹ ವ್ಯಕ್ತಿಯಾಗಿದ್ದರು. ಎಲ್ಲರಿಗೂ ಪ್ರಿಯರಾಗಿ ಉತ್ತಮ ಮಾರ್ಗದರ್ಶಕರಾಗಿದ್ದರು. ತಾಲೂಕಿನ ಲಿಂಗಾಯತ ಸಮಾಜಕ್ಕೆ ಮಾತ್ರವಲ್ಲದೇ ಎಲ್ಲ ಸಮಾಜಕ್ಕೂ ಹಿರಿಯ ಮಾರ್ಗದರ್ಶಕರಾಗಿದ್ದರು. ಅವರ ದೈನಂದಿನ ಚಟುವಟಿಕೆಗಳು ಇಂದಿನ ಯುವ ಪೀಳಿಗೆಗೆ ಪ್ರೇರಣೆಯಾಗಬೇಕಿದೆ. ಅವರನ್ನು ಕಳೆದುಕೊಂಡ ಪಕ್ಷಕ್ಕೆ ಹಾಗೂ ಪಟ್ಟಣದ ವ್ಯಾಪಾರಸ್ಥ ಸಂಘಗಳಿಗೆ ಮತ್ತು ಲಿಂಗಾಯತ ಸಮುದಾಯಕ್ಕೆ ತುಂಬಲಾರದ ನಷ್ಟವಾಗಿದೆ. ಭಗವಂತ ಅವರ ಆತ್ಮಕ್ಕೆ ಶಾಂತಿ ನೀಡಲಿ ಅವರ ಕುಟುಂಬಕ್ಕೆ ಧುಃಖ ಭರಿಸುವ ಶಕ್ತಿ ನೀಡಲಿ ಎಂದು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಹಿರಿಯ ಮುಖಂಡ ಪ್ರಭು ಕಡಿ, ಮಾಣಿಕ ದಂಡಾವತಿ,ಶ್ರೀ ಶೈಲ್ ದೊಡಮನಿ,ರಾಜು ಬಳ್ಳೊಳ್ಳಿ,ಆಶೋಕ ಚಿನಿವಾರ, ಪರಶುರಾಮ ನಾಲತವಾಡ,ಮಂಡಲ ಪ್ರ. ಕಾರ್ಯದರ್ಶಿ ಸಂಜು ಬಾಗೇವಾಡಿ, ಗೌರಮ್ಮ ಹುನಗುಂದ,ಸಂಗನಗೌಡ ಬಿರಾದಾರ, ಗುರು ಕಡಿ, ಶರಣು ಸಜ್ಜನ, ಮಹಾಂತೇಶ ಮಡಿವಾಳರ, ಶಂಕರ ಕಡಿ, ಶರಣು ಪಡದಾಳೆ,ಸೇರಿದಂತೆ ಉಪಸ್ಥಿತರಿದ್ದರು.

# ಫಾಸ್ಟ್ ಫುಡ್ ತಯಾರಿಕೆ ತರಬೇತಿಗಾಗಿ ಅರ್ಜಿ ಆಹ್ವಾನ

ಕಾರವಾರ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಜುಲೈ ತಿಂಗಳ ಎರಡನೆಯ ವಾರದಿಂದ 12 ದಿನಗಳ ಕಾಲ ನಿರುದ್ಯೋಗಿ ಪುರುಷ ಹಾಗೂ ಮಹಿಳೆಯರಿಗೆ ಉಚಿತ ಫಾಸ್ಟ್ ಫುಡ್ ತಯಾರಿಕೆ ತರಬೇತಿ ಶಿಬಿರವನ್ನು ಏರ್ಪಡಿಸಿದೆ.

ಶಿಬಿರದಲ್ಲಿ ಪಾನಿ ಪುರಿ, ಬೇಲ್ ಪೂರಿ, ದಹಿ ಪೂರಿ, ಸೇವ್ ಪೂರಿ, ಚಾಟ್ ಮಸಾಲ, ಕಚೋರಿ, ಗೋಬಿ ಮಂಚೂರಿ ಇನ್ನಿತರೆ ಚಾಟ್ಸ್ ಗಳ ತಯಾರಿಕೆಯ ಬಗ್ಗೆ ತರಬೇತಿ ನೀಡಲಾಗುವುದು.

ಸ್ವಯಂ ಉದ್ಯೋಗಿಗಳಾಗಲು ಬಯಸುವ 18 ರಿಂದ 45 ವರ್ಷ ವಯಸ್ಸಿನ ಕರ್ನಾಟಕ ರಾಜ್ಯದ ಯಾವುದೇ ಜಿಲ್ಲೆಯ ನಿರುದ್ಯೋಗಿ ಪುರುಷ ಹಾಗೂ ಮಹಿಳೆಯರು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದಾಗಿದೆ. ಈ ಶಿಬಿರದ ಸಮಯದಲ್ಲಿ ತರಬೇತಿ, ಊಟ ಹಾಗೂ ವಸತಿ ಸೌಕರ್ಯಗಳು ಉಚಿತವಾಗಿ ಶಿಬಿರಾರ್ಥಿಗಳಿಗೆ ಕಲ್ಪಿಸಲಾಗುವುದು. ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳಿಗೆ ಮೊದಲ ಆದ್ಯತೆಯನ್ನು ನೀಡಲಾಗುವುದು. ಅಭ್ಯರ್ಥಿಗಳು ಸ್ಥಳಿಯ ಭಾಷೆ ಬಲ್ಲವರಾಗಿದ್ದು, ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ತರಬೇತಿ ನಂತರ ಕೇಂದ್ರ ಸರ್ಕಾರದ ಗ್ರಾಮೀಣ ಸಚಿವಾಲಯದಿಂದ ಪ್ರಮಾಣ ಪತ್ರವನ್ನು ವಿತರಿಸಲಾಗುವುದು

ಆಸಕ್ತಿಯುಳ್ಳ ಅಭ್ಯರ್ಥಿಗಳು ಜುಲೈ 2 ರಂದು ಬೆಳಗ್ಗೆ 11 ಘಂಟೆಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ, ಸೊಣ್ಣಹಳ್ಳಿಪುರ, ಹಸಿಗಾಳ (ಅಂಚೆ), ಹೊಸಕೋಟೆ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇಲ್ಲಿ ನಡೆಯುವ ನೇರ ಸಂದರ್ಶನಕ್ಕೆ ವಿದ್ಯಾರ್ಹತೆಗಳೊಂದಿಗೆ ಮತ್ತು ವಿಳಾಸ ದಾಖಲಾತಿಗಳೊಂದಿಗೆ ಹಾಜರಾಗಬೇಕು.

ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯನ್ನು ದೂರವಾಣಿ ಸಂಖ್ಯೆ 9505894247, 8970476050, 9591514754, 9686248369, 8970446644 ಮೂಲಕ ಸಂಪರ್ಕಿಸಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೊಪ್ಪಳ-ಸೌರ ಕೃಷಿ ಉದ್ಯೋಗ ಉತ್ಸವ
## ಸೌರ ಕೃಷಿ, ಉದ್ಯೋಗದಿಂದ ಜನರ ತಲಾ ಆದಾಯ ಹೆಚ್ಚಾಗಲಿದೆ - ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ

ಕೊಪ್ಪಳ : ಪರಿಸರ ಸ್ನೇಹಿಯಾಗಿರುವ ಸೌರ ಕೃಷಿ ಮತ್ತು ಸೌರ ಉದ್ಯೋಗದಿಂದ ಜನರ ತಲಾ ಆದಾಯ ಹೆಚ್ಚಾಗಲಿದೆ ಎಂದು ಜಿಲ್ಲಾಧಿಕಾರಿ ಸುರೇಶ್ ಬಿ. ಇಟ್ನಾಳ ಹೇಳಿದರು.




ಅವರು ಗುರುವಾರ ಕೊಪ್ಪಳ ಭಾಗ್ಯನಗರ ರಸ್ತೆಯ ಕಠಾರೆ ಕಲ್ಯಾಣ ಮಂಟಪದದಲ್ಲಿ ಕೊಪ್ಪಳ ಜಿಲ್ಲಾಡಳಿ, ಜಿಲ್ಲಾ ಪಂಚಾಯತ್, ಕೃಷಿ ಇಲಾಖೆ ಹಾಗೂ ಸೆಲ್ಕೋ ಫೌಂಡೇಶನ್ ವತಿಯಿಂದ ಆಯೋಜಿಸಲಾಗಿದ್ದ "ಕೊಪ್ಪಳ-ಸೌರ ಕೃಷಿ ಉದ್ಯೋಗ ಉತ್ಸವ" ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಹಿಂದುಳಿದ ಪ್ರದೇಶವಾಗಿರುವ ಕೊಪ್ಪಳ ಜಿಲ್ಲೆಯಲ್ಲಿ ಬಹುತೇಕ ಜನರು ಕೃಷಿ ಅವಲಂಭಿತರಾಗಿದ್ದು, ಶೇ. 75ರಷ್ಟು ಒಣ ಬೆಸಾಯ ಹಾಗೂ ಶೇ. 25ರಷ್ಟು ಮಾತ್ರ ನೀರಾವರಿ ಹೊಂದಿದೆ. ಮಳೆಯಾಶ್ರಿತ ಅಥವಾ ನೀರಾವರಿ ಯಾವುದೇ ಬೆಳೆಯಾಗಿರಲಿ ರೈತರಿಗೆ ಉತ್ತಮ ಬೆಲೆ ಸಿಗುವಂತಾಗಬೇಕು. ರೈತರು ಶ್ರಮವಹಿಸಿ ಬೆಳೆದ ಬೆಳೆಗಳಿಗೆ ಮಾರುಕಟ್ಟೆಯಲ್ಲಿ ನಿರೀಕ್ಷೆಯಂತೆ ಬೆಲೆ ಸಿಗುವುದಿಲ್ಲ. ರೈತರು ತಮ್ಮ ಬೆಳೆಗಳಿಂದ ವಿವಿಧ ಬಗೆಯ ಉತ್ಪನ್ನಗಳನ್ನು ಸಿದ್ದಪಡಿಸಿ ಮಾರಾಟ ಮಾಡಿದರೆ, ಅದಕ್ಕೆ ಹೆಚ್ಚಿನ ಮೌಲ್ಯ ಸಿಗಲಿದೆ. ಈ ಹಿನ್ನೆಲೆಯಲ್ಲಿ ಮೌಲ್ಯವರ್ಧನೆಗೆ ನಾವು ಹೆಚ್ಚಿನ ಒತ್ತು ಕೊಡಬೇಕು. ಅಂದಾಗ ಮಾತ್ರ ರೈತರು ಬೆಳೆದ ಬೆಳೆಗಳಿಗೆ ಇನ್ನೂ ಹೆಚ್ಚಿನ ಬೆಲೆ ಸಿಗಲು ಸಾಧ್ಯವಾಗಲಿದೆ. ರೈತರು ಸೌರ ಶಕ್ತಿಯಿಂದ ಬಳಕೆಯಾಗುವ ಕೃಷಿ ಯಂತ್ರೋಪಕರಣಗಳು ಹಾಗೂ ಇತರ ಉತ್ಪನ್ನಗಳ ಬಳಕೆ ಮಾಡಿಕೊಂಡು ತಮ್ಮ ಆದಾಯವನ್ನು ಹೆಚ್ಚಿಸಿಕೊಳ್ಳಬೇಕು. ಮೇಣದ ಬತ್ತಿ ಉತ್ಪಾದನೆ, ರೊಟ್ಟಿ ತಯಾರಿಕೆ, ಶ್ಯಾವಿಗೆ, ಚಕ್ಕಲಿ, ಆಲುಗಡ್ಡೆ ಚಿಪ್ಸ್ ಹಾಗೂ ಇತರೆ ಆಹಾರ ಪದಾಥ-ರ್ಗಗಳನ್ನು ತಯಾರಿಸುವ ಸೌರ ಶಕ್ತಿಯ ಯಂತ್ರೋಪಕರಣಗಳನ್ನು ಕೃಷಿ ಮಹಿಳೆಯರು ಮತ್ತು ಮಹಿಳಾ ಸ್ವಸಹಾಯ ಸಂಘಗಳ ಸದಸ್ಯರು ಬಳಕೆ ಮಾಡಿಕೊಂಡರೆ ಎಲ್ಲರಿಗೂ ಜೀವನೋಪಾಯವಾಗಲಿದೆ ಎಂದರು.

ಸೆಲ್ಕೋ ಫೌಂಡೇಶನ್ ಜೊತೆಗೆ ಸುಮಾರು ಮೂರು ವರ್ಷಗಳಿಂದ ನನಗೆ ಸಂಪರ್ಕವಿದ್ದು, ಈ ಹಿಂದೆ ದಾವಣಗೆರೆ ಮತ್ತು ಧಾರವಾಡ ಜಿಲ್ಲಾ ಪಂಚಾಯತ್ ಸಿಇಓ ಆಗಿದ್ದ ಸಂದರ್ಭದಲ್ಲಿ ಇವರ ಜೊತೆಗೆ ಸಾಕಷ್ಟು ಕೆಲಸಗಳನ್ನು ಮಾಡಿದ್ದೇನೆ. ಸ್ಮಾರ್ಟ್ ಕ್ಲಾಸ್, ಆರೋಗ್ಯ ಕೇಂದ್ರಕ್ಕೆ ಸೋಲಾರ್ ಅಳವಡಿಕೆ ಮತ್ತು ಪಿ.ಎಂ.ಎಫ್.ಎಫ್ ಯೋಜನೆಯಡಿ ಕಿರು ಸಂಸ್ಕರಣೆ, ಎನ್.ಆರ್.ಎಲ್.ಎಂ., ವನಧನ ವಿಕಾಸ ಕೇಂದ್ರ ಹೀಗೆ ಎಲ್ಲದರಲ್ಲೂ ಸೋಲಾರ ಬಳಕೆಗಾಗಿ ಉತ್ತೇಜನವನ್ನು ಕೊಟ್ಟಿದ್ದೇವೆ ಎಂದರು.

ಸೆಲ್ಕೋ ಫೌಂಡೇಶನ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹರೀಶ್ ಹಂದೆ ಅವರು ಮಾತನಾಡಿ, ಸೌರ ಶಕ್ತಿ ಬಳಕೆಯಲ್ಲಿ ವಿವಿಧ ತಂತ್ರಜ್ಞಾನಗಳನ್ನು ಅಭಿವೃದ್ಧಿ ಪಡಿಸಲಾಗಿದ್ದು, ಇಂದಿನ ಕೃಷಿ ಮತ್ತು ಉದ್ಯೋಗದಲ್ಲಿ ಸೌರ ಶಕ್ತಿಯ ಬಳಕೆ ಅತ್ಯವಶ್ಯಕವಾಗಿದೆ. ಕೊಪ್ಪಳ ಜಿಲ್ಲೆಯಲ್ಲಿ ಒಂದು ವರ್ಷದೊಳಗೆ ಒಂದು ಸಾವಿರ ಸೌರ ಶಕ್ತಿ ಚಾಲಿತ ಸಿರಿಧಾನ್ಯ ಸಂಸ್ಕರಣ ಘಟಕಗಳ ಸ್ಥಾಪನೆ ಗು-ರಿಯನ್ನು ಹೊಂದಲಾಗಿದೆ. ಇದರಿಂದ ಕೊಪ್ಪಳ ಜಿಲ್ಲೆಯು ಇಡೀ ದೇಶಕ್ಕೆ ಮಾದ-ರಿಯಾಗಲಿದೆ. ಸೌರ ಯಂತ್ರೋಪಕರಣಗಳ ಬಳಕೆಯಲ್ಲಿ ಯಾವುದೇ ಸಮಸ್ಯೆ ಇದ್ದರೆ, ನಮ್ಮ ಸಂಸ್ಥೆಯ ಪ್ರತಿನಿಧಿಗಳಿಗೆ ಹೇಳಿ, ಅವರು ತ್ವರಿತವಾಗಿ ಸರಿಪಡಿಸುವ ಕೆಲಸವನ್ನು ಮಾಡುವರು ಎಂದು ಹೇಳಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಟಿ.ಎಸ್. ರುದ್ರೇಶಪ್ಪ ಅವರು ಮಾತನಾಡಿ, ಸೌರ ಶಕ್ತಿ ಬಳಕೆಯಿಂದ ಕೃಷಿಗೆ ಸಂಬಂಧಿಸಿದ ಯಂತ್ರಗಳು, ಸ್ವಯಂ ಉದ್ಯೋಗಕ್ಕಾಗಿ ಬೇಕಾಗುವ ಯಂತ್ರೋಪಕರಣಗಳನ್ನು ಸಹಾಯಧನ ರೂಪದಲ್ಲಿ ನೀಡಲಾಗುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಳ್ಳಬೇಕು. ರೈತರಿಗೆ ಮತ್ತು ಸ್ವ ಸಹಾಯ ಗುಂಪಿನ ಮಹಿಳೆಯರು ಸೌರ ತಂತ್ರಜ್ಞಾನಗಳನ್ನು ಬಳಕೆ ಮಾಡಿಕೊಂಡು ತಮ್ಮ ಆದಾಯವನ್ನು ಮತ್ತಷ್ಟು ಬಲಪಡಿಸಿಕೊಳ್ಳಬಹುದಾಗಿದೆ ಎಂದರು.

ಗಮನ ಸೆಳೆದ ಪ್ರದರ್ಶನ ಮಳಿಗೆಗಳು: ಕೊಪ್ಪಳ-ಸೌರ ಕೃಷಿ ಉದ್ಯೋಗ ಉತ್ಸವದಲ್ಲಿ ಕೃಷಿಗೆ ಸಂಬಂಧಿಸಿದ ಸೌರ ಶಕ್ತಿಯ ಯಂತ್ರಗಳಾದ ಮಿನಿ ಟ್ರ್ಯಾಕ್ಟರ್, ರೈತರ ಬೆಳೆಗಳಿಗೆ ರಸಾಯನಿಕ ಸಿಂಪಡಿಸುವ ಡ್ರೋನ್ ಯಂತ್ರ, ಭತ್ತದ ಮಿಲ್ಲಿಂಗ್ ಕಿರು ಯಂತ್ರಗಳು, ಎಣ್ಣೆ ಗಾಣದ ಯಂತ್ರ ಮತ್ತು ಇತರೆ ಕೃಷಿ ಯಂತ್ರೋಪಕರಣಗಳು ಹಾಗೂ ಸ್ವಯಂ ಉದ್ಯೋಗಕ್ಕೆ ಸಂಬಂಧಿಸಿದ ಶ್ಯಾವಿಗೆ, ಚಕ್ಕಲಿ, ಆಲುಗಡ್ಡೆ ಚಿಪ್ಸ್ ತಯಾರಿಕೆಯ ಸೌರ ಶಕ್ತಿಯ ಯಂತ್ರಗಳು ಹಾಗೂ ಸಿರಿಧಾನ್ಯ ಮಳಿಗೆ ಪ್ರದರ್ಶನಗಳನ್ನು ಜಿಲ್ಲಾಧಿಕಾರಿಗಳು ವೀಕ್ಷಣೆ ಮಾಡಿದರು. ಈ ಸಂದರ್ಭದಲ್ಲಿ ಕೃಷಿ ಇಲಾಖೆಯ ಅಧಿಕಾ-ರಿಗಳು ಸೆಲ್ಕೋ ಫೌಂಡೇಶನ್ ಪ್ರತಿನಿಧಿಗಳು ಹಾಗೂ ರೈತರು ಸೇರಿದಂತೆ ಇತರರು ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕೊಪ್ಪಳ ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೃಷ್ಣ ಉಕ್ಕುಂದ, ಪಶು ಇಲಾಖೆ ಉಪನಿರ್ದೇಶಕ ಡಾ. ಪಿ.ಎಂ. ಮಲ್ಲಯ್ಯ, ನಬಾರ್ಡ್ ಕಾರ್ಯಕ್ರಮ ಅಧಿಕಾರಿ ಮಾಹದೇವ ಕೀರ್ತಿ, ಕೊಪ್ಪಳ ಕೃಷಿ ವಿಸ್ತರಣಾ ಕೇಂದ್ರದ ಡಾ. ಎಂ.ವಿ ರವಿ, ಶ್ರೀನಿವಾಸ ಕುಲಕರ್ಣಿ, ಡಾ. ಎಂ.ಪಿ ಪಾಟೀಲ್, ಪ್ರಗತಿಪರ ರೈತರಾದ ಡಾ. ದೇವೇಂದ್ರಪ್ಪ ಬಳೂಟಗಿ, ಕೃಷಿಕ ಮಹಿಳೆಯರಾದ ಮಂಗಳ, ಗೀತಾ ಸಜ್ಜನ್ ಸೇರಿದಂತೆ ಸೆಲ್ಕೊ ಫೌಂಡೇಶನ್ ತಂತ್ರಜ್ಞರು, ಜಿಲ್ಲೆಯ ರೈತರು, ಸಂಜೀವಿನಿ ಮತ್ತು ಎನ್.ಆರ್.ಎಲ್.ಎಂ, ಸ್ವಸಹಾಯ ಗುಂಪುಗಳ ಸದಸ್ಯರು ಉಪಸ್ಥಿತರಿದ್ದರು. ಸೆಲ್ಕೋ ಫೌಂಡೇಶನ್ ಪ್ರಕಾಶ ಮೇಟಿ ಅವರು ಸ್ವಾಗತಿಸಿದರು.

# ಪ್ರತಿ ಮನೆಗಳಿಗೆ ಶುದ್ಧ ಕುಡಿಯುವ ನೀರು ಒದಗಿಸು ಉದ್ದೇಶದಿಂದ ಕೇಂದ್ರ ಸರ್ಕಾರ ಜಲ ಜೀವನ ಮೀಷನ ಯೋಜನೆ

ರಾಯಬಾಗ: ದೇಶದ ಪ್ರತಿ ಮನೆಗಳಿಗೆ ಶುದ್ಧ ಕುಡಿಯುವ ನೀರು ಒದಗಿಸು ಉದ್ದೇಶದಿಂದ ಕೇಂದ್ರ ಸರ್ಕಾರ ಜಲ ಜೀವನ ಮೀಷನ ಯೋಜನೆ ಜಾರಿಗೆ ತಂದಿದ್ದು, ಇದರ ಸದುಪಯೋಗವನ್ನು ಎಲ್ಲರೂ ಪಡೆದುಕೊಳ್ಳಬೇಕೆಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶನಿವಾರ ರಾಯಬಾಗ ಗ್ರಾಮೀಣ ಭಾಗದ ಆನೆಬಾಯಿಕೋಡಿಯಲ್ಲಿ ಗ್ರಾಮೀಣ ಕುಡಿಯುವ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆಯಿಂದ ಜೆಜೆಎಮ್ ಯೋಜನೆಯಡಿ ಮಂಜೂರಾದ 2 ಕೋಟಿ 54 ಲಕ್ಷ ರೂ.



ಅನುದಾನದಲ್ಲಿ 966 ಮನೆಗಳಿಗೆ ನಳ ಸಂಪರ್ಕ, 5 ಮೇಲ್ಮಟ್ಟದ ಜಲಸಂಗ್ರಾಲಯ ಕಾಮಗಾರಿ ಚಾಲನೆ ನೀಡಿ ಮಾತನಾಡಿದ ಅವರು, ಗ್ರಾಮೀಣ ಭಾಗಗಳಲ್ಲಿ ಪ್ರಮುಖವಾಗಿ ನೀರಿನ ಸೌರ್ಯ ಮತ್ತು ರಸ್ತೆಗಳನ್ನು ಸುಧಾರಿಸುವುದರಿಂದ ಜನ-ರಿಗೆ ಹೆಚ್ಚಿನ ಅನುಕೂಲವಾಗಲಿದೆ ಎಂದರು. ಎಇಇ ಸುಭಾಷ ಭಜಂತ್ರಿ, ಜೆಇ ಲೋಹಿತ ಕಾಂಬಳೆ, ಸದಾನಂದ ಹಳಿಂಗಳಿ, ಅಣ್ಣಾಸಾಹೇಬ ಖೆಮಲಾಪೂರೆ,ಸಂತೋಷ ದೀಪಾಳೆ,ಬಾದಶಾ ಡಾಂಗೆ, ಮಜ್ಜಿದ ಡಾಂಗೆ, ವಸಂತ ಕಾಂಬಳೆ, ಸಿದ್ದಪ್ಪ ಪುಜೇರಿ, ನಿಂಗಪ್ಪ ಪೂಜೇರಿ, ಕೇಶವ ಹವಾಲ್ದಾರ, ಸುಹಾಸ ಪುಜೇರಿ,ಅಶೋಕ ಶಿಂಗೆ, ಶಂಕರ ಗಂಗನ್ನವರ, ಗೋಪಾಲ ಕೋಚೆರಿ, ಪ್ರಕಾಶ ಹೆಗಡೆ,ಗೋಪಾಲ ನಿಡಗುಂದಿ,ರಂಜಾನ ಮಕಾಂದಾರ, ಬಸಪ್ಪ ಖಿಲಾರೆ, ಅಝಾದ ಡಾಂಗೆ, ರಮೇಶ ಕಾಂಬಳೆ ಸೇರಿದಂತೆ ಅನೇಕರು ಇದ್ದರು.

# ಸಾರ್ವಜನಿಕರ ಬೇಡಿಕೆಗಳ ಕ್ರಿಯಾ ಯೋಜನೆಯಲ್ಲಿ ಅಳವಡಿಸಿ: ಸುಷಮಾ ಗೋಡಬೋಲೆ

ಕಾರವಾರ, ಜಿಲ್ಲಾ ಪಂಚಾಯತ್ ವತಿಯಿಂದ ರೂಪಿಸುವ ವಾರ್ಷಿಕ ಕ್ರಿಯಾ ಯೋಜನೆಯ ಸಂದರ್ಭದಲ್ಲಿ ಅಧಿಕಾರಿಗಳು ಸಾರ್ವಜನಿಕರಿಂದ ಸಲ್ಲಿಕೆಯಾಗುವ ಬೇಡಿಕೆಗಳ ಕುರಿತ ಕಾಮಗಾರಿಗಳನ್ನು ಅಳವಡಿಸಿ, ಅವುಗಳನ್ನು ಕಾರ್ಯರೂಪಕ್ಕೆ ತರುವ ಮೂಲಕ ಆಡಳಿತ ವ್ಯವಸ್ಥೆಯನ್ನು ಸಾರ್ವಜನಿಕ ಸ್ನೇಹಿಯನ್ನಾಗಿ ಮಾಡಬೇಕು ಎಂದು ಜಿಲ್ಲಾ ಪಂಚಾಯತ್‌ನ ಆಡಳಿತಾಧಿಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸುಷಮಾ ಗೋಡಬೋಲೆ ನಿರ್ದೇಶನ ನೀಡಿದರು.

ಅವರು ಗುರುವಾರ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಜರುಗಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಜಿಲ್ಲೆಯ ಎಲ್ಲಾ ಅಧಿಕಾರಿಗಳು ನಿಗಧಿತವಾಗಿ ತಮ್ಮ ವ್ಯಾಪ್ತಿಯ ತಾಲೂಕು ಕೇಂದ್ರಗಳಿಗೆ ಭೇಟಿ ನೀಡಬೇಕು ಅಲ್ಲಿನ ತಮ್ಮ ಕಾರ್ಯಕ್ಷೇತ್ರದಲ್ಲಿ ಪ್ರಗತಿಯನ್ನು ಪರಿಶೀಲಿಸಿ, ಸಾರ್ವಜನಿಕರ ಸಮಸ್ಯೆಗಳಿಗೆ ಸಕರಾತ್ಮಕವಾಗಿ ಸ್ಪಂದಿಸಿ ಅಗತ್ಯ ನೆರವು ಒದಗಿಸಬೇಕು, ವಾರ್ಷಿಕ ಕ್ರಿಯಾ ಯೋಜನೆ ರೂಪಿಸುವಾಗ ಸಾರ್ವಜನಿಕ–ರಿಂದ ಸ್ವೀಕೃತವಾಗಿರುವ ಬೇಡಿಕೆಗಳನ್ನು ಇದರಲ್ಲಿ ಅಳವಡಿಸಿ ಕಾಮಗಾರಿಗಳನ್ನು ಕೈಗೊಳ್ಳುವ ಮೂಲಕ ಸಾರ್ವಜನಿಕರಿಗೆ ಉತ್ತಮ ಆಡಳಿತ ಸೇವೆ ಒದಗಿಸಬೇಕು ಎಂದರು.



ಪ್ರಸ್ತುತ ಜಿಲ್ಲೆಯಲ್ಲಿನ 59 ಅಪೌಷ್ಠಿಕ ಮಕ್ಕಳಿಗೆ ಸೂಕ್ತ ಚಿಕಿತ್ಸೆ ನೀಡಿ ಪೌಷ್ಠಿಕರನ್ನಾಗಿ ಮಾಡುವಂತೆ ಹಾಗೂ ಈ ಮಕ್ಕಳ ಚಿಕಿತ್ಸೆಗಾಗಿ ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಚಿಕಿತ್ಸೆಗಾಗಿ ಪ್ರತ್ಯೇಕ ಹಾಸಿಗೆಯನ್ನು ಮೀಸಲಿಡುವಂತೆ ತಿಳಿಸಿದ ಅವರು, ಧಾರವಾಡ ಕೃಷಿ ವಿಶ್ವವಿದ್ಯಾಲಯದಲ್ಲಿರುವ ಪೌಷ್ಠಿಕ ಆಹಾರ ಘಟಕದ ತಜ್ಞರೊಂದಿಗೆ ಚರ್ಚಿಸಿ ಅಗತ್ಯ ಕ್ರಮ ಕೈಗೊಳ್ಳಿ ಎಂದರು.

ಜಿಲ್ಲೆಯ ಎಲ್ಲಾ ಸರಕಾರಿ ಕಚೇರಿ, ಹಾಸ್ಟೆಲ್‌ಗಳು, ವೈದ್ಯಕೀಯ ಕೇಂದ್ರಗಳಲ್ಲಿರುವ ಅನುಪಯುಕ್ತ ಸಾಮಗ್ರಿಗಳು/ ಪೀಠೋಪಕರಣಗಳನ್ನು ನಿಯಮಾವಳಿಯಂತೆ ವಿಲೇವಾರಿ ಮಾಡಿ, ಕಚೇರಿಗಳನ್ನು ಸ್ವಚ್ಛವಾಗಿಟ್ಟುಕೊಳ್ಳುವುದಕ್ಕೆ ಆದ್ಯತೆ ನೀಡಿ, ಕಚೇರಿಯಲ್ಲಿನ ಕಡತಗಳನ್ನು ಸೂಕ್ತ ರೀತಿಯಲ್ಲಿ ವಿಂಗಡಿಸಿ ಸುಲಭವಾಗಿ ದೊರೆಯುವಂತೆ ಸಂರಕ್ಷಿಸಿಡುವಂತೆ ತಿಳಿಸಿದರು.

ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಂಗನವಾಡಿಗಳಿಗೆ ಸ್ವಂತ ಕಟ್ಟಡ ಒದಗಿಸುವ ನಿಟ್ಟಿನಲ್ಲಿ ಈಗಾಗಲೇ ನಿವೇಶನ ಲಭ್ಯವಿರುವ ಸ್ಥಳಗಳಲ್ಲಿ ಕಟ್ಟಡ ನಿರ್ಮಾಣ ಕಾಮಗಾರಿ ಕೈಗೊಳ್ಳುವಂತೆ ಮತ್ತು ಉಳಿದ ಕಡೆಗಳಲ್ಲಿ ಜಾಗ ಗುರುತಿಸುವ ಕಾರ್ಯ ಮಾಡುವಂತೆ ಸೂಚಿಸಿದ ಅವರು, ಎಲ್ಲಾ ಸರಕಾರಿ ಕಚೇರಿಗಳು ತಮ್ಮ ಕಟ್ಟಡಗಳ ಮೂಲ ದಾಖಲಾತಿಗಳನ್ನು ಮತ್ತು ಕಡತಗಳನ್ನು ಸೂಕ್ತ ರೀತಿಯಲ್ಲಿ ಸಂರಕ್ಷಿಸಿಡುವಂತೆ ತಿಳಿಸಿದರು.

ಮೆಟ್ರಿಕ್ ನಂತರದ ಹಾಸ್ಟೆಲ್‌ಗಳಲ್ಲಿ ಮತ್ತು ಕ್ರೀಡಾ ಹಾಸ್ಟೆಲ್‌ಗಳಲ್ಲಿನ ವಿದ್ಯಾರ್ಥಿಗಳಿಗೆ ಭೋದನಾ ಕಲಿಕೆಗೆ ಅಗತ್ಯವಿರುವ ಪುಸ್ತಕಗಳನ್ನು ಮತ್ತು ಸ್ಪರ್ಧಾತ್ಮಕ ಪರೀಕ್ಷೆಗೆ ನೆರವಾಗುವ ಪುಸ್ತಕಗಳನ್ನು ಒದಗಿಸುವಂತೆ ಹಾಗೂ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಸೂಚನೆ ನೀಡಿದರು.

ಮಳೆಗಾಲದಲ್ಲಿ ಕಲುಷಿತ ನೀರು ಸೇವನೆಯ ಘಟನೆಗಳು ಸಂಭವಿಸದಂತೆ ಜಾಗೃತಿ ವಹಿಸುವಂತೆ ಹಾಗೂ ನೀರಿನ ಮೂಲಗಳನ್ನು ನಿಗಧಿಯಂತೆ ಲ್ಯಾಬ್‌ಗಳಲ್ಲಿ ಪರೀಕ್ಷೆಗೆ ಒಳಪಡಿಸುವಂತೆ ಸೂಚಿಸಿದ ಅವರು ಜಿಲ್ಲೆಯಲ್ಲಿನ ಕುಡಿಯುವ ನೀರಿನ ಜಲಮೂಲಗಳ ಸಂರಕ್ಷಣೆ ಹಾಗೂ ಅವುಗಳ ಮರುಪೂರಣಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ತಿಳಿಸಿದರು.

ಜಿಲ್ಲೆಯಲ್ಲಿನ ಎಲ್ಲಾ ಇಲಾಖಾಧಿಕಾ–ರಿಗಳು ತಮ್ಮ ಪ್ರವಾಸ ಸಂದರ್ಭದಲ್ಲಿ ಇತರೇ ಇಲಾಖೆಗಳಲ್ಲಿನ ಪ್ರದೇಶದಲ್ಲಿ ಸಮಸ್ಯೆಗಳು ಕಂಡುಬಂದಲ್ಲಿ ಅದನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸುವ ಮೂಲಕ, ಪರಸ್ಪರ ಸಮನ್ವಯದಿಂದ ಜಿಲ್ಲೆಯ ಅಭಿವೃದ್ಧಿಗೆ ಕಾರ್ಯನಿರ್ವಹಿಸುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ನ 2024–25 ನೇ ಸಾಲಿನ ವಾರ್ಷಿಕ ಲೆಕ್ಕಪತ್ರ ಅನುಮೋದನೆ, 2025–26 ರ ಆಯವ್ಯಯ ಮಂಡನೆ ಹಾಗೂ ಲಿಂಕ್ ಡಾಕ್ಯೂಮೆಂಟ್ ಅಡಿ ಜಿಲ್ಲಾ ಪಂಚಾಯತ್ ಅಧೀನ ಇಲಾಖೆಗಳಿಗೆ ಹಂಚಿಕೆಯಾದ ಅನುದಾನಕ್ಕೆ ಕ್ರಿಯಾ ಯೋಜನೆ ಅನುಷ್ಠಾನಗೊಳಿಸಲು ಅನುಮೋದನೆ ಪಡೆಯಲಾಯಿತು.

ಜಿಲ್ಲಾಧಿಕಾರಿ ಕೆ.ಲಕ್ಷ್ಮೀಪ್ರಿಯಾ, ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಈಶ್ವರ ಕಾಂದೂ, ತರಬೇತಿ ನಿರತ ಐ.ಎ.ಎಸ್ ಅಧಿಕಾರಿ ಝುಪಿಶಾನ್ ಹಕ್ ಹಾಗೂ ಜಿಲ್ಲಾಮಟ್ಟದ ಅಧಿಕಾರಿಗಳು ಹಾಜರಿದ್ದರು.

****

# ಮಾದಕ ವಸ್ತುಗಳ ಜನಜಾಗೃತಿ ಅಭಿಯಾನ



ಕಾರವಾರ, ಅಂತರಾಷ್ಟ್ರೀಯ ಮಾದಕ ವಸ್ತು ವ್ಯಸನ ಮತ್ತು ಅಕ್ರಮ ಸಾಗಾಣಿಕೆ ವಿರೋಧಿ ದಿನದ ಅಂಗವಾಗಿ ಮಾದಕ ವಸ್ತುಗಳ ಜನಜಾಗೃತಿ ಅಭಿಯಾನ ಕಾರ್ಯಕ್ರಮವು ನಗರದ ಪೋಲೀಸ್ ಕಲ್ಯಾಣ ಮಂಟಪದಲ್ಲಿ ಗುರುವಾರ ನಡೆಯಿತು.

ಕಾರ್ಯಕ್ರಮದಲ್ಲಿ ಜಿಲ್ಲಾ ಪೊಲೀಸ್ ವ–ರಿಷ್ಠಾಧಿಕಾರಿ ನಾರಾಯಣ ಎಂ ಮಾತನಾಡಿ, ಕರ್ನಾಟಕ ಪೊಲೀಸ್ ಇಲಾಖೆ ವತಿಯಿಂದ ಇಂದು ರಾಜ್ಯಾದ್ಯಂತ ಯುವ ಜನತೆಯಲ್ಲಿ ಅರಿವು ಮೂಡಿಸಲು ಖಚಿಥಿ ಥಿಱ ಣಔ ಟುಜಿಜ, ಖಚಿಥಿ ಟಿಔ ಣಔ ಆಡಿಣಾಥಿ ಎಂಬ ಘೋಷ್ಯವಾಕ್ಯದೊಂದಿಗೆ ಅಂತಾರಾಷ್ಟ್ರೀಯ ಮಾದಕ ವಸ್ತು ವ್ಯಸನ ಮತ್ತು ಆಕ್ರಮ ಸಾಗಾಣಿಕೆ ವಿರೋಧಿ ದಿನವನ್ನು ಆಚರಿಸಲಾಗುತ್ತಿದೆ. ಕರ್ನಾಟಕವನ್ನು ಡ್ರಗ್ಸ್ ಮುಕ್ತ ರಾಜ್ಯವನ್ನಾಗಿಸಲು ಮುಖ್ಯಮಂತ್ರಿಗಳು ಮುಂದಾಗಿದ್ದು ಪೊಲೀಸ್ ಇಲಾಖೆಯಿಂದ ಮಾತ್ರ ಡ್ರಗ್ಸ್ ನಿಯಂತ್ರಿಸಲು ಸಾಧ್ಯವಿಲ್ಲ, ಈ ಕಾರ್ಯದಲ್ಲಿ ಪ್ರತಿಯೊಬ್ಬರು ಕೈಜೋಡಿಸಿ ಡ್ರಗ್ಸ್ ಮುಕ್ತ ರಾಜ್ಯಾವನ್ನಾಗಿಸಬೇಕು ಎಂದರು.

ಕ್ರಿಮ್ಸ್ ಆಸ್ಪತ್ರೆ ಮನೋರೋಗ ವಿಭಾಗದ ಪ್ರಾಧ್ಯಪಕ ಹಾಗೂ ಮುಖ್ಯಸ್ಥ ಡಾ. ವಿಜಯರಾಜ್ ಮಾತನಾಡಿ, ಮಾದಕ ವಸ್ತುಗಳ ಸುಲಭವಾಗಿ ದೊರೆಯುದರಿಂದ ಹುಚ್ಚು ಖೋಡಿ ಮನಸ್ಸು ಹದಿನಾರರ ವಯಸ್ಸು ಎನ್ನುವಂತೆ ಯುವಕರು ಹೆಚ್ಚಿನ ಸಂಖ್ಯೆಯಲ್ಲಿ ಮಾದಕ ವಸ್ತುಗಳಿಗೆ ಮಾರು ಹೋಗುತ್ತಾರೆ. ಒಂದು ಬಾರಿ ಮಾದಕ ವಸ್ತುಗಳನ್ನು ವ್ಯಸನವಾಗಿಸಿಕೊಂಡರೆ ಅದರಿಂದ ಹೊರ ಬರಲು ಸಾಧ್ಯವಾಗುವುದಿಲ್ಲ. ಇದರಿಂದ ಮಾನಸಿಕ ಮತ್ತು ದೈಹಿಕ ತೊಂದರೆ ಅನುಭವಿಸಬೇಕಾಗುತ್ತದೆ. ಯುವಕರು ಮಾದಕ ವಸ್ತುವಿನಂತೆ ಸೋಶಿಯಲ್ ಮೀಡಿಯಾಗು ಮಾರು ಹೋಗಬಾರದು, ಇದರಿಂದ ಅಮೂಲ್ಯವಾದ ಜೀವನ ಮತ್ತು ಗುರಿ ಮುಟ್ಟಲು ಸಾಧ್ಯವಿಲ್ಲ ಎಂದರು.

ಮಹಾನಟಿ ರನ್ನರ್ ಅಪ್ ಪ್ರಶಸ್ತಿ ವಿಜೇತೆ ಹಾಗೂ ನಟಿ ಶ್ವೇತಾ ಭಟ್ ಮಾದಕ ವಸ್ತು ವಿರೋಧಿ ದಿನದ ಪ್ರತಿಜ್ಞಾವಿಧಿ ಬೋಧಿಸಿ, ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚಾಗುತ್ತಿದ್ದು ಅದನ್ನು ನಿಯಂತ್ರಿಸಲು ಮತ್ತು ಡ್ರಗ್ಸ್ ಮುಕ್ತಾ ದೇಶವನ್ನಾಗಿಸಲು ಪ್ರತಿಯೊಬ್ಬರು ಕೈಜೋಡಿಸಬೇಕು, ಯಾರೂ ಕೂಡ ಪ್ಯಾಶನ್, ಕ್ಷಣಿಕ ಸುಖಕ್ಕಾಗಿ ಮಾದಕ ವಸ್ತುಗಳ ಸೇವನೆ ಮಾಡಬಾರದು ಮಾಡುವವರಿಗೆ ಪ್ರೋತ್ಸಾಹ ಸಹ ನೀಡದೆ ಇದರಿಂದ ಆಗುವ ದುಷ್ಪ–ರಿಣಾಗಳ ಬಗ್ಗೆ ಅರಿವು ಮೂಡಿಸಬೇಕು ಎಂದರು.

ಮಾಧಕ ವಸ್ತುಗಳ ಜಾಗೃತಿ ಕುರಿತು ವಿವಿಧ ಸ್ಪರ್ಧೆ ಆಯೋಜಿಸಲಾಗಿದ್ದು, ವಿಜೇತರಿಗೆ ಪ್ರಶಂಸಾ ಪತ್ರ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಜಗದೀಶ್ ಎಮ್, ಕೃಷ್ಣಮೂರ್ತಿ, ಕ್ರಿಮ್ಸ್‌ನ ನ್ಯಾಯಾ ವೈದ್ಯ ಶಾಸ್ತ್ರ ವಿಭಾಗ ಸಹಾಯಕ ಪ್ರಾಧ್ಯಪಕಿ ಡಾ. ಮಹಾಲಕ್ಷ್ಮೀ ಬಿ.ಕೆ, ಪೊಲೀಸ್ ಹಾಗೂ ಅಬಕಾರಿ ಇಲಾಖೆ ಅಧಿಕಾರಿ ಸಿಬ್ಬಂದಿಗಳು, ಎನ್‌ಕಾರ್ಡ ಕಮಿಟಿಯ ಸದಸ್ಯರು ಶಾಲಾ ಕಾಲೇಜು ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತರಿದ್ದರು.

ಸಭಾ ಕಾರ್ಯಕ್ರಮದ ಪೂರ್ವದಲ್ಲಿ ಶಿವಾಜಿ ಹೈಸ್ಕೂಲ್ ನಿಂದ ಪೊಲೀಸ್ ಕಲ್ಯಾಣ ಮಂಟಪ ಹಾಗೂ ಕಾರವಾರ ಬಸ್ ನಿಲ್ದಾಣದಿಂದ ಪೊಲೀಸ್ ಕಲ್ಯಾಣ ಮಂಟಪದವರೆಗೆ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರಿಂದ ರ‍್ಯಾಲಿ ನಡೆಯಿತು.

***

## ಕಾರವಾರ: ವಸತಿ ಸೌಲಭ್ಯ ಪಡೆಯಲು ಅರ್ಜಿ ಆಹ್ವಾನ

ಕಾರವಾರ, ಕೇಂದ್ರ ಸರ್ಕಾರದ ಪ್ರಧಾನ ಮಂತ್ರಿ ಆವಾಸ್ 2.0 ಯೋಜನೆಯಡಿ ನಗರದ ವಸತಿ ರಹಿತ ಹಾಗೂ ನಿವೇಶನ ರಹಿತ ಕುಟುಂಬಗಳಿಗೆ (ಕಚ್ಚಾ ಮನೆ ಹೊಂದಿರುವ) ವಸತಿ ಸೌಲಭ್ಯ ಕಲ್ಪಿಸಲು ಕೇಂದ್ರ ಸರ್ಕಾರದ ಗಟಿಜಿಜ ತಿಜಭ ಠಿಡಿಣಚಿಟ ನಲ್ಲಿ ಅರ್ಜಿ ಆಹ್ವಾನಿಸಲಾಗಿದ್ದು, ಕಾರವಾರ ನಗರಸಭಾ ವ್ಯಾಪ್ತಿಯೊಳಗಿನ ಎಲ್ಲಾ ವಾರ್ಡಗಳಲ್ಲಿರುವ ವಸತಿ ರಹಿತ (ಕಚ್ಚಾ ಮನೆ ಹೊಂದಿರುವ) ಮತ್ತು ನಿವೇಶನ ರಹಿತ ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಪಡೆಯಲು ಕೇಂದ್ರ ಸರ್ಕಾರದ **https//pmay.urban.gov.in** ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ. ಅರ್ಜಿ ಸಲ್ಲಿಸಲು ಜುಲೈ 15 (ಅರ್ಜಿ ಸಲ್ಲಿಸಿದ ಒಂದು ಪ್ರತಿಯನ್ನು ದಾಖಲೆಗಳೊಂದಿಗೆ ನಗರಸಭೆ ಕಚೇರಿಗೆ ಸಲ್ಲಿಸಲು ಸೂಚಿಸಿದೆ)
ಹೆಚ್ಚಿನ ಮಾಹಿತಿಗಾಗಿ ನಗರಸಭೆ ಕಚೇರಿಯ ಆಶ್ರಯ ಶಾಖೆಯನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಕಾರವಾರ ನಗರಸಭೆ ಪೌರಾಯುಕ್ತರು ಪ್ರಕಟಣೆ ತಿಳಿಸಿದೆ.

## ಇನ್‌ಸೆಕ್ಟ್ ಕಲೆಕ್ಟರ್ ಹುದ್ದೆ: ನೇರ ಸಂದರ್ಶನ

ಕಾರವಾರ, :ರಾಷ್ಟ್ರೀಯ ಆರೋಗ್ಯ ಅಭಿಯಾನ ಅಡಿಯಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ ಖಾಲಿ ಇರುವ ಇನ್‌ಸೆಕ್ಟ್ ಕಲೆಕ್ಟರ್ 1 ಹುದ್ದೆಗೆ ವಿಜ್ಞಾನ ವಿಷಯದಲ್ಲಿ ದ್ವಿತೀಯ ಪಿಯುಸಿ ವಿದ್ಯಾರ್ಹತೆ ಹೊಂದಿದ ಪರಿಶಿಷ್ಟ ಜಾತಿ ಅಭ್ಯರ್ಥಿಗಳಿಗೆ ಮೀಸಲಿದ್ದು, ಒಂದು ವೇಳೆ ಪರಿಶಿಷ್ಟ ಜಾತಿಯ ಅಭ್ಯರ್ಥಿಗಳು ಲಭ್ಯವಿಲ್ಲದಿದ್ದಲ್ಲಿ ನಿಯಮಾನುಸಾರ ಸಾಮಾನ್ಯ ಅಭ್ಯರ್ಥಿಗಳನ್ನು ಪರಿಗಣಿಸಲಾಗುವುದು ಆಸಕ್ತ ಅಭ್ಯರ್ಥಿಗಳು ಜೂ.30 ರಿಂದ ಜುಲೈ 2 ವರೆಗೆ ನೇರ ಸಂದರ್ಶನಕ್ಕೆ ಕಚೇರಿ ವೇಳೆಯಲ್ಲಿ ಜಿಲ್ಲಾ ರೋಗ ವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿಗಳ ಕಚೇರಿಯಲ್ಲಿ ಮೂಲ ದಾಖಲಾತಿಯೊಂದಿಗೆ ಹಾಜರಾಗಲು ಮತ್ತು ನೇರ ಸಂದರ್ಶನದ ದಿನಗಳಂದೆ ಮೂಲ ದಾಖಲಾತಿಗಳನ್ನು ಪರಿಶೀಲಿಸಲಾಗುವುದು ಎಂದ ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮೆಟ್ರಿಕ-ನಂತರದ ವಿದ್ಯಾರ್ಥಿಗಳ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಅರ್ಜಿ ಸಲ್ಲಿಸುವ ಅವಧಿ ಜುಲೈ 10 ವರೆಗೆ ವಿಸ್ತರಣೆ

ಧಾರವಾಡ : 2024–25ನೇ ಸಾಲಿನಲ್ಲಿ ಮೆಟ್ರಿಕ ನಂತರದ ಕೋರ್ಸಗಳಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಂದ ಶುಲ್ಕ ಮರುಪಾವತಿ ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿತ್ತು.
ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತ–ರಿಸುವಂತೆ ವಿದ್ಯಾರ್ಥಿಗಳು, ಶಿಕ್ಷಣ ಸಂಸ್ಥೆಗಳು ಮನವಿ ಸಲ್ಲಿಸಿದ್ದು, ಪ್ರಯುಕ್ತ ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಜುಲೈ 10, 2025 ರವರೆಗೆ ವಿಸ್ತರಿಸಲಾಗಿದೆ.
ಹೆಚ್ಚಿನ ಮಾಹಿತಿಗಾಗಿ ಇಲಾಖಾ ಸಹಾಯವಾಣಿ ದೂರವಾಣಿ ಸಂಖ್ಯೆ: 8050770005, ಅಥವಾ **bcwd-helpline@gmail.com** ಗೆ ಭೇಟಿ ನೀಡಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

### ಅರಣ್ಯ ಇಲಾಖೆ ಜೂನ್ 25 ಮತ್ತು ಜುಲೈ 5 ರಂದು ವಿವಿಧ ಮರಗಳ ತೆರವಿಗೆ ಬಹಿರಂಗ ಹರಾಜು

ಧಾರವಾಡ : ಹುಬ್ಬಳ್ಳಿ ಶಹರದ ವಿವಿಧ ಬಡಾವಣೆಗಳ ರಸ್ತೆ ಬದಿ ಹಾಗೂ ವಿವಿಧ ಕಚೇರಿ ಆವರಣದಲ್ಲಿ ಅಪಾಯಕಾರಿ ಸ್ಥಿತಿಯಲ್ಲಿರುವ 124 ಮರಗಳು ಮತ್ತು 159 ಟೊಂಗೆಗಳನ್ನು ತೆರುವುಗೊಳಿಸಲು ಹುಬ್ಬಳ್ಳಿ ವಲಯ ಅರಣ್ಯ ಅಧಿಕಾರಿ ಕಛೇ–ರಿಯಲ್ಲಿ ಜೂನ್ 25, 2025 ಮತ್ತು ಜುಲೈ 5, 2025 ರಂದು ಮಧ್ಯಾಹ್ನ 3 ಗಂಟೆಗೆ ಬಹಿರಂಗ ಹರಾಜು ಮಾಡಲಾಗುವುದು.
ಮರ ಸಂರಕ್ಷಣಾ ಕಾಯ್ದೆ 1976 ರ ಸೆಕ್ಷನ್ 8 (3) (ಗಿಖಖ) ರ ಸೆಕ್ಷನ್‌ಗಳಲ್ಲಿ ಅಗತ್ಯ ಪಡಿಸಿರುವಂತೆ ಈ ಬಗ್ಗೆ ತಕರಾರು ಸಲ್ಲಿಸ ಬಯಸುವವರು ತಮ್ಮ ತಕರಾರನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ ಧಾರವಾಡ ಉಪ ವಿಭಾಗ, ಧಾರವಾಡ ಹಾಗೂ ಧಾರವಾಡದ ಕೆ.ಸಿ.ಪಾರ್ಕ ಎದುರು ಅರಣ್ಯ ಸಂಕೀರ್ಣದಲ್ಲಿರುವ ಮರ ಅಧಿಕಾರಿಯವರಿಗೆ ಲಿಖಿತ ರೂಪದಲ್ಲಿ ಜೂನ್ 24, 2025 ರ ಒಳಗಾಗಿ ಸಲ್ಲಿಸಬಹುದಾಗಿದೆ ಎಂದು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಾರವಾರ ವಿಭಾಗದ ಹಲವು ತಾಲ್ಲೂಕುಗಳಲ್ಲಿ APT 2.0 ತಂತ್ರಾಂಶಕ್ಕೆ ಚಾಲನೆ

ಕಾರವಾರ, ಅಂಚೆ ಇಲಾಖೆಯ ನವೀಕರಿತ ತಂತ್ರಜ್ಞಾನವಾದ ಂಕಖ 2.0 ಅನ್ನು ಕಾರವಾರ ವಿಭಾಗದ ಕುಮಟಾ, ಹೊನ್ನಾವರ ಹಾಗೂ ಭಟ್ಕಳ ತಾಲ್ಲೂಕಿನ ವಿವಿಧ ಅಂಚೆ ಕಚೇರಿಗಳಲ್ಲಿ ಶನಿವಾರದಿಂದ ಕಾರ್ಯರೂಪಕ್ಕೆ ತರಲಾಗಿದೆ. ತಂತ್ರಜ್ಞಾನ ಆಧಾರಿತ ಸೇವೆಗಳ ಮೂಲಕ ಗ್ರಾಮೀಣ ಮತ್ತು ಶಾಖಾ ಅಂಚೆ ಕಚೇರಿಗಳಲ್ಲಿ ವೇಗ ಮತ್ತು ವೈಶಿಷ್ಟ್ಯತೆ ತುಂಬಲಿರುವ ನೂತನ ಸೌಲಭ್ಯ ಇದಾಗಿದ್ದು, ಈ ಯೋಜನೆಗೆ ಕುಮಟಾ ಹೆಡ್ ಪೋಸ್ಟ್ ಆಫೀಸ್‌ನಲ್ಲಿ ನಡೆದ ಸಮಾರಂಭದಲ್ಲಿ ಅಂಚೆ ಅಧೀಕ್ಷಕ ಧನಂಜಯ್ ಆಚಾರ್ಯ ಉದ್ಘಾಟಿಸಿದರು.
ಕಾರ್ಯಕ್ರಮದಲ್ಲಿ ಕುಮಟಾ ಸಬ್ ಡಿವಿಜನ್ ಪೋಸ್ಟ್ ಇನ್ಸ್‌ಪೆಕ್ಟರ್ ಗಿರೀಶ್ ಕುಮಾರ್ ಡಿ, ಕಾರವಾರ ವಿಭಾಗದ ಮಾರ್ಕೆಟಿಂಗ್ ಎಕ್ಸಿಕ್ಯೂಟಿವ್ ರಾಘವೇಂದ್ರ ಆಚಾರ್ಯ, ಹೆಡ್ ಪೋಸ್ಟ್ ಮಾಸ್ಟರ್ ಸಾವಿತ್ರಿ ಭಟ್ಟ, ಅಂಚೆ ಇಲಾಖೆ ಸಿಬ್ಬಂದಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.



ಈ ನೂತನ ವ್ಯವಸ್ಥೆ ಕುಮಟಾ ತಾಲೂಕಿನ ಬಂಕಿಕೊಡಲ, ಚಂದಾವರ, ಗೋಕರ್ಣ, ಗುಡೇ ಅಂಗಡಿ, ಹೆಗಡೆ, ಹಿರೇಗುತ್ತಿ, ಮಾದನಗೇರಿ, ಮಿರ್ಜಾನ್, ಕುಮಟಾ ಕೆನರಾ ಕಾಲೇಜು ರಸ್ತೆ ಕುಮಟಾ, ಕುಮಟಾ ಕಚೇರಿ, ಕಡತೋಕ ಹಾಗೂ ಹೊನ್ನಾವರ ತಾಲೂಕಿನ ಗೆರ್ ಸೊಪ್ಪ ಜ್ಯೋತಿನಗರ, ಅಡಿನಬಾಳ, ಹಳದಿಪುರ, ಕರ್ಕಿ, ಕಾಸರಗೋಡು, ಮಂಕಿ, ಮೇಲಿನ ಇಡಗುಂಜಿ, ಪ್ರಭಾತ್ ನಗರ, ಮತ್ತು ಭಟ್ಕಳ ತಾಲೂಕಿನ ಭಟ್ಕಳ ಬಜಾರ, ಭಟ್ಕಳ, ಕಾಯ್ಕಿಣಿ, ಮುರುಡೇಶ್ವರ, ಶಿರಾಲಿ ಬಜಾರ್, ಶಿರಾಲಿ ಅಂಚೆ ಕಚೇರಿ ಮತ್ತು ಇವುಗಳ ಅಡಿ ಬರುವ ಶಾಖಾ ಅಂಚೆ ಕಚೇರಿಗಳಲ್ಲಿ ಅಳವಡಿಸಿಕೊಳ್ಳಲಾಗಿದೆ.

# ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆ

ಹಾವೇರಿ: ಪ್ರಸಕ್ತ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾ–ರಿತ ಬೆಳೆ ವಿಮೆ ಯೋಜನೆ ಮುಂಗಾರು ಹಂಗಾಮಿನಲ್ಲಿ ಅನುಷ್ಠಾನಗೊಳಿಸಲು ಜಿಲ್ಲೆಯಲ್ಲಿ ತಾಲೂಕುವಾರು ಅನುಷ್ಠಾನಗೊಳಿಸಲು ಸರ್ಕಾರ ಮಂಜೂರಾತಿ ನೀಡಿದೆ ಎಂದು ತೋಟಗಾ–ರಿಕೆ ಉಪನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯ ಬ್ಯಾಡಗಿ, ಹಾನಗಲ್, ಹಿರೇಕೆರೂರು, ರಟ್ಟಿಹಳ್ಳಿ ಹಾಗೂ ಶಿಗ್ಗಾಂವ ತಾಲೂಕುಗಳಿಗೆ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆ ವಿಮೆ **(R-WB-CIS)** ಯೋಜನೆಯಡಿ 2025–26ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಅಡಿಕೆ, ಶುಂಠಿ, ಮಾವು ಮತ್ತು ಹಸಿಮೆಣಸಿನಕಾಯಿ ಬೆಳೆಗಳನ್ನು ಹಾಗೂ ಹಾವೇರಿ, ಸವಣೂರ ಮತ್ತು ರಾಣೇಬೆನ್ನೂರು ತಾಲೂಕುಗಳಿಗೆ ಹಸಿಮೆಣಸಿಕಾಯಿ ಹಾಗೂ ಮಾವು ಬೆಳೆಗಳಿಗೆ ಅಧಿಸೂಚಿಸಿ ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿದೆ. ಬೆಳೆ ಸಾಲ ಪಡೆದ ಮತ್ತು ಬೆಳೆ ಸಾಲ ಪಡೆಯದ ರೈತರಿಗೆ ವಿಮಾ ಮೊತ್ತ ಹಾಗೂ ಪಾವತಿಸಬೇಕಾದ ವಿಮಾ ಕಂತಿನ ಮೊತ್ತವು ಒಂದೇ ಆಗಿರುತ್ತದೆ. ರೈತರು ಪ್ರಸಕ್ತ ಸಾಲಿನ ಪಹಣಿ ಪತ್ರಿಕೆ, ಆಧಾರ ಕಾರ್ಡ ಝರಾಕ್ಸ್ ಪ್ರತಿ ಹಾಗೂ ಬ್ಯಾಂಕ ಪಾಸ್ ಬುಕ್ ಪ್ರತಿಯೊಂದಿಗೆ ಹತ್ತಿರದ ಗ್ರಾಮ–ಒನ್ ಕೇಂದ್ರ, ಅಥ–ವಾ ಬ್ಯಾಂಕಗಳಲ್ಲಿ ಅಥವಾ ಸಿ.ಎಸ್.ಸಿ. ಸೆಂಟರ್‌ಗಳಲ್ಲಿ ವಿಮಾ ಯೋಜನೆಯಡಿ ನೋಂದಾಯಿಸಿಕೊಳ್ಳಬೇಕು.

ಮರು ವಿನ್ಯಾಸಗೊಳಿಸಿದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾವೇರಿ ಜಿಲ್ಲೆಗೆ ಎಸ್.ಡಿ.ಎಫ್.ಸಿ. ಎರಗೋ ಜನರಲ್ ಇನ್ಸೂರೆನ್ಸ್ ಕಂಪನಿ ವಿಮಾ ಸಂಸ್ಥೆ ಹಂಚಿಕೆಯಾಗಿದೆ. ಬಸವರಾಜ ಹಿರೇಮಠ (ಮೊ.8150079660) ವಿಮೆ ಕಂಪನಿಯ ಪ್ರತಿನಿಧಿಯಾಗಿದ್ದಾರೆ.

ಪ್ರಸಕ್ತ 2025–26 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಮರು ವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆಯ ವಿಮ ಯೋಜನೆ **(R-WBCIS)** ಮುಂಗಾರು –2025 ಹಂಗಾಮಿನಲ್ಲಿ ಬೆಳೆ ವಿಮೆ ತುಂಬಿದ ರೈತರು ಕಾಲಕಾಲಕ್ಕೆ ಬೆಳೆ ಸಮೀಕ್ಷೆಯನ್ನು ಖುದ್ದಾಗಿ ತಾವೇ ಅಥವಾ ತಮ್ಮ ಗ್ರಾಮದ ಗ್ರಾಮ ಲೆಕ್ಕಾಧಿಕಾರಿ ಅಧೀನ ಪಿ ಆರ್ ಮುಖಾಂತರ ಕಡ್ಡಾಯವಾಗಿ ಮಾಡಿಸಬೇಕು. ಇಲ್ಲವಾದಲ್ಲಿ ಬೆಳೆ ವಿಮೆ ಕ್ಲೈಮ್ ಆಗುವುದಿಲ್ಲ. ಆದ್ದರಿಂದ ಬೆಳೆ ವಿಮೆ ತುಂಬಿದ ಎಲ್ಲಾ ರೈತರು ಬೆಳೆ ಸಮೀಕ್ಷೆಯನ್ನು ನಿಗದಿತ ಅವಧಿಯೊಳಗೆ ಕೈಗೊಳ್ಳಬೇಕು.

ಹೆಚ್ಚಿನ ಮಾಹಿತಿಗಾಗಿ ವಿಮಾ ಕಂಪನಿಯ ಪ್ರತಿನಿಧಿ ಅಥವಾ ತೋಟಗಾರಿಕೆ ಇಲಾಖೆಯ ಹೋಬಳಿ ಮಟ್ಟದ ಸಹಾಯಕ ತೋಟಗಾ–ರಿಕೆ ಅಧಿಕಾರಿಗಳನ್ನು ಅಥವಾ ತೋಟಗಾ–ರಿಕೆ ಇಲಾಖೆಯ ತಾಲೂಕ ಮಟ್ಟದ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಟಕ ಕಲೆಯನ್ನು ಉಳಿಸಿ ಬೆಳೆಸಿ




ರಬಕವಿ–ಬನಹಟ್ಟಿ,ಜೂ28: ನಮ್ಮಿಂದ ದೂರವಾಗುತ್ತಿರುವ ನಾಟಕ ಕಲೆ ಮತ್ತು ಕಲಾವಿದರನ್ನು ಉಳಿಸಿ ಬೆಳೆಸುವ ನಿಟ್ಟಿನಲ್ಲಿ ಪ್ರತಿಯೊಬ್ಬರು ಪ್ರೋತ್ಸಾಹಿಸಬೇಕು ಎಂದು ರಬಕವಿಯ ಬ್ರಹ್ಮಾನಂದ ಆಶ್ರಮದ ಗುರುಸಿದ್ಧೇಶ್ವರ ಸ್ವಾಮೀಜಿ ತಿಳಿಸಿದರು.

ಅವರು ಶುಕ್ರವಾರ ಇಲ್ಲಿನ ಬಸವೇಶ್ವರ ಸಮುದಾಯ ಭವನದಲ್ಲಿ ಗೆಳೆಯರ ಬಳಗ ಬನಹಟ್ಟಿ ಮತ್ತು ಗಂಗಾವತಿ ರೇಷ್ಮೆ ರಂಗೋತ್ಸವ ಆಶ್ರಯದಲ್ಲಿ ನಡೆದ ಯಶವಂತ ಸರದೇಶಪಾಂಡೆ ಅವರು ರಚಿಸಿದ ಅಮರ ಮಧುರ ಪ್ರೇಮ ನಾಟಕಕ್ಕೆ ಚಾಲನೆ ನೀಡಿ ಮಾತನಾಡಿದರು.

ನಟ, ನಿರ್ದೇಶಕ ಯಶವಂತ ಸರದೇಶಪಾಂಡೆ ಮಾತನಾಡಿ, ಪ್ರೇಕ್ಷಕರಿಗೆ ಉತ್ತಮ ಕಥಾ ವಸ್ತುವಿನ ನಾಟಕಗಳನ್ನು ನೀಡಿದರೆ ನೀಡಿದರೆ ಅವರು ನಾಟಕಗಳನ್ನು ನೋಡುತ್ತಾರೆ. ಆದರೂ ನಾಟಕಗಳ ಪ್ರದರ್ಶನ ಇಂದಿನ ದಿನಗಳಲ್ಲಿ ಕಡಿಮೆಯಾಗುತ್ತಿವೆ ಎಂದರು.

ಡಾ. ಮಹಾವೀರ ದಾನಿಗೊಂಡ ಮಾತನಾಡಿ, ಇಂಥ ಕಾರ್ಯಕ್ರಮಗಳನ್ನು ಸಂಘಟನೆ ಮಾಡುವುದು ಕಷ್ಟ. ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಂಘಟಕರನ್ನು ನಾವು ಪ್ರೋತ್ಸಾಹಿಸಬೇಕು ಎಂದರು.

ರಬಕವಿ ಬನಹಟ್ಟಿ ತಹಶೀಲ್ದಾರ್ ಗಿರೀಶ ಸ್ವಾದಿ ಕಾರ್ಯಕ್ರಮ ಉದ್ಘಾಟಿಸಿದರು. ನಗರದ ಮುಖಂಡ ಧರೆಪ್ಪ ಉಳ್ಳಾಗಡ್ಡಿ ಅಧ್ಯಕ್ಷತೆ ವಹಿಸಿದ್ದರು.

ಯಶವಂತ ಸರದೇಶಪಾಂಡೆ, ಸುಂದರ ವೀಣಾ ಮತ್ತು ವೀಣಾ ಸುಂದರ ನಾಟಕ ಪ್ರದರ್ಶನ ಮಾಡಿದರು.

ಬನಹಟ್ಟಿ ಹಿರೇಮಠದ ಶರಣಬಸವ ಶಿವಾಚಾರ್ಯರು, ಪಿ.ಬಿ.ಬಡಿಗೇರ, ಈಶ್ವರ ಬಿದರಿ, ಜಿ.ಎಂ. ಪಾಟೀಲ, ವಿನಾಯಕ ತಾಂಬಟ, ಗೋಪಾಲ ಭಟ್ಟಡ, ಪ್ರಕಾಶ ಹೋಳಗಿ, ಮನೋಹರ ಸುಟ್ಟಟ್ಟಿ, ಮಾಧ್ವಾನಂದ ಗುಟ್ಲಿ, ಕಿರಣ ಆಳಗಿ, ಚಿದಾನಂದ ಸೊಲ್ಲಾಪುರ, ಅರವಿಂದ ಪತ್ತಾರ, ಡಾ.ರವಿ ಜಮಖಂಡಿ, ಮಲ್ಲಿಕಾರ್ಜುನ ಗಡೆನ್ನವರ, ವಿಜಯಕುಮಾರ ಹಲಕುರ್ಕಿ, ವಿಶ್ವಜ ಕಾಡದೇವರ ಸೇರಿದಂತೆ ಅನೇಕರು ಇದ್ದರು.

# ಯುವ ಚೈತನ್ಯ ಯೋಜನೆಯಡಿ ಯುವ ಸಂಘಗಳಿಂದ ಅರ್ಜಿ ಆಹ್ವಾನ

ಕೊಪ್ಪಳ : ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಗ್ರಾಮೀಣ ಯುವಜನತೆ ಆರೋಗ್ಯಕರ ಚಟುವಟಿಕೆ ಗಳಲ್ಲಿ ಪಾಲ್ಗೊಳ್ಳಲು ಸಹಾಯಕವಾಗುವ ವಾತಾವರಣವನ್ನು ಸೃಜಿಸಲು ಯುವ ಚೈತನ್ಯ ಎಂಬ ನೂತನ ಯೋಜನೆಯಡಿ ಕ್ರೀಡಾ ಸಾಮಾಗ್ರಿಗಳನ್ನು ಒದಗಿಸಲಾಗುತ್ತಿದ್ದು, ಯುವ ಸಂಘಗಳಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಯುವ ಸಂಘವು ಕನಿಷ್ಠ 25 ಯುವ ಜನರನ್ನು ಸದಸ್ಯರನ್ನಾಗಿ ಹೊಂದಿರಬೇಕು. ಎಲ್ಲಾ ಸದಸ್ಯರ ವಯೋಮಿತಿಯು 18 ರಿಂದ 35 ವರ್ಷದೊಳಗಿರಬೇಕು. ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ ಮಾನ್ಯತೆ ಪಡೆದಿರಬೇಕು. ಯುವ ಸಂಘಗಳು ಇಲಾಖೆಯಿಂದ ಮಾನ್ಯತೆ ಪಡೆಯಲು ಸಂಘಗಳ ನೋಂದಣಿ ಕಾಯ್ದೆಯಡಿ ಮಾನ್ಯತೆ ಪಡೆದಿರಬೇಕು. ಯುವ ಸಂಘವು ಕಡ್ಡಾಯವಾಗಿ ಚಾಲ್ತಿಯಲ್ಲಿರಬೇಕು. ಅಗತ್ಯ ದಾಖಲೆಗಳೊಂದಿಗೆ ಜುಲೈ 19 ರೊಳಗಾಗಿ ಕಾರ್ಯಾಲಯಕ್ಕೆ ಅರ್ಜಿ ಸಲ್ಲಿಸಬೇಕು. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಹೆಚ್ಚಿನ ಮಾಹಿತಿಗಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜಿಲ್ಲಾ ಕ್ರೀಡಾಂಗಣ, ಕೊಪ್ಪಳ, ದೂ.ಸಂ: 08539–230121 ಗೆ ಸಂಪರ್ಕಿಸಬಹುದು ಎಂದು ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಾಲ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

ಕಾರವಾರ, : ಕರ್ನಾಟಕ ಆರ್ಯವೈಶ್ಯ ಸಮುದಾಯದ ಅಭಿವೃದ್ಧಿ ನಿಗಮದಿಂದ 2025–26 ನೇ ಸಾಲಿನಲ್ಲಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದೆ ಹಾಗೂ ಈ ಯೋಜನೆಗಳಡಿ ಸಾಲ–ಸೌಲಭ್ಯವನ್ನು ಪಡೆಯಲು ಇಚ್ಚಿಸುವರು ಕಡ್ಡಾಯವಾಗಿ ಆನ್‌ಲೈನ್ : **http//kacdc.karnataka.gov.in** ಮೂಲಕ ಅರ್ಜಿ ಸಲ್ಲಿಸಲು ಜುಲೈ 31 ಕೊನೆಯ ದಿನವಾಗಿದೆ.
2025–26ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲಾಗುವ ಯೋಜನೆಗಳು:– ಸ್ವಯಂ–ಉದ್ಯೋಗ ನೇರ ಸಾಲ ಯೋಜನೆ, ಬ್ಯಾಂಕ್‌ಗಳ ಸಹಯೋಗದೊಂದಿಗೆ ಆರ್ಯವೈಶ್ಯ ಆಹಾರ ವಾಹಿನಿ/ವಾಹಿನಿಯೋಜನೆ, ವಾಸವಿ ಜಲಶಕ್ತಿ ಯೋಜನೆ, ಅರಿವು ಕ್ಷಣಿಕ ಸಾಲ ಯೋಜನೆ–ಸಿಇಟಿ ಹಾಗೂ ನೆಟ್ ಕೌನ್ಸಿಲಿಂಗ್ ಮುಗಿದ ನಂತರ ಅರ್ಜಿಗಳನ್ನು ಆಹ್ವಾನಿಸಲಾಗುವುದು.
ಎಲ್ಲಾ ಯೋಜನೆಗಳ ಸಾಮಾನ್ಯ ಮಾರ್ಗಸೂಚಿಗಳು:– ಸಾಮಾನ್ಯವರ್ಗದಲ್ಲಿನಆರ್ಯವೈಶ್ಯ ಸಮುದಾಯಕ್ಕೆ ಸೇರಿದವರಾಗಿರಬೇಕು ಮತ್ತು ನಮೂನೆ–ಜಿ'ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣಪತ್ರ ಪಡೆದಿರಬೇಕು, ಅರ್ಜಿದಾರರು ಕರ್ನಾಟಕ ರಾಜ್ಯದವರಾಗಿದ್ದು, ಅವರ ಖಾಯಂ ವಿಳಾಸವು ಕರ್ನಾಟಕ ರಾಜ್ಯದಲ್ಲಿರಬೇಕು. ಅರ್ಜಿದಾರರ ಮೊಬೈಲ್ ಸಂಖ್ಯೆಯು ಆದ–ರ್ ಸಂಖ್ಯೆಗೆ ಜೋಡಣೆಯಾಗಿರಬೇಕು ಮತ್ತು ಬ್ಯಾಂಕ್ ಖಾತೆಗೆ ಆಧಾರ್ ಸೀಡಿಂಗ್ ಆಗಿರಬೇಕು. ಅರ್ಹ ಅರ್ಜಿದಾರರುಗಳನ್ನು ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳ ಅಧ್ಯಕ್ಷತೆಂಯಲ್ಲಿ ರಚಿಸಿರುವ ಜಿಲ್ಲಾಮಟ್ಟದಲ್ಲಿ ಆಯ್ಕೆ ಸಮಿತಿಯ ಮೂಲಕ ಆಯ್ಕೆ ಮಾಡಲಾಗುವುದು. ವಿಶೇಷ ಸೂಚನೆ:– ಈ ಯೋಜನೆಗಳ ಮಾರ್ಗಸೂಚಿ ಹಾಗೂ ಅರ್ಹತೆಗಳ ಸಂಕ್ಷಿಪ್ತ ವಿವರಗಳನ್ನು ಕ್ಯೂಆರ್ ಕೋಡ್‌ನ್ನು ಸ್ಕ್ಯಾನ್ ಮಾಡಿ ಪಡೆಯಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿಗಮದ ಸಹಾಯವಾಣಿ ಸಂಖ್ಯೆ: 94484 51111 ನ್ನು ಕಚೇರಿ ವೇಳೆಯಲ್ಲಿ ಸಂಪರ್ಕಿಸುವಂತೆ ಕರ್ನಾಟಕ ಆರ್ಯವೈಶ್ಯ ಸಮುದಾಯದ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಹಿಂದುಳಿದ ವರ್ಗಗಳ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತ ವೃತ್ತಿ ತರಬೇತಿ ಅವಧಿಯಲ್ಲಿ ತರಬೇತಿ ಭತ್ಯೆ ಸೌಲಭ್ಯಕ್ಕಾಗಿ ಕಾನೂನು ಪದವೀಧರರಿಂದ ಅರ್ಜಿ ಆಹ್ವಾನ

ಧಾರವಾಡ : 2025–26 ನೇ ಸಾಲಿನಲ್ಲಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಧಾರವಾಡ ಜಿಲ್ಲೆಗೆ ಸೇರಿದ ಹಿಂದುಳಿದ ವರ್ಗಗಳ ಪ್ರವರ್ಗ–1, ಪ್ರವರ್ಗ–2ಎ, ಪ್ರವರ್ಗ–3ಎ, ಮತ್ತು ಪ್ರವರ್ಗ–3ಬಿ ವರ್ಗಕ್ಕೆ ಸೇರಿದ ಕಾನೂನು ಪದವೀಧರರಿಗೆ ನ್ಯಾಯಾಂಗ ಆಡಳಿತ ವೃತ್ತಿ ತರಬೇತಿ ಅವಧಿಯಲ್ಲಿ ತರಬೇತಿ ಭತ್ಯೆ ಪಾವತಿಸುವ ಕಾರ್ಯಕ್ರಮದಡಿ ಅರ್ಹ ಕಾನೂನು ಪದವೀಧರ–ರಿಂದ ಅರ್ಜಿ ಆಹ್ವಾನಿಸಲಾಗಿದೆ. ತಎರಡನೇ ತಂಡದ ಅಭ್ಯರ್ಥಿಗಳಿಗಾಗಿ ಅರ್ಜಿ ಆಹ್ವಾನಿಸಲಾಗಿದ್ದು, ಪ್ರರ್ಗ–1 ರ ಅಭ್ಯರ್ಥಿಯ ಕುಟುಂಬದ ವಾರ್ಷಿಕ ರೂ. 3.50 ಲಕ್ಷ ಆದಾಯ ಮಿತಿ ಹೊಂದಿದ್ದು 40 ವರ್ಷದೊಳಗಿನವರಾಗಿರಬೇಕು. ಪ್ರವರ್ಗ–2ಎ, ಪ್ರವರ್ಗ–3ಎ, ಮತ್ತು ಪ್ರವರ್ಗ–3ಬಿ ವರ್ಗಕ್ಕೆ ಸೇರಿದ ಅಭ್ಯರ್ಥಿಗಳ ಆದಾಯ 2.50 ಲಕ್ಷ ಆದಾಯ ಮಿತಿ ಹೊಂದಿದ್ದು 38 ವರ್ಷದೊಳಗಿನವರಾಗಿರಬೇಕು. ಆಯ್ಕೆಯಾದ ಅಭ್ಯರ್ಥಿಗಳಿಗೆ ಮಾಸಿಕ ರೂ.4,000 ಭತ್ಯೆಯನ್ನು 4 ವರ್ಷಗಳವರೆಗೆ ನೀಡಲಾಗುವುದು,

ಕಾನೂನು ಪದವೀಧರರಿಗೆ ವಕೀಲ ವೃತ್ತಿಯಲ್ಲಿ ನ್ಯಾಯಾಂಗ ಸೇವೆಯ ಪೂರ್ವ ತರಬೇತಿ ಪಡೆಯಲು ಪದವಿ ಪಡೆದ 2 ವರ್ಷದೊಳಗಿನ ಅವಧಿಯ ಅರ್ಹ ಆಸಕ್ತಿಯುಳ್ಳ ಕಾನೂನು ಪದವೀಧರರು ಜುಲೈ 31, 2025 ರೊಳಗಾಗಿ ವೆಬ್‌ಸೈಟ್ **www.bcwd.kar.nic.in** ಮೂಲಕ ಅರ್ಜಿ ಸಲ್ಲಿಸಬಹುದು.
ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ : 0836–2447961 ಗೆ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿ ಆಚರಣೆ



ಗದಗ : ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ , ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರುಗಳ ಸಹಯೋಗದಲ್ಲಿ ಶುಕ್ರವಾರ ನಾಡಪ್ರಭು ಶ್ರೀ ಕೆಂಪೇಗೌಡ ಜಯಂತಿಯನ್ನು ನಾಡಪ್ರಭು ಶ್ರೀ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವುದರೊಂದಿಗೆ ಆಚ–ರಿಸಲಾಯಿತು.

ಈ ಸಂದರ್ಭದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಹೆಚ್ಚುವರಿ ಜಿಲ್ಲಾ ಪೊಲೀಸ ವರಿಷ್ಠಾಧಿಕಾರಿ ಎಂ.ಬಿ.ಸುಂಕದ, ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿ.ಪಂ. ಉಪಕಾರ್ಯದರ್ಶಿ ಸಿ.ಆರ್.ಮುಂಡರಗಿ, ಭೂ ದಾಖಲೆ ಇಲಾಖೆ ಉಪನಿರ್ದೇಶಕ ರುದ್ರಗೌಡ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಬಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕ ವಸಂತ ಮಡ್ಲೂರ ಸೇರಿದಂತೆ ಇತರರು ಇದ್ದರು.

## ಕರ್ನಾಟಕ ಸಾಹಿತ್ಯ ಅಕಾಡೆಮಿ: ಅಧ್ಯಯನ ಶಿಬಿರಕ್ಕೆ ಅರ್ಜಿ ಆಹ್ವಾನ

ಕೊಪ್ಪಳ : ಕರ್ನಾಟಕ ಸಾಹಿತ್ಯ ಅಕಾಡೆಮಿಯ ವಿಶೇಷ ಘಟಕ ಯೋಜನೆಯಡಿ ದಲಿತ ಸಾಹಿತ್ಯ: ಅರ್ಧ ಶತಮಾನ ಎಂಬ ಹೆಸರಿನಲ್ಲಿ 3 ದಿನಗಳ ಅಧ್ಯಯನ ಶಿಬಿರವನ್ನು ಸೆಪ್ಟೆಂಬರ್‌ನಲ್ಲಿ ನಡೆಸಲು ಉದ್ದೇಶಿಸಲಾಗಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪರಿಶಿಷ್ಟ ಜಾತಿಗೆ ಸೇರಿದ 20 ರಿಂದ 50 ವರ್ಷದೊಳಗಿನ ರಾಜ್ಯದ ಯಾವುದೇ ಭಾಗದ ಆಸಕ್ತ ಅಭ್ಯರ್ಥಿಗಳು ಜುಲೈ 20 ರೊಳಗೆ ಅರ್ಜಿ ಸಲ್ಲಿಸಬೇಕು. ಅರ್ಜಿ ನಮೂನೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಅಕಾಡೆಮಿಯ ವೆಬ್‌ಸೈಟ್: **https://sahithyaacademy.karnataka.gov.in** ಗೆ ಭೇಟಿ ನೀಡಬಹುದು ಎಂದು ಅಕಾಡೆಮಿಯ ರಿಜಿಸ್ಟ್ರಾರ್ ಕರಿಯಪ್ಪ ಎನ್. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜಿಲ್ಲೆಯಲ್ಲಿ ಈವರೆಗೆ 73 ಲಕ್ಷ ಪುಟಗಳ ಡಿಜಿಟಲೀಕರಣ ಪೂರ್ಣ

ಕೊಪ್ಪಳ : ಕಂದಾಯ ಇಲಾಖೆಯ ಹಳೆಯ ದಾಖಲೆಗಳನ್ನು ಸುರಕ್ಷಿತಗೊಳಿಸಲು ಹಾಗೂ ಸುಳ್ಳು ದಾಖಲೆ ಸೃಷ್ಟಿಸುವುದನ್ನು ತಡೆಗಟ್ಟಲು ಸರ್ಕಾರ ಜಾರಿಗೊಳಿಸಿರುವ ಭೂ ಸುರಕ್ಷಾ ಯೋಜನೆಯಡಿ ಜಿಲ್ಲೆಯಲ್ಲಿ ಈವರೆಗೂ ಒಟ್ಟು 73,07,700 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ ಎಂದು ಜಿಲ್ಲಾಧಿಕಾರಿ ಸುರೇಶ ಬಿ.ಇಟ್ನಾಳ ಅವರು ತಿಳಿಸಿದ್ದಾರೆ.

ಕೊಪ್ಪಳ ತಾಲ್ಲೂಕಿನಲ್ಲಿ ಒಟ್ಟು 37,994 ಕಡತಗಳಲ್ಲಿ(ಫೈಲ್) 13,869 ಕಡತಗಳ 9,77,904 ಪುಟಗಳನ್ನು ಹಾಗೂ ಒಟ್ಟು 11,684 ವಹಿಗಳಲ್ಲಿ(ರಿಜಿಸ್ಟರ್) 2,882 ವಹಿಗಳ 45,679 ಪುಟಗಳು ಸೇರಿದಂತೆ ಒಟ್ಟು 10,23,583 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಕುಷ್ಟಗಿ ತಾಲ್ಲೂಕಿನಲ್ಲಿ ಒಟ್ಟು 48,375 ಕಡತಗಳಲ್ಲಿ 40,857 ಕಡತಗಳ 14,69,295 ಪುಟಗಳನ್ನು ಹಾಗೂ ಒಟ್ಟು 5,321 ವಹಿಗಳಲ್ಲಿ 499 ವಹಿಗಳ 60,151 ಪುಟಗಳು ಸೇರಿದಂತೆ ಒಟ್ಟು 15,29,446 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಕುಕನೂರು ತಾಲ್ಲೂಕಿನಲ್ಲಿ ಒಟ್ಟು 25,000 ಕಡತಗಳಲ್ಲಿ 19,471 ಕಡತಗಳ 2,79,881 ಪುಟಗಳನ್ನು ಹಾಗೂ ಒಟ್ಟು 5,000 ವಹಿಗಳಲ್ಲಿ 911 ವಹಿಗಳ 2,06,002 ಪುಟಗಳು ಸೇರಿದಂತೆ ಒಟ್ಟು 4,85,883 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

ಕನಕಗಿರಿ ತಾಲ್ಲೂಕಿನಲ್ಲಿ ಒಟ್ಟು 26,300 ಕಡತಗಳಲ್ಲಿ 18,402 ಕಡತಗಳ 4,53,988 ಪುಟಗಳನ್ನು ಹಾಗೂ ಒಟ್ಟು 3,200 ವಹಿಗಳಲ್ಲಿ 1,823 ವಹಿಗಳ 3,67,942 ಪುಟಗಳು ಸೇರಿದಂತೆ ಒಟ್ಟು 8,21,930 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಯಲಬುರ್ಗಾ ತಾಲ್ಲೂಕಿನಲ್ಲಿ ಒಟ್ಟು 54,300 ಕಡತಗಳಲ್ಲಿ 36,641 ಕಡತಗಳ 9,05,242 ಪುಟಗಳನ್ನು ಹಾಗೂ ಒಟ್ಟು 1,949 ವಹಿಗಳಲ್ಲಿ 708 ವಹಿಗಳ 1,67,654 ಪುಟಗಳು ಸೇರಿದಂತೆ ಒಟ್ಟು 10,72,896 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಗಂಗಾವತಿ ತಾಲ್ಲೂಕಿನಲ್ಲಿ ಒಟ್ಟು 34,572 ಕಡತಗಳಲ್ಲಿ 16,138 ಕಡತಗಳ 4,45,141 ಪುಟಗಳನ್ನು ಹಾಗೂ ಒಟ್ಟು 3,083 ವಹಿಗಳಲ್ಲಿ 2,104 ವಹಿಗಳ 4,58,374 ಪುಟಗಳು ಸೇರಿದಂತೆ ಒಟ್ಟು 9,03,488 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಜಿಲ್ಲೆಯ 6 ತಾಲ್ಲೂಕುಗಳಲ್ಲಿ ಒಟ್ಟು 2,26,491 ಕಡತಗಳಲ್ಲಿ 1,45,378 ಕಡತಗಳ 45,31,451 ಪುಟಗಳು ಹಾಗೂ ಒಟ್ಟು 30,237 ವಹಿಗಳಲ್ಲಿ 8,927 ವಹಿಗಳ 13,05,775 ಪುಟಗಳು ಸೇರಿದಂತೆ ಒಟ್ಟು 58,37,226 ಪುಟಗಳ ದಾಖಲೆಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ. ಇನ್ನೂ ಬಾಕಿ ಉಳಿದ ಕಡತಗಳು ಹಾಗೂ ವಹಿಗಳ ಡಿಜಿಟಲೀಕರಣ ಕಾರ್ಯವು ಪ್ರಗತಿಯಲ್ಲಿದೆ.

ಜಿಲ್ಲೆಯ ಕಾರಟಗಿಯನ್ನು ಸರ್ಕಾರವು 2024 ರಲ್ಲಿ ತಾಲ್ಲೂಕನ್ನಾಗಿ ಪರಿಗಣಿಸಿ ಡಿಜಿಟಲೀಕರಣ ಮಾಡುವ ಕಾರ್ಯಕ್ಕೆ ಆದೇಶ ನೀಡಿತ್ತು. ಅದರಂತೆ ರಾಜ್ಯದಲ್ಲಿ ಮೊದಲನೆಯದಾಗಿ ಕಾರಟಗಿ ತಾಲ್ಲೂಕಿನ ಎಲ್ಲಾ ದಾಖಲೆಗಳ ಡಿಜಿಟಲೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸಲಾಗಿರುತ್ತದೆ. ಕಾರಟಗಿ ತಾಲ್ಲೂಕಿನ ಒಟ್ಟು 42,688 ಕಡತಗಳ 7,95,700 ಪುಟಗಳು ಹಾಗೂ ಒಟ್ಟು 4,361 ವಹಿಗಳ 6,74,774 ಪುಟಗಳು ಸೇರಿದಂತೆ ಒಟ್ಟು 14,70,474 ಪುಟಗಳ ಡಿಜಿಟಲೀಕರಣ ಕಾರ್ಯ ಪೂರ್ಣಗೊಂಡಿದೆ. ಜಿಲ್ಲೆಯಾದ್ಯಂತ ಈವರೆಗೆ ಎಲ್ಲ ತಾಲ್ಲೂಕುಗಳ ಒಟ್ಟು 73,07,700 ಪುಟಗಳನ್ನು ಡಿಜಿಟಲೀಕರಣಗೊಳಿಸಲಾಗಿದೆ.

ಯೋಜನೆಯ ಭಾಗವಾಗಿ ಉಳಿದ ತಾಲ್ಲೂಕುಗಳಿಗೆ ಜನವರಿ 2025 ರಿಂದ ಆ ಕ್ಷೇತ್ರದ ಶಾಸಕರ ಅಧ್ಯಕ್ಷತೆಯಲ್ಲಿ ಭೂ ಸುರಕ್ಷಾ ಯೋಜನೆಯ ಡಿಜಿಟಲೀಕರಣ ಕಾರ್ಯವನ್ನು ಉದ್ಘಾಟಿಸಲಾಗಿದ್ದು, ಡಿಜಿಟಲೀಕರಣಗೊಂಡ ಕಡತಗಳು ಮತ್ತು ವಹಿಗಳಲ್ಲಿನ ದಾಖಲೆಗಳ ನಕಲುಗಳನ್ನು 2025 ರ ಜುಲೈ 01 ರಿಂದ ಕಡ್ಡಾಯವಾಗಿ ಡಿಜಿಟಲ್ ಮಾದರಿಯಲ್ಲಿ ತಾಲ್ಲೂಕುವಾರು ತಹಶೀಲ್ದಾರ ಕಚೇರಿಯಲ್ಲಿ ಭೂ ಸುರಕ್ಷಾ ಯೋಜನೆಯ ರೆಕಾರ್ಡ್ ರೂಂ ನ ತಂತ್ರಾಂಶದ ಮೂಲಕವೇ ಡಿಜಿಟಲ್ ದಾಖಲೆಯನ್ನು ಸಾರ್ವಜನಿಕರಿಗೆ ನೀಡುವ ವ್ಯವಸ್ಥೆಯನ್ನು ಪ್ರಾರಂಭಿಸುವಂತೆ ಕಂದಾಯ ಆಯುಕ್ತಾಲಯ ನಿರ್ದೇಶನ ನೀಡಿ ಸುತ್ತೋಲೆ ಹೊರಡಿಸಿದೆ.

ಅದರಂತೆ ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ಡಿಜಿಟಲ್ ದಾಖಲೆಯನ್ನು ನೀಡುವ ಕಾರ್ಯವನ್ನು ಪ್ರಾರಂಭಿಸಿದ್ದು, ಈವರೆಗೆ ಡಿಜಿಟಲೀಕರಣಗೊಂಡ ಕಡತಗಳು ಮತ್ತು ವಹಿಗಳಲ್ಲಿನ ದಾಖಲೆಗಳ ನಕಲುಗಳನ್ನು ಸಾರ್ವಜನಿಕರು ಅಭಿಲೇಖಾಲಯದ https://record-room.karnataka.gov.in/ERECOR-DROOM/ ತಂತ್ರಾಂಶದ ಮೂಲಕ ನಿಗದಿತ ಶುಲ್ಕ ಪಾವತಿಸಿ ದಾಖಲೆಗಳನ್ನು ಪಡೆಯಲು ಅವಕಾಶ ಕಲ್ಪಿಸಲಾಗಿರುತ್ತದೆ. ಇದರೊಂದಿಗೆ ಕಚೇರಿಗೆ ಭೇಟಿ ನೀಡಿ ಅರ್ಜಿ ಸಲ್ಲಿಸಿ ದಾಖಲೆಗಳನ್ನು ಡಿಜಿಟಲ್ ರೂಪದಲ್ಲಿ ಪಡೆಯಬಹುದಾಗಿರುತ್ತದೆ ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಾದಕ ವಸ್ತುಗಳ ಬಳಕೆ ಸಮಾಜದ ಮೇಲೆ ವ್ಯತಿರಿಕ್ತ ಪರಿಣಾಮ

ಬಸವನಬಾಗೇವಾಡಿ, : ಮಾದಕ ವಸ್ತುಗಳ ಬಳಕೆ ಮನುಷ್ಯನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುವ ಜೊತೆಗೆ ನೆರೆಹೊರೆಯ ವಾತಾವರಣವನ್ನು ಕಲುಷಿತಗೊಳಿಸುತ್ತದೆ. ಇಂತಹ ಮಾದಕ ವಸ್ತುಗಳಿಂದ ಪ್ರತಿಯೊಬ್ಬರೂ ದೂರವಿರಬೇಕೆಂದು ಸಿವ್ಹಿಲ್ ನ್ಯಾಯಾಧೀಶ ಅಮೀತ ಘಟ್ಟಿ ಹೇಳಿದರು.

ಪಟ್ಟಣದ ಬಸವ ಭವನದಲ್ಲಿ ಪೊಲೀಸ್ ಠಾಣೆಯು ಅಂತರಾಷ್ಟ್ರೀಯ ಮಾದಕ ವ್ಯಸನ(ದ್ರವ್ಯ) ಮತ್ತು ಅಕ್ರಮ ಸಾಗಾಣಿಕೆ ವಿರೋಧ ದಿನಾಚರಣೆಯಂಗವಾಗಿ ಗುರುವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ವ್ಯಸನ ಅನ್ನುವುದು ಒಂದು ಸಂಕೀರ್ಣವಾದ ಸಮಸ್ಯೆಯಾಗಿದೆ. ತಾತ್ಕಲಿಕವಾಗಿ ಆನಂದ ನೀಡುವ ಮಾದಕ ದ್ರವ್ಯ ವಸ್ತುಗಳ ಅವಲಂಬನೆಗೆ ಒಳಗಾಗುವುದನ್ನು ಹೆಚ್ಚಾಗಿ ಸಮಾಜದಲ್ಲಿ ಕಾಣುತ್ತಿದ್ದೇವೆ. ಸ್ನೇಹಿತರ ಒತ್ತಾಯ, ದೈಹಿಕ ಮಾನಸಿಕ ಒತ್ತಡ ಕಡಿಮೆ ಮಾಡಿಕೊಳ್ಳಲು ಹೀಗೆ ಅನೇಕ ಕಾರಣಗಳಿಂದ ಜನರು ಮಾದಕ ವ್ಯಸನಗಳಿಗೆ ದಾಸರಾಗುತ್ತಿದ್ದಾರೆ. ಇಂತಹ ಹವ್ಯಾಸ ಬಿಟ್ಟು ಹೊರಬರಲಾರದ ಸ್ಥಿತಿಯಲ್ಲಿ ಬಳಲುತ್ತಿದ್ದಾರೆ. ಮಾದಕ ದ್ರವ್ಯ ಸೇವನೆಗಳ ಪರಿಣಾಮಗಳ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಹಾಗೂ ಉಪಕ್ರಮಗಳನ್ನು ಬಲಪಡಿಸಲು ಮತ್ತು ಮಾದಕ ದ್ರವ್ಯ ಸಮಸ್ಯೆಯನ್ನು ನಿಭಾಯಿಸಲು ವಿವಿಧ ಪಾಲುದಾರರಲ್ಲಿ ಸಮನ್ವಯವನ್ನು ಸುಧಾರಿಸಲು ಪ್ರತಿ ವರ್ಷ




ಜೂನ್. 26 ರಂದು ಅಂತರಾಷ್ಟ್ರೀಯ ಮಾದಕ ವ್ಯಸನ ಮತ್ತು ಅಕ್ರಮ ಸಾಗಾಣಿಕೆ ವಿರೋಃ ದಿನವನ್ನು ಆಚರಿಸಲಾಗುತ್ತಿದೆ ಎಂದರು.

ಹೆಚ್ಚುವರಿ ಸಿವ್ಹಿಲ್ ನ್ಯಾಯಾಃಶ ಈರಪ್ಪ ಢವಳೇಶ್ವರ ಮಾತನಾಡಿ, ವಿದ್ಯಾರ್ಥಿಗಳು ತಮಗೆ ಗೊತ್ತಿಲ್ಲದಂತೆ ಮಾದಕ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ಸಮಸ್ಯೆಗಳಿಗೆ ಮಾದಕ ವಸ್ತುಗಳ ಬಳಕೆ ಪರಿಹಾರವಲ್ಲ. ಮಾದಕ ವಸ್ತುಗಳ ದುರುಪಯೋಗದ ಅಪಾಯಗಳು ಮತ್ತು ಅಕ್ರಮ ಮಾದಕ ವಸ್ತುಗಳ ಕಳ್ಳಸಾಗಾಣಿಕೆಯ ಪರಿಣಾಮಗಳ ಬಗ್ಗೆ ಸಾರ್ವಜನಿಕರು ಅರಿವು ಮೂಡಿಸಲು ಈ ದಿನ ನಮಗೆ ಅವಕಾಶ ಒದಗಿಸುತ್ತದೆ ಎಂದರು.

ಆರೋಗ್ಯ ಇಲಾಖೆಯ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಸ್.ಮೇಟಿ ಮಾತನಾಡಿ, ಮಾದಕ ವಸ್ತುಗಳಿಂದಾಗುವ ದುರುಪಯೋಗದ ಅಪಾಯಗಳು, ಇದರಿಂದಾಗಿ ಆರೋಗ್ಯದ ಮೇಲೆ ಉಂಟಾಗುವ ಪರಿಣಾಮಗಳ ಕುರಿತು ನಾವೆಲ್ಲರೂ ಜಾಗೃತಿಯಾಗುವ ಅಗತ್ಯವಿದೆ. ನಾವೆಲ್ಲರೂ ಆರೋಗ್ಯಕರ ನಡವಳಿಕೆಗಳನ್ನು ಪ್ರೋತ್ಸಾಹಿಸಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಡಿವೈಎಸ್ಪಿ ಬಲ್ಲಪ್ಪ ನಂದಗಾಂವಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ, ಪುರಸಭೆ ಅಧ್ಯಕ್ಷೆ ಜಗದೇವಿ ಗುಂಡಳ್ಳಿ, ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ, ನ್ಯಾಯವಾದಿಗಳ ಸಂಘದ ಅಧ್ಯಕ್ಷ ಎಚ್.ಎಸ್.ಗುರಡ್ಡಿ, ಸಮಾಜ ಕಲ್ಯಾಣ ಇಲಾಖೆಯ ಗ್ರೇಡ್-2 ನಿರ್ದೇಶಕಿ ಮಂಜು ಹಿರೇಮನಿ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಶಿಲ್ಪಾ ಹಿರೇಮಠ, ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಶಿವಾನಂದ ಮಂಗಾನವರ, ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಪ್ರಾಚಾರ್ಯ ಡಾ.ಎ.ಪ್ಹಿ.ಸೂರ್ಯವಂಶಿ ಇತರರು ಇದ್ದರು. ಪಿಐ ಗುರುಶಾಂತ ದಾಶ್ಯಾಳ ಪ್ರತಿಜ್ಞಾ ವಿಧಿ ಬೋಧಿಸಿದರು. ಅಶೋಕ ಹಂಚಲಿ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಮಾದಕ ವ್ಯಸನ ಪರಿಣಾಮ ಕುರಿತು ಹಮ್ಮಿಕೊಂಡಿದ್ದ ಚಿತ್ರಕಲೆ ಸ್ಪರ್ಧೆಯಲ್ಲಿ ವಿಜೇತ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

**ಕಾರ್ಯಕ್ರಮಕ್ಕೂ ಮುನ್ನ ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜಿನಿಂದ ಆರಂಭವಾದ ಜಾಥಾದಲ್ಲಿ ಪಟ್ಟಣದ ಬಿಎಲ್‌ಡಿಇ ಸಂಸ್ಥೆಯ ಬಸವೇಶ್ವರ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ, ಪದವಿ ಪೂರ್ವ ಕಾಲೇಜು, ಔಷಧ ಮಹಾವಿದ್ಯಾಲಯ, ಬಸವೇಶ್ವರ ಸರ್ಕಾರಿ ಪದವಿ ಪೂರ್ವ ಕಾಲೇಜು, ಸರ್ಕಾರಿ ಪ್ರಥಮ ದರ್ಜೆ, ಅಕ್ಕನಾಗಮ್ಮ ಸರ್ಕಾರಿ ಪದವಿ ಪೂರ್ವ ಕಾಲೇಜು ಸೇರಿದಂತೆ ಎಲ್ಲ ಕಾಲೇಜುಗಳ ವಿದ್ಯಾರ್ಥಿಗಳು, ವಿವಿಧ ಇಲಾಖೆಯ ಅಧಿಕಾರಿಗಳು, ವಿವಿಧ ಗಣ್ಯರು, ಅಟೋ ಸೇರಿದಂತೆ ಸುಮಾರು ಒಂದೂವರೆ ಕಿಲೋ ಮೀಟರ್ ದೂರದವರೆಗೂ ಜಾಥಾ ಸರದಿ ಸಾಲು ಕಂಡು ಬಂದಿತ್ತು. ಜಾಥಾಯುದ್ದಕ್ಕೂ ಮಾದಕ ದ್ರವ್ಯಗಳಿಂದಾಗುವ ಪರಿಣಾಮಗಳ ನಾಮಫಲಕ ರಾರಾಜಿಸಿದವು. ಬಸವ ಭವನದಲ್ಲಿ ಜರುಗಿದ ಕಾರ್ಯಕ್ರಮದ ವೇಳೆಯಲ್ಲಿ ಮಾದಕ ದ್ರವ್ಯಗಳಿಂದಾಗುವ ದುಷ್ಪರಿಣಾಮಗಳ ಕುರಿತಾದ ಮೂರು ವಿಡಿಯೋಗಳನ್ನು ಬೃಹತ್ ಪರದೆಯ ಮೇಲೆ ವಿದ್ಯಾರ್ಥಿಗಳಿಗೆ ತೋರಿಸಲಾಯಿತು.**

# ಮಾದಕ ವಸ್ತುಗಳ ಸೇವನೆ ಬಿಡಿ- ನಿಮ್ಮ ಅಮೂಲ್ಯ ಜೀವನ ಕಾಪಾಡಿ

ಗದಗ : ಮಾದಕ ವಸ್ತುಗಳ ಸೇವನೆಯಿಂದ ಮನುಷ್ಯ ಅನೇಕ ದೈಹಿಕ ಹಾಗೂ ಮಾನಸಿಕ ಕಾಯಿಲೆಗೆ ಒಳಗಾಗಿ ತನ್ನ ಜೀವವನ್ನೆ ಕಳೆದುಕೊಳ್ಳುತ್ತಾನೆ. ಹಾಗೂ ಆರ್ಥಿಕವಾಗಿ ದಿವಾಳಿ ಕೂಡ ಆಗುತ್ತಾನೆ. ಇದರಿಂದ ಕುಟುಂಬ ಹಾಗೂ ಸಮಾಜದ ಮೇಲೆ ಕೆಟ್ಟ ಪರಿಣಾಮ ಉಂಟಾಗುತ್ತದೆ. ಸಮಾಜ ಮಾದಕ ವಸ್ತುಗಳಿಂದ ಮುಕ್ತವಾಗಿರಬೇಕು.

ಆದ್ದರಿಂದ ಪ್ರತಿ ವರ್ಷ ಜೂನ್ 26 ರಂದು ವಿಶ್ವ ಮಾದಕ ವಸ್ತು ವಿರೋಧಿ ದಿನವನ್ನು ಆಚರಿಸಲಾಗುತ್ತದೆ. ಸೆಪ್ಟೆಂಬರ್ 7, 1987 ರಂದು, ವಿಶ್ವಸಂಸ್ಥೆ0ು ಸಾಮಾನ್ಯ ಸಭೆ0ು ಮಾದಕ ವಸ್ತುಗಳ ದುರುಪ0ೋಗ ಮತ್ತು ಕಳ್ಳಸಾಗಾಣಿಕೆ0ುನ್ನು ತಡೆಗಟ್ಟಲು ನಿರ್ದಿಷ್ಟ ಆಚರಣೆ0ುನ್ನು ಜಾರಿಗೆ ತರಬೇಕು ಎಂದು ಒಂದು ನಿರ್ಣ0ುವನ್ನು ಅಂಗೀಕರಿಸಿತು.

ಮಾದಕ ವ್ಯಸನ ಎಂಬ ಪದ ಬಂದಾಗ ನಮ್ಮ ಮನಸ್ಸಿಗೆ ಬರುವ ಮೊದಲ ವಿಷ0ುವೆಂದರೆ ಮದ್ಯ ಮತ್ತು ತಂಬಾಕು ವ್ಯಸನ. ಇವು ದಿನದಿಂದ ದಿನಕ್ಕೆ ಹೆಚ್ಚುತ್ತಿರುವ ಸಾಮಾನ್ಯ ಮಾದಕ ವ್ಯಸನದ ಸಮಸ್ಯೆಗಳಾಗಿವೆ.

ಮಾದಕ ವ್ಯಸನ ಎಂದರೆ ತನಗೆ ಅಥವಾ ಇತರರಿಗೆ ಹಾನಿಕಾರಕವಾಗುವ ರೀತಿ0ುಲ್ಲಿ ಮಾದಕ ವಸ್ತುಗಳನ್ನು ಬಳಸುವ ಚಟ. ಇದು ಒಂದು ಮಾನಸಿಕ ಅಸ್ವಸ್ಥತೆ0ುಾಗಿದೆ. ಮಾದಕ ವ್ಯಸನವು ವ್ಯಕ್ತಿ0ುಲ್ಲಿ ಸಾಮಾಜಿಕ ವಿರೋಧಿ ನಡವಳಿಕೆಗಳನ್ನು ಉಂಟುಮಾಡಬಹುದು. ಯುವಕರು ಗಮನಿಸಿ ಮತ್ತು ಆದಷ್ಟು ದೂರವಿರುವುದು ಒಳಿತು ಮಾಡುತ್ತದೆ. ಶಿಕ್ಷಣದ ಜೊತೆಗೆ ನಿಮ್ಮ ಗುರಿ ಸಾಧನೆಗೆ ಗಮನಹರಿಸಿ..

ಮಾದಕ ವ್ಯಸನವು ವ್ಯಸನಕ್ಕಿಂತ ಹೇಗೆ ಭಿನ್ನವಾಗಿದೆ?

ಮಾದಕ ವಸ್ತುಗಳ ದುರುಪ0ೋಗ ಮಾಡುವ ವ್ಯಕ್ತಿ0ು ವ್ಯಸನದ ಅಡಿ0ುಲ್ಲಿ ಬರುವುದಿಲ್ಲ ಅಥವಾ ಮಾದಕ ವಸ್ತುಗಳ ಬಳಕೆ0ು ಅಸ್ವಸ್ಥತೆ0ುನ್ನು ಹೊಂದಿರುವುದಿಲ್ಲ. ಮಾದಕ ವಸ್ತುಗಳ ದುರುಪ0ೋಗ ಮಾಡುವ ವ್ಯಕ್ತಿ0ು ಹೆಚ್ಚಾಗಿ ತಮ್ಮ ಮನಸ್ಸಿನ ಮೇಲೆ ನಿ0ುಂತ್ರಣ ಹೊಂದಿರುತ್ತಾನೆ, ಆದರೆ ವ್ಯಸನ ಹೊಂದಿರುವ ವ್ಯಕ್ತಿ0ು ಅಸಹಾ0ುಕನಾಗುತ್ತಾನೆ ಮತ್ತು ತನ್ನ ಮೇಲೆ ನಿ0ುಂತ್ರಣ ಕಳೆದುಕೊಂಡು ಮಾದಕತೆಗೆ ಕಾರಣವಾಗಬಹುದು.

ಗ್ರಾಹಕರು ಈ ವಸ್ತುಗಳನ್ನು ಹೇಗೆ ಬಳಸಲಾರಂಭಿಸಿದರು ಎಂಬುದನ್ನು ವಿವರಿಸುತ್ತಾರೆ,

ಕೆಲವರು ತಮ್ಮ ಗೆಳೆ0ುರು ಅದನ್ನು ಅವರಿಗೆ ಪರಿಚಯಿಸಿದರು ಎಂದು ಹೇಳುತ್ತಾರೆ, ಕೆಲವರಿಗೆ ಕುತೂಹಲವು ಅವರನ್ನು ಮತ್ತಷ್ಟು ಅನ್ವೇಷಿಸಲು ಪ್ರೇರೇಪಿಸಿತು, ಎಂದು ಹೇಳುತ್ತಾರೆ. ಅವರು ಎದುರಿಸುವ ಒತ್ತಡ ಅಥವಾ ಸಮಸ್ಯೆಗಳನ್ನು ನಿಭಾಯಿಸಲು ಕೆಲವು ಮಾದಕ ವಸ್ತುಗಳ ದುರುಪ0ೋಗ, ಕೆಲವು ಜನರು ಮಾದಕ ವಸ್ತುಗಳ ವ್ಯಸನಿ0ುಾಗಿರುವ ನಿಕಟ ವ್ಯಕ್ತಿಗಳನ್ನು




ಹೊಂದಿರುತ್ತಾರೆ. ಮತ್ತು ಪರಿಣಾಮವಾಗಿ, ಅವರು ಅದಕ್ಕೆ ಪ್ರವೃತ್ತಿ0ುನ್ನು ಹೊಂದುತ್ತಾರೆ, ಆದರೆ ಕೆಲವರು ಸಾಮಾಜಿಕ ಕೂಟದ ಭಾಗವಾಗಿ ಅದನ್ನು ಪ್ರಾರಂಭಿಸಿದ್ದೇವೆ ಅಥವಾ ಸಾಂದರ್ಭಿಕವಾಗಿ ಬಳಸುತ್ತಿದ್ದೇವೆ ಎಂದು ಹೇಳುತ್ತಾರೆ. ಉದಾ.-"ಒಬ್ಬ ಹದಿಹರೆ0ುದ ಹುಡುಗ ಪ್ರತಿದಿನ ತನ್ನ ಕಾಲೇಜು ಸ್ನೇಹಿತರೊಂದಿಗೆ ಸಿಗರೇಟ್ ಸೇದಲು ಪ್ರಾರಂಭಿಸುತ್ತಾನೆ, ತನ್ನ ಸ್ನೇಹಿತರ ಮುಂದೆ ಕೂಲ್ ಆಗಿ ಕಾಣಲು ಮತ್ತು ಅವರ ಗುಂಪಿನಲ್ಲಿ ಒಪ್ಪಿಕೊಳ್ಳಲು ನಿರ್ಜನ ತರಗತಿ0ುಲ್ಲಿ ಅಡಗಿಕೊಂಡು, ಪ್ರಾಧ್ಯಾಪಕರಿಂದ ಸಿಕ್ಕಿಹಾಕಿಕೊಳ್ಳುತ್ತಾನೆ ಮತ್ತು ಅಮಾನತುಗೊಳಿಸಲ್ಪಡುತ್ತಾನೆ ಮತ್ತು ಅವನ ಹೆತ್ತವರಿಂದ ಶಿಕ್ಷೆಗೊಳಗಾಗುತ್ತಾನೆ.

ಏನು ಮಾಡಬಹುದು.

ಧೂಮಪಾನದ ಪರಿಣಾಮಗಳ ಬಗ್ಗೆ ಪುನರ್ವಿಮರ್ಶಿಸಬಹುದು ಮತ್ತು ಧೂಮಪಾನವನ್ನು ನಿಲ್ಲಿಸಲು ನಿರ್ಧರಿಸಬಹುದು ಮತ್ತು ಅವನು ಸಮ0ು ಕಳೆ0ುುವ ಜನರನ್ನು ಬದಲಾಯಿಸಬಹುದು ಮತ್ತು ತನ್ನ ಅಧ್ಯ0ುನ, ಪಠ್ಯೇತರ ಚಟುವಟಿಕೆಗಳ ಮೇಲೆ ಗಮನ ಹರಿಸಬಹುದು ಮತ್ತು ಆರೋಗ್ಯಕರ ಜೀವನಶೈಲಿ0ುನ್ನು ಆರಿಸಿಕೊಳ್ಳಬಹುದು."

ಉತ್ತೇಜಕ ದುರುಪ0ೋಗ-ಉತ್ತೇಜಕಗಳು ನಮ್ಮ ದೇಹದ ನೈಸರ್ಗಿಕ ಕಾ0ುರ್ಗಳನ್ನು ಹೆಚ್ಚಿಸುವ ಔಷಧಿಗಳ ವಿಧಗಳಾಗಿವೆ. ಅವು ಕಾನೂನುಬಾಹಿರ ಮತ್ತು ಕಾನೂನುಬದ್ಧವಾಗಿವೆ.

ನಿದ್ರಾಹೀನತೆ ಅಥವಾ ತೀವ್ರ ಖಿನ್ನತೆಯಿಂದ ಬಳಲುತ್ತಿರುವ ಜನರಿಗೆ ವೈದ್ಯರು ಶಿಫಾರಸು ಮಾಡುತ್ತವೆ. ಅವು ಜಾಗರೂಕತೆ ಮತ್ತು ಸಂಭ್ರಮದ ಭಾವನೆ0ುನ್ನು ಉಂಟುಮಾಡುತ್ತವೆ. ಅವು ಅಭ್ಯಾಸವನ್ನು ರೂಪಿಸುವ ಪ್ರವೃತ್ತಿ0ುನ್ನು ಹೊಂದಿರುತ್ತವೆ ಮತ್ತು ಒಬ್ಬ ವ್ಯಕ್ತಿ0ು ನಿಗದಿತ ಪ್ರಮಾಣವನ್ನು ಅನುಸರಿಸದೆ ಅದನ್ನು ಸೇವಿಸಿದರೆ, ಅದು ಮಾದಕತೆ ಅಥವಾ ಅವಲಂಬನೆಗೆ ಕಾರಣವಾಗಬಹುದು. ಅಂತಹ ಔಷಧಿಗಳಿಗೆ ವ್ಯಸನಿ0ುಾಗುವ ಜನರು ಹೆಚ್ಚಿನ ಔಷಧಿಗಳನ್ನು ಖರೀದಿಸಲು ಕುಟುಂಬ ಸದಸ್ಯರು ಅಥವಾ ಸ್ನೇಹಿತರಿಂದ ಹಣವನ್ನು ಕದ್ದ ಪ್ರಕರಣಗಳಿವೆ.

ಭ್ರಮೆಗಳು, ಆತ್ಮಹತ್ಯಾ ಆಲೋಚನೆಗಳು, ಉನ್ಮಾದ ಮತ್ತು ಮನೋರೋಗಕ್ಕೆ ಕಾರಣವಾಗಬಹುದು.

ವ್ಯಕ್ತಿ0ು ತಮ್ಮ ವೃತ್ತಿ, ಕುಟುಂಬ, ಸ್ನೇಹಿತರು ಮತ್ತು ಉತ್ತಮ ಆರೋಗ್ಯವನ್ನು ಕಳೆದುಕೊಳ್ಳಬಹುದು. ಉತ್ತೇಜಕಗಳ ದುರುಪ0ೋಗವು ಉತ್ತೇಜಕ ಪ್ರೇರಿತ ಮನಸ್ಥಿತಿ ಅಸ್ವಸ್ಥತೆಗಳು ಅಥವಾ ಆತಂಕದ ಅಸ್ವಸ್ಥತೆ ಅಥವಾ ಉತ್ತೇಜಕ ಮಾದಕತೆಗೆ ಕಾರಣವಾಗಬಹುದು.

ಉತ್ತಮ ಮತ್ತು ಆರೋಗ್ಯಕರ ಜೀವನಶೈಲಿ0ುತ್ತ ನಿಮ್ಮ ಪ್ರ0ುಾಣದಲ್ಲಿ ನಿಮಗೆ ಮಾರ್ಗದರ್ಶನ ನೀಡುವ ಡೆಡ್ಡಿಕ್ಷನ್ ಕೇಂದ್ರಗಳು ಲಭ್ಯವಿದೆ.

ನೀವು ನಿಮಗಾಗಿ ಅಥವಾ ನಿಮ್ಮ ಪ್ರೀತಿಪಾತ್ರರಿಗೆ ಚಿಕಿತ್ಸೆ ಪಡೆ0ುುತ್ತಿದ್ದರೆ, ಕೆಲವು ವಿಷ0ುಗಳನ್ನು ಗಮನಿಸಬೇಕು, ಮಾದಕ ವ್ಯಸನ/ಅವಲಂಬನೆ/ವ್ಯಸನಕ್ಕೆ, ಹಲವಾರು ರೀತಿ0ು ಚಿಕಿತ್ಸಾ ಕಾರ್ಯಕ್ರಮಗಳು ಲಭ್ಯವಿದೆ. ಇದು ಎಲ್ಲರಿಗೂ ಸರಿಹೊಂದುವ ವಿಧಾನವಲ್ಲ. ಅಂತಹ ಸಂದರ್ಭಗಳಲ್ಲಿ ಉದ್ದೇಶವು ಬಹಳ ಮುಖ್ಯ ಎಂಬುದನ್ನು ನೆನಪಿಟ್ಟುಕೊಳ್ಳುವುದು ಮುಖ್ಯ. ಮಾಡಬೇಕಾದ ಪ್ರಮುಖ ವಿಷ0ುವೆಂದರೆ ಮಾದಕ ವ್ಯಸನದ ಬಗ್ಗೆ ನಿಮ್ಮನ್ನು ಶಿಕ್ಷಣ ಮಾಡಿಕೊಳ್ಳುವುದು. ಪುನರ್ವಸತಿ0ುಲ್ಲಿ ನಿಮಗೆ ಸಹಾ0ು ಮಾಡುವ, ಉತ್ತಮ ಮತ್ತು ಆರೋಗ್ಯಕರ ಜೀವನಶೈಲಿ0ುತ್ತ ನಿಮ್ಮ ಪ್ರ0ುಾಣದಲ್ಲಿ ನಿಮಗೆ ಮಾರ್ಗದರ್ಶನ ನೀಡುವ ಡೆಡ್ಡಿಕ್ಷನ್ ಕೇಂದ್ರಗಳು ಲಭ್ಯವಿದೆ.

ಪುನರ್ವಸತಿ ಕೇಂದ್ರಗಳು (ಡೆಡ್ಡಿಕ್ಷನ್ ಕೇಂದ್ರಗಳು)

ಮನೋವೈದ್ಯರು, ಮಾನಸಿಕ ಆರೋಗ್ಯ, ವೃತ್ತಿಪರರು-ಸಲಹೆಗಾರರು, ಮನಶ್ಶಾಸ್ತ್ರಜ್ಞರು ಸೇರಿದಂತೆ ವೈದ್ಯಕೀ0ು ವೃತ್ತಿಪರರ ತಂಡವು ಫಾರ್ಮಾಕೋಥೆರಪಿ0ುಲ್ಲಿ ನಿಮಗೆ ಸಹಾ0ು ಮಾಡುತ್ತದೆ ಜೊತೆಗೆ ಒತ್ತಡವನ್ನು ನಿಭಾಯಿಸಲು ಆರೋಗ್ಯಕರ ನಿಭಾಯಿಸುವ ಕಾ0ುರ್ವಿಧಾನಗಳನ್ನು ಕಲಿ0ುುವುದು, ವೈ0ುಕ್ತಿಕ ಅಭಿವೃದ್ಧಿ, ಪ್ರೇರಣೆ ಮತ್ತು ಮತ್ತಷ್ಟು ಕಡುಬ0ುಕೆ ಮತ್ತು ಹಿಂತೆಗೆದುಕೊಳ್ಳುವ ಲಕ್ಷಣಗಳ ನಿರ್ವಹಣೆ0ು ಮೇಲೆ ಕೆಲಸ ಮಾಡುತ್ತದೆ. ವೈ0ುಕ್ತಿಕ ಅವಧಿಗಳ ಹೊರತಾಗಿ, ಗುಂಪು ಚಿಕಿತ್ಸೆ0ು ತುಂಬಾ ಪರಿಣಾಮಕಾರಿ ಮತ್ತು ಸಹಾ0ುಕವಾಗಿದೆ ಎಂದು ಕಂಡುಬಂದಿದೆ. ಅನಾಮಧೇ0ು ಗುಂಪು ಚಿಕಿತ್ಸೆ0ುೂ ಲಭ್ಯವಿದೆ. ಗುಂಪು ಚಿಕಿತ್ಸೆ0ು ಬೆಂಬಲವನ್ನು ನೀಡುವಲ್ಲಿ ಸಹಾ0ು ಮಾಡುತ್ತದೆ, ಮಾದಕ ವ್ಯಸನದಿಂದ ಚೇತರಿಸಿಕೊಳ್ಳುವಲ್ಲಿ ಸಮಚಿತ್ತತೆ0ುನ್ನು ಪ್ರೋತ್ಸಾಹಿಸುತ್ತದೆ. ಈ ಸಭೆಗಳು ಸಮುದಾ0ುವನ್ನು ಒಟ್ಟುಗೂಡಿಸುವ ಭಾವನೆ0ುನ್ನು ಬೆಳೆಸಲು ಮತ್ತು ಇತರರು ಮತ್ತು ಸ್ವ0ುಂ ಬಗ್ಗೆ ತಿಳುವಳಿಕೆ ಮತ್ತು ಸಹಾನುಭೂತಿ0ುನ್ನು ಹೆಚ್ಚಿಸಲು ಸಹಾ0ು ಮಾಡುತ್ತದೆ. ಅವು ಮತ್ತಷ್ಟು ಚಿಕಿತ್ಸೆ0ುನ್ನು ಪಾಲಿಸಲು ಸಹಾ0ು ಮಾಡುತ್ತವೆ ಮತ್ತು ವ್ಯಕ್ತಿಗಳಲ್ಲಿ ಆತ್ಮ ವಿಶ್ವಾಸ ಮತ್ತು ಸ್ವಾಭಿಮಾನವನ್ನು ಹೆಚ್ಚಿಸುತ್ತವೆ

# ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿ: ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ




ಕೊಪ್ಪಳ : ಕೊಪ್ಪಳ ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದಲ್ಲಿ ನಾಡಪ್ರಭು ಶ್ರೀ ಕೆಂಪೇಗೌಡರ ಜಯಂತಿಯನ್ನು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಆಚರಿಸಲಾಯಿತು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ನಾಡಪ್ರಭು ಶ್ರೀ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಕೊಟ್ರೇಶ ಮರಬನಳ್ಳಿ, ಜಿಲ್ಲಾಧಿಕಾರಿ ಕಛೇರಿಯ ಲೆಕ್ಕಪರಿಶೋಧಕ ಹರೀಶ, ಅಂಬೇಡ್ಕರ್ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕಿ ಪುಷ್ಪಲತಾ, ಜಿಲ್ಲಾಧಿಕಾರಿ ಕಛೇರಿಯ ಪ್ರಥಮ ದರ್ಜೆ ಸಹಾಯಕ ವಿಜಯ್ ಪುರಾಣಿಕ, ಸುನೀತಾ ಗಾಯಕ್ವಾಡ್, ರುಕ್ಮಾ ದೋತ್ರೆ ಸೇರಿದಂತೆ ಜಿಲ್ಲಾಧಿಕಾರಿ ಕಚೇರಿಯ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

***

# ಹಜ್ ಯಾತ್ರಿಗಳಿಗೆ ಗೌರವ ಸನ್ಮಾನ



ಮುದ್ದೇಬಿಹಾಳ:ಪಟ್ಟಣದದಿಂದ ಹಜ್ ಯಾತ್ರಿಗಳು ನಿಮಿತ್ತವಾಗಿ 42 ದಿನಗಳವರಗೆ ಪ್ರಾಥನೆ ಸಲ್ಲಿಸಿ ಹಜ್ ಕ್ರಿಯೆಯನ್ನು ಮುಗಸಿ ಮರಳಿ ತಮ್ಮ ಸ್ವಗ್ರಾಮಕ್ಕೆ ಆಗಮಿಸಿದ ಹಿರಿಯರಾದ ಖಾಲಿದಾಬೆಗಂ ಶ,ಹಡಲಗೇರಿ ಹಾಗೂ ಅವರ ಪುತ್ರ ಮೈಹಿಬೂಬು ಶ ಹಡಲಗೇರಿ ಅವರಿಗೆ ಸನ್ಮಾನಿಸಲಾಯಿತು, ಈ ಸಂದರ್ಭದಲ್ಲಿ ಮುದ್ದೇಬಿಹಾಳ ಹಿರಿಯರಾದ ಮುನ್ನಾ ಸಗರ್,ಮುತ್ತು ರಾಯಗೊಂಡ,ವಕೀಲರು ಎಂ.ಸಿ.ಮ್ಯಾಗೇರಿ,ಗಣೇಶ ಸೇಡಜಿ, ರೇವಣಸಿದ್ದ ನಾಯಕ ಸರೂರ,ಅಮನ್ ಕೇಸಾಪುರ, ಚಂದ್ರು ಸೇರಿದಂತೆ ಭಾಗವಹಿಸಿದ್ದರು.

*****

# ಸಹಕಾರಿ ಸಂಘದಲ್ಲಿ ಇ-ಸ್ಟ್ಯಾಂಪ್ ಸೌಲಭ್ಯ ಪ್ರಾರಂಭ



ರಾಯಬಾಗ: ಯಕ್ಸಂಬಾದ ಮಾಜಿ ಸಂಸದ ಅಣ್ಣಾಸಾಹೇಬ ಜೊಲ್ಲೆಯವರು ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಶಾಖೆಗಳನ್ನು ಗ್ರಾಮೀಣ ಭಾಗದಲ್ಲಿ ಪ್ರಾರಂಭಿಸಿ, ರೈತರಿಗೆ ಮತ್ತು ಗ್ರಾಹಕರಿಗೆ ಸಾಕಷ್ಟು ಅನುಕೂಲ ಮಾಡಿಕೊಟ್ಟಿದ್ದಾರೆಂದು ಶಾಸಕ ಡಿ.ಎಮ್.ಐಹೊಳೆ ಹೇಳಿದರು.

ಶನಿವಾರ ತಾಲೂಕಿನ ಭಿರಡಿ ಗ್ರಾಮದಲ್ಲಿ ಯಕ್ಸಂಬಾದ ಜ್ಯೋತಿ ವಿವಿಧ ಉದ್ದೇಶಗಳ ಸೌಹಾರ್ದ ಸಹಕಾರಿ ಸಂಘದ ಭಿರಡಿ ಶಾಖೆಯಲ್ಲಿ ಇ-ಸ್ಟ್ಯಾಂಪ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಪ್ರತಿಯೊಂದಕ್ಕೂ ಇಂದು ಇ-ಸ್ಟ್ಯಾಂಪ್ ಅತ್ಯಂತ ಅವಶ್ಯಕತೆ ಇರುವುದರಿಂದ, ಗ್ರಾಹಕರಿಗೆ ಅನುಕೂಲವಾಗಲು ಈ ಸಹಕಾರಿ ಸಂಘದಲ್ಲಿ ಇ-ಸ್ಟ್ಯಾಂಪ್ ಸೌಲಭ್ಯ ಪ್ರಾರಂಭಿಸಿದ್ದು ಇದರ ಸದುಪಯೋಗವನ್ನು ಗ್ರಾಮಸ್ಥರು ಪಡೆದುಕೊಳ್ಳಬೇಕೆಂದು ಹೇಳಿದರು.

ರಾಮು ನಿಶಾನಂದಾರ, ಮುರಗೇಂದ್ರ ನಿಶಾನಂದಾರ, ಮಹಾದೇವ ಬೊರಗಾಂವೆ, ಶ್ರೀಧರ ಕುಡಚೆ, ಸದಾಶಿವ ಘೋರ್ಪಡೆ, ಅಣ್ಣಾಸಾಹೇಬ ಖೆಮಲಾಪೂರೆ, ಸದಾಶಿವ ಹಳಿಂಗಳಿ, ವಿರೂಪಾಕ್ಷಿ ಕುಡಚೆ, ಶ್ರೀಕಾಂತ ಯಲಗುದ್ರೆ, ಮಲ್ಲಿಕಾರ್ಜುನ ಹೊಸುರ, ಪಾವರ್ತಿ ಗಂಗಾಯಿ, ಮಲ್ಲಿಕಾರ್ಜುನ ಡೊಣವಾಡೆ, ಗೋಪಾಲ ಬಹಾದ್ದೂರ, ಚಂದ್ರು ಅಂಕಲಿ, ಬಸವರಾಜ ಡೊಣವಾಡೆ, ಭೋಲಾ ಕಡಾಳೆ ಸೇರಿ ಅನೇಕರು ಇದ್ದರು.

# ಕೆಸಿಸಿಐ ಕಾರ್ಯದರ್ಶಿ ರವೀಂದ್ರ ಬಳಿಗಾರರಗೆ ಸನ್ಮಾನ




ಹುಬ್ಬಳ್ಳಿ: ನೈಋತ್ಯ ರೈಲ್ವೆ ವಲಯ ಬಳಕೆದಾರರ ಸಲಹಾ ಸಮಿತಿಗೆ ಆಯ್ಕೆಯಾದ ಹುಬ್ಬಳ್ಳಿಯ ಕರ್ನಾಟಕ ವಾಣಿಜ್ಯೋದ್ಯಮ ಸಂಸ್ಥೆಯ ಗೌರವ ಕಾರ್ಯದರ್ಶಿ ರವೀಂದ್ರ ಬಳಿಗಾರ ಅವರನ್ನು ಸನ್ಮಾನಿಸಲಾಯಿತು. ಸಂಸ್ಥೆಯ ಅಧ್ಯಕ್ಷ ಎಸ್.ಪಿ. ಸಂಶಿಮಠ, ಸಂದೀಪ ಬಿಡಸಾ-ರಿಯಾ, ಪ್ರವೀಣ ಅಗಡಿ, ವೀರೇಶ ಮೊಟಗಿ, ಮಹೇಂದ್ರ ಸಿಂಘಿ ಹಾಗೂ ಇತರರು ಇದ್ದರು.

# ತನ್ನ ಸಮಸ್ಯೆಗೆ ದಾನದಿಂದ ಪರಿಹಾರಕೊಂಡ 'ಅಂಧ'

ರಬಕವಿ-ಬನಹಟ್ಟಿ, : ಇಲ್ಲೊಬ್ಬ ಅಂಧ ವ್ಯಕ್ತಿ ದಿನಂಪ್ರತಿ ಬಸ್ ನಿಲ್ದಾಣಕ್ಕೆ ಬಂದಾಗ ತನಗೆ ಬಸ್‌ಗಳ ಫಲಕ ವೀಕ್ಷಣೆ ಸಾಧ್ಯವಾಗದ ಕಾರಣ ಸಾರಿಗೆ ನಿಯಂತ್ರಕರಿಗೊಂದ ಧ್ವನಿವರ್ಧಕ ಕೊಡುಗೆಯನ್ನಾಗಿ ನೀಡುವ ಮೂಲಕ ಪ್ರಯಾಣಿಕರಿಗೆ ಅನುಕೂಲವಾಗುವದರೊಂದಿಗೆ ತನಗೂ ಸಹಾಯವಾಗುವಲ್ಲಿ ಕಾರಣವಾಯಿತು.



ಬನಹಟ್ಟಿಯ ಜವಾಹರಲಾಲ್(ಗೋಟು) ಡಾಗಾ ಧ್ವನಿವರ್ಧಕ ಸೆಟ್ ನೀಡಿದ ದಾನಿಯಾಗಿದ್ದಾರೆ. ಬಸ್‌ಗಳಲ್ಲಿ ಸಂಚರಿಸುವಾಗ ನಿತ್ಯ ಬನಹಟ್ಟಿ ಬಸ್ ನಿಲ್ದಾಣದಲ್ಲಿ ಸಮರ್ಪಕವಾಗಿ ಫಲಕಗಳನ್ನು ನೋಡಲು ಸಾಧ್ಯವಾಗುತ್ತಿರಲಿಲ್ಲ. ನಿಲ್ದಾಣದೊಳಗೆ ಧ್ವನಿವರ್ಧಕದ ಅವಶ್ಯವೂ ಇತ್ತು. ಇದನ್ನರಿತ ವಿಕಲಚೇತನ ಸ್ವಯಂಪ್ರೇರಿತವಾಗಿ ಒದಗಿಸಿ ಮಾನವೀಯ ಮೌಲ್ಯಕ್ಕೆ ಸಾಕ್ಷಿಯಾದ ಕಾರಣ ಸಾರಿಗೆ ಇಲಾಖೆಯು ಅವರನ್ನು ಸನ್ಮಾನಪತ್ರ ನೀಡಿ ಗೌರವಿಸಿತು.

ಪ್ರತಿ ವರ್ಷ ಸರ್ಕಾರಿ ಹಾಗು ಖಾಸಗಿ ಶಾಲೆಗಳಲ್ಲಿ ಲಕ್ಷಾಂತರ ರೂ.ಗಳ ವೆಚ್ಚದಲ್ಲಿ ಝರಾಕ್ಸ, ಶುದ್ಧ ನೀರು, ಡೆಸ್ಕ್ ಸೇರಿದಂತೆ ಇತರೆ ಸಾಮಗ್ರಿಗಳನ್ನು ಒದಗಿಸುವ ಮೂಲಕ ಶಿಕ್ಷಣ ಪ್ರೇಮಿಯಾಗಿಯೂ ಬೆಳೆಯುವಲ್ಲಿ ಕಾರಣರಾಗಿದ್ದಾರೆ.

ಲೀಲಾಬಾಯಿ ಝುಂವರ, ಶಶಿಕಲಾ ಮಂತ್ರಿ, ಶಾಲಿನಿ ಭಂಗ, ಸಾರಿಗೆ ನಿಯಂತ್ರಕರಾದ ಆನಂದ ಮೈಗೂರ, ಜಿ.ಎಸ್. ಮರನೂರ, ಹಾರೂನ್ ಬಂಡೇಬುರುಜ, ಗೋಪಾಲ ಡಾಗಾ, ಶರ್ಮಾ ಸೇರಿದಂತೆ ಅನೇಕರಿದ್ದರು.

*****

# ಅಂಕಗಳ ಬದಲಾಗಿ ಮಾನವೀಯ ಮೌಲ್ಯದೊಂದಿಗೆ ಗುರಿ ಮುಖ್ಯ




ರಬಕವಿ-ಬನಹಟ್ಟಿ,ಜೂ28: ವಿದ್ಯಾರ್ಥಿ ಜೀವನದಲ್ಲಿ ಅಂಕಗಳು ಮಹತ್ವದ್ದಲ್ಲ ಬದಲಾಗಿ ಮಾನವೀಯ ಮೌಲ್ಯಗಳ ಜೊತೆಗೆ ಗುರಿ ತಲುಪುವದು ಮುಖ್ಯವೆಂದು ಶೇಗುಣಶಿ ವಿರಕ್ತಮಠದ ಶ್ರೀಮಹಾಂತಪ್ರಭು ಸ್ವಾಮೀಜಿ ಅಭಿಪ್ರಾಯಪಟ್ಟರು.

ಸಮೀಪದ ಹೊಸೂರಿನ ಹಜಾರೆ ಫೌಂಡೇಶನ್‌ದ ಪದ್ಮಾವತಿ ವಿಜ್ಞಾನ ಮತ್ತು ವಾಣಿಜ್ಯ ಪಪೂ ಮಹಾವಿದ್ಯಾಲಯದಲ್ಲಿ ಜರುಗಿದ ಮಿಲನ-ಪುರಸ್ಕಾರ 2025 ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಪಠ್ಯದೊಂದಿಗೆ ಪಠ್ಯೇತರ ಚಟುವಟಿಕೆಗಳೊಂದಿಗೆ ಕ್ರೀಡೆಯಲ್ಲಿ ಆಸಕ್ತಿ ತೋ-ರಿದ್ದಲ್ಲಿ ಪ್ರತಿಭಾವಂತರಾಗಲು ಸಾಧ್ಯ. ಕೇವಲ ಪುಸ್ತಕದ ಜಾಣನಾಗುವ ಬದಲು ಸಮಾಜದಲ್ಲಿ ಮಾದರಿ ವ್ಯಕ್ತಿಯಾಗಿ ಬೆಳೆಯುವದು ಅವಶ್ಯವಿದೆ ಎಂದರು. ಇದೇ ಸಂದರ್ಭ ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಕಾರ್ಯಕ್ರಮದಲ್ಲಿ ಸಂಸ್ಥೆಯ ಕಾರ್ಯಾಧ್ಯಕ್ಷರಾದ ಶ್ರೀ ಸತೀಶ ಹಜಾರೆ, ಆಡಳಿತಾಧಿಕಾರಿಗಳಾದ ಶ್ರೀಮತಿ ಭಾರತಿ ತಾಳಿಕೋಟಿ ಹಾಗೂ ಪ್ರಾಚಾರ್ಯರಾದ ಶ್ರೀ ಶ್ರೀಶೈಲ ಕುಂಬಾರ ಎಲ್ಲ ಉಪನ್ಯಾಸಕರು ಮತ್ತು ಪದವಿ ಮಹಾವಿದ್ಯಾಲಯದ ಪ್ರಾಚರ್ಯರಾದ ಶ್ರೀ ಸತೀಶ ಬೆಳಗಲಿ ಸೇರಿದಂತೆ ಅನೇಕರಿದ್ದರು.

# ಅಧ್ಯಯನ, ಪ್ರಯತ್ನ, ದೃಢತೆಯಿಂದ ಸಾಧನೆ




ರಬಕವಿ ಬನಹಟ್ಟಿ: ವಿದ್ಯಾರ್ಥಿಗಳಿಗೆ ಜ್ಞಾನವೇ ನಿಜವಾದ ಶಕ್ತಿಯಾಗಿದೆ. ವಿದ್ಯಾರ್ಥಿಗಳು ಸತತ ಅಧ್ಯಯನ, ಪ್ರಯತ್ನ, ದೃಢತೆಯಿಂದ ಸಾಧನೆಯನ್ನು ಮಾಡಬಹುದಾಗಿದೆ. ಬದುಕಿನಲ್ಲಿ ಬರುವ ಕಷ್ಟಗಳನ್ನು ಎದುರಿಸಿ ಉತ್ತಮ ಸ್ಥಾನವನ್ನು ಪಡೆದುಕೊಳ್ಳಬೇಕು ಎಂದು ಬಾಗಲಕೋಟೆ ಪದವಿಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಪುಂಡಲೀಕ ಕಾಂಬಳೆ ತಿಳಿಸಿದರು.

ಅವರು ಶನಿವಾರ ಇಲ್ಲಿನ ಎಸ್‌ಆರ್‌ಎ ಸಂಯುಕ್ತ ಪದವಿಪೂರ್ವ ಕಾಲೇಜಿನ ಕ್ರೀಡಾ ಮತ್ತು ಸಾಂಸ್ಕೃತಿ-ಕ ಚಟುವಟಿಕೆಳ ಉದ್ಘಾಟನೆ ಮತ್ತು ಪ್ರಥಮ ವರ್ಷದ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ತಂದೆ, ತಾಯಿ, ಶಿಕ್ಷಕರೇ ನಿಜವಾದ ದೇವರು. ಸಾಧಕ ವಿದ್ಯಾರ್ಥಿಗಳು ನಮಗೆ ಪ್ರೇರಣೆಯಾಗಬೇಕು. ನಮ್ಮಲ್ಲಿ ನಮ್ಮ ಬಗ್ಗೆ ಕೀಳರಿಮೆ ಇರಬಾರದು. ಉತ್ತಮ ಪುಸ್ತಕ, ಗೆಳೆಯರು ಮತ್ತು ಹವ್ಯಾಸಗಳನ್ನು ಬೆಳೆಸಿಕೊಳ್ಳಬೇಕು. ಸಮಯವನ್ನು ನಾವು ಗೌರವಿಸಬೇಕು ಎಂದು ಕಾಂಬಳೆ ತಿಳಿಸಿದರು.

ಜನತಾ ಶಿಕ್ಷಣ ಆಡಳಿತ ಮಂಡಳಿಯ ನಿರ್ದೇಶಕ ಭೀಮಶಿ ಮಗದುಮ್ ಮಾತನಾಡಿ, ವಿದ್ಯಾರ್ಥಿಗಳು ಉತ್ತಮವಾಗಿ ಅಧ್ಯಯನ ಮಾಡುವುದರ ಜೊತೆಗೆ ತಾವು ಕಲಿತ ಕಾಲೇಜುಗೆ, ತಂದೆ ತಾಯಿ ಮತ್ತು ಶಿಕ್ಷಕರಿಗೆ ಉತ್ತಮ ಹೆಸರನ್ನು ತಂದು ಕೊಡುವ ಕಾರ್ಯ ಮಾಡಬೇಕು ಎಂದರು.

ಪ್ರತಿಭಾವಂತ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು. ಪ್ರಾಚಾರ್ಯ ಬಿ.ಆರ್.ಗೊಡ್ಡಾಳೆ, ಮಹಾದೇವ ಗಟ್ಟಿ, ಎಸ್.ಎಸ್.ಖಾನಾಪುರ, ಎಫ್.ಬಿ. ತಳವಾರ, ಶಿಲ್ಪಾ ಅಗಡಿ ಮಾತನಾಡಿದರು.

ಜನತಾ ಶಿಕ್ಷಣ ಸಂಘದ ಅಧ್ಯಕ್ಷ ಬಸವರಾಜ ಭದ್ರನವರ, ಉಪಾಧ್ಯಕ್ಷ ಬಸವರಾಜ ಭದ್ರನವರ, ಕಾರ್ಯಾಧ್ಯಕ್ಷ ಬಸವರಾಜ ಜಾಡಗೌಡ ಆಡಳಿತ ಮಂಡಳಿಯ ಸದಸ್ಯರು, ಶಂಕರ ಸೊಲ್ಲಾಪುರ, ಬಸವರಾಜ ಕೊಣ್ಣೂರ, ಕೆ.ಎಚ್.ಸಿನ್ನೂರ, ಬಿ. ನಾಗರಾಜ, ಶಿವಕುಮಾರ ಬಿರಾದಾರ ಪಾಟೀಲ, ಎಸ್.ಕೆ.ನಡುವಿನಕೇರಿ, ಮೀನಾಕ್ಷಿ ಮಿರ್ಜಿ, ಸಿ.ಎಸ್. ಚಾಂಗ್ಲೇರ್, ವಾಣಿ ಆಚನೂರ, ಎಂ.ಎಸ್. ಒಂಟಗುಡಿ ಇದ್ದರು.

# ತಂಬಾಕು, ದುಶ್ಚಟಗಳಿಂದ ಮಕ್ಕಳು ದೂರ ಇರಲಿ



ನೇಸರಗಿ. ಬಾಲ್ಯದಲ್ಲಿ ಮಕ್ಕಳು ತಂಬಾಕು ಸೇವನೆಯಿಂದ ಮುಂದೆ ಬಾಳಿ ಬದುಕುವ ಜೀವನವನ್ನು ತಾವೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ವಿದ್ಯಾರ್ಥಿಗಳು ಹಾಗೂ ಮಕ್ಕಳು ತಂಬಾಕು ಮತ್ತು ದುಶ್ಚಟಗಳಿಂದ ದೂರವಿದ್ದು ಜೀವನದಲ್ಲಿ ಮುಂದೆ ಬರಬೇಕೆಂದು ಕರ್ನಾಟಕ ಜನಜಾಗ್ರತಿ ವೇದಿಕೆಯ ವಿಠ್ಠಲ ಪಿಸೆ ಹೇಳಿದರು.

ಅವರು ಶನಿವಾರದಂದು ಸಮೀಪದ ಶ್ರೀ ಗಾಳೇಶ್ವರ ಮಠದ ಶ್ರೀ ರೇವಣಸಿದ್ದೇಶ್ವರ ಪ್ರೌಢಶಾಲೆಯಲ್ಲಿ ತಂಬಾಕು ವಿರೋಧಿ ದಿನಾಚರಣೆ ಕಾರ್ಯಕ್ರಮ ಮಾತನಾಡಿದರು. ಶಾಲೆಯ ಮುಖ್ಯ ಗುರುಗಳಾದ ಶರಣು ಮಾದಾಪುರಮಠ ಮಾತನಾಡಿ ಮಕ್ಕಳಿಗೆ ತಂಬಾಕು ಸೇವನೆಯಿಂದ ಆಗುವ ದುಷ್ಪರಿಣಾಮದ ಕುರಿತು ಮಾಹಿತಿ ನೀಡಿದರು. ಅದರ ಜೊತೆಗೆ ಪರಿಸರ ಸಂರಕ್ಷಣೆ ಕುರಿತು ಮಕ್ಕಳಿಗೆ ಮಾಹಿತಿ ನೀಡಿದರು ಹಾಗೂ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳ ಕುರಿತು ಮೆಚ್ಚುಗೆ ವ್ಯಕ್ತಪಡಿಸಿದರು.ಧರ್ಮಸ್ಥಳ ಗ್ರಾಮೀಣಭಿವೃದ್ಧಿ ಸಂಘದ ವಲಯ ಮೇಲ್ವಿಚಾರಕರಾದ ಪ್ರವೀಣ ದೊಡಮನಿ ಯೋಜನೆಯ ಕಾರ್ಯಕ್ರಮಗಳ ಕುರಿತು ಮಕ್ಕಳಿಗೆ ಮಾಹಿತಿ ನೀಡಿದರು. ನಿರೂಪಣೆಯನ್ನು ಶಿಕ್ಷಕರಾದ ಎ ಬಿ ದಳವಾಯಿ ಸ್ವಾಗತವನ್ನು ಸಹ ಶಿಕ್ಷಕರಾದ ಎಸ್ ಜಿ ಚಿಕನಿಸ, ವಂದನಾರ್ಪಣೆಯನ್ನು ಸೇವಾಪ್ರತಿನಿಧಿ ನಾಗವೇಣಿ ರವರು ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಗ್ರಾ ಪಂ ಸದಸ್ಯ ರಾಜು ಬುಗಡಿಗಟ್ಟಿ, ಶಾಲೆಯ ಶಿಕ್ಷಕರು, 100 ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ವರ್ಗಾವಣೆ ಮಾಹಿತಿ ಹಾಗೂ ಸಮಾಲೋಚನಾ ವೇಳಾ ಪಟ್ಟಿ ಪ್ರಕಟ

ಹಾವೇರಿ : ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಸಾರ್ವತ್ರಿಕ ವರ್ಗಾವಣೆ ಸಂಬಂಧಿಸಿದಂತೆ ಜೂನ್ 27 ರಿಂದ ಮುಕ್ತಾಯಗೊಳ್ಳುವವರೆಗೂ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.

ವರ್ಗಾವಣೆಗೆ ಸಂಬಂಧಿಸಿದಂತೆ ವಿವಿಧ ವೃಂದಗಳ ವರ್ಗಾವಣೆಗೆ ಅರ್ಹ ಅಧಿಕಾರಿ ಹಾಗೂ ನೌಕರರ ಅಂತಿಮ ಪಟ್ಟಿ, ಖಾಲಿ ಹುದ್ದೆಗಳ ಮಾಹಿತಿ ಹಾಗೂ ಸಮಾಲೋಚನಾ ವೇಳಾ ಪಟ್ಟಿಯನ್ನು ಇಲಾಖೆಯ ಅಂತರ್ಜಾಲದಲ್ಲಿ (https://hfwcom.karnataka.gov.in) ಪ್ರಕಟಿಸಲಾಗಿದೆ.

ಹಾವೇರಿ ಜಿಲ್ಲೆಯ ಆರೋಗ್ಯ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳು ವರ್ಗಾವಣೆ ಅಂತಿಮ ಪಟ್ಟಿಯಲ್ಲಿ ತಮ್ಮ ಹೆಸರನ್ನು ಪರಿಶೀಲಿಸಿಕೊಂಡು ತಮ್ಮ ಗುರುತಿನ ಚೀಟಿ(ಆಧಾರ ಕಾರ್ಡ್, ಪಾನ್ ಕಾರ್ಡ್ ಹಾಗೂ ಇತ್ತಿಚಿನ ವೇತನ ಪ್ರಮಾಣಪತ್ರದೊಂದಿಗೆ ಹಾವೇರಿ ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿಗೆ ಹಾಜರಾಗಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಡಿಟಿಪಿ ತರಬೇತಿಗೆ ಅರ್ಜಿ ಆಹ್ವಾನ

ಹಾವೇರಿ: ದೇವಗಿರಿ ಬ್ಯಾಂಕ್ ಆಫ್ ಬರೋಡಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವಿಬ್‌ಸೆಟಿಯಲ್ಲಿ ಹಾವೇರಿ ಜಿಲ್ಲೆಯ ನಿರುದ್ಯೋಗಿ ಯುವಕರಿಗೆ ಜುಲೈ 10 ರಿಂದ ಆಗಸ್ಟ್ 23ರವರೆಗೆ 45 ದಿನಗಳ ಉಚಿತ ಕಂಪ್ಯೂಟರ್ ಡಿಟಿಪಿ ತರಬೇತಿ ಆಯೋಜಿಸಲಾಗಿದೆ.

ಜಿಲ್ಲೆಯ 18 ರಿಂದ 45 ವರ್ಷದೊಳಗಿನ ಅಭ್ಯರ್ಥಿಗಳು ಈ ತರಬೇತಿ ಸದುಪಯೋಗ ಪಡೆದುಕೊಳ್ಳಬೇಕು. ಜಿಲ್ಲೆಯ ಗ್ರಾಮೀಣ ಭಾಗದ ಹಾಗೂ ರೇಷನ್ ಕಾರ್ಡ್ ಹೊಂದಿದವರಿಗೆ ಮಾತ್ರ ತರಬೇತಿಗೆ ಅವಕಾಶವಿದೆ ಎಂದು ಸಂಸ್ಥೆಯ ನಿರ್ದೇಶಕರು ತಿಳಿಸಿದ್ದಾರೆ

ಆಸಕ್ತರು ದಿನಾಂಕ 01-07-2025ರೊಳಗಾಗಿ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು, ಬ್ಯಾಂಕ ಆಫ್ ಬರೋಡಾ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆ ವಿಬ್‌ಸೆಟಿ, ಡಿ.ಸಿ ಆಫೀಸ್ ಕಟ್ಟಡದ ಹಿಂಭಾಗ, ದೇವಗಿರಿ- ಹಾವೇರಿ ಮೊ. 8660219375 ಸಂಪರ್ಕಿಸಲು ಕೋರಲಾಗಿದೆ.

## ಜಾತ್ರೆ ನಿಮಿತ್ಯ ಸಾರಿಗೆ ಇಲಾಖೆಯಿಂದ ಪಂಢರಪುರಕ್ಕೆ ವಿಶೇಷ ಬಸ್ ಕಾರ್ಯಾಚರಣೆ

ವಿಜಯಪುರ : ಆಷಾಡ ಏಕಾದಶಿಯ ಬೆನ್ನಲೇ ಮಹಾರಾಷ್ಟ್ರದ ಪಂಢರಪುರದಲ್ಲಿ ಜರುಗಲಿರುವ ಜಾತ್ರೆ ನಿಮಿತ್ಯ ಯಾತ್ರಾರ್ಥಿಗಳ ಅನಕೂಲಕ್ಕಾಗಿ ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ವಿಜಯಪುರ ವಿಭಾಗ ವತಿಯಿಂದ ಜುಲೈ 07 ರಿಂದ ಜುಲೈ 08ರವರೆಗೆ ವಿಶೇಷ ಸಾರಿಗೆ ಕಾರ್ಯಾಚರಣೆ ಮಾಡಲಿವೆ.

ವಿಜಯಪುರ, ಇಂಡಿ, ಸಿಂದಗಿ, ಮುದ್ದೇಬಿಹಾಳ, ತಾಳಿಕೋಟೆ ಹಾಗೂ ಬಸವನ ಬಾಗೇವಾಡಿ ಘಟಕ ಕೇಂದ್ರ ಬಸ್ ನಿಲ್ದಾಣಗಳಿಂದ ವಿಶೇಷ ಸಾರಿಗೆ ಬಸ್ ಕಾರ್ಯಾಚರಣೆ ಮಾಡಲಿದ್ದು, ಒಂದೇ ಗುಂಪಿನಲ್ಲಿ 47 ಯಾತ್ರಾರ್ಥಿಗಳು ಲಭ್ಯವಾದಲ್ಲಿ ಅವರ ಸ್ಥಳದಿಂದ ಪಂಢರಪುರಕ್ಕೆ ನೇರವಾಗಿ ಬಸ್ ಸೌಲಭ್ಯ ಕಲ್ಪಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ವಿಭಾಗೀಯ ಸಾರಿಗೆ ಅಧಿಕಾ-ರಿಗಳ ಮೊ.ಸಂ: 7760992252, ವಿಜಯಪುರ -1ರ ಘಟಕ ವ್ಯವಸ್ಥಾಪಕರ ಮೊ.ಸಂ:7760992263, ವಿಜಯಪುರ -2ರ ಘಟಕ ವ್ಯವಸ್ಥಾಪಕರ ಮೊ.ಸಂ:7760992264, ಇಂಡಿ ಘಟಕ ವ್ಯವಸ್ಥಾಪಕರ ಮೊ.ಸಂ:7760992265, ಸಿಂದಗಿ ಘಟಕ ವ್ಯವಸ್ಥಾಪಕರ ಮೊ.ಸಂ:7760992266, ಮುದ್ದೇಬಿಹಾಳ ಘಟಕ ವ್ಯವಸ್ಥಾಪಕರ ಮೊ.ಸಂ:7760992267, ಬಸವನ ಬಾಗೇವಾಡಿ ಘಟಕ ವ್ಯವಸ್ಥಾಪಕರ ಮೊ.ಸಂ:7760992269, ವಿಜಯಪುರ ಕೇಂದ್ರ ಬಸ್ ನಿಲ್ದಾಣ ದೂರವಾಣಿ ಸಂ: 08352- 251344 ಹಾಗೂ ಮೊ.ಸಂ: 7760992258ಗೆ ಸಂಪರ್ಕಿಸಬಹುದಾಗಿದೆ ಎಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ವಿಜಯಪುರ ವಿಭಾಗೀಯ ನಿಯಂತ್ರಣಾಧಿಕಾರಿಗಳು ಪ್ರಟಕಣೆಯಲ್ಲಿ ತಿಳಿಸಿದ್ದಾರೆ.

## ಪ್ರವೇಶಕ್ಕಾಗಿ ಅರ್ಜಿ ಆಹ್ವಾನ

ಬಾಗಲಕೋಟ : : ಪ್ರಸಕ್ತ ಸಾಲಿನ ಬೀಳಗಿ ಕ್ರಾಸ್-3 (ಕೊಪ್ಪ ಎಸ್,ಆರ್)ರ ಸರಕಾರಿ ಆದರ್ಶ ವಿದ್ಯಾಲಯದಲ್ಲಿ (ಆರ್,ಎಂ,-ಎಸ್,ಎ) 7, 8 ಹಾಗೂ 9 ನೇ ತರಗತಿಗಳಲ್ಲಿ ವಿವಿಧ ಜಾತಿ ವರ್ಗಗಳಿಗೆ ಕೆಲವು ಸೀಟುಗಳು ಖಾಲಿ ಇದ್ದು, ಅರ್ಹ ವಿದ್ಯಾರ್ಥಿಗಳಿಂದ ಅರ್ಜಿ ಸಲ್ಲಿಕೆಗೆ ಜೂನ್ 26 ರಿಂದ ಜುಲೈ 7 ವರೆಗೆ ಅವಕಾಶವಿದೆ. ಹಾಗೂ ದಾಖಲಾತಿಗಾಗಿ ಪ್ರವೇಶ ಪರೀಕ್ಷೆ ಜುಲೈ 16 ರಂದು ಬೆಳಗ್ಗೆ 10.30 ರಿಂದ ಮಧ್ಯಾಹ್ನ 1 ಗಂಟೆಯವರೆಗೆ ಆದ-ರ್ಶ ವಿದ್ಯಾಲಯದಲ್ಲಿ ನಡೆಯಲಿವೆ ಎಂದು ಶಾಲೆಯ ಮುಖ್ಯೋಪಾದ್ಯಾಯರು ಪ್ರಕಟಣೆಯಲ್ಲಿ ತಿಳಸಿದ್ದಾರೆ.

### ಸೋಮೈಯಾ ಸಕ್ಕರೆ ಕಾರ್ಖಾನೆ ಮಾಲೀಕ ಸಮೀರ ಸೋಮೈಯಾ ಅಭಿಪ್ರಾಯ

# ಸಾವಯವ ಕೃಷಿಯಿಂದ ಪರಿಸರ ಮತ್ತು ಸಮಾಜಕ್ಕೆ ಉತ್ತಮ



ಮೂಡಲಗಿ: 'ರೈತರು ಸಾವಯವ ಪದ್ಧತಿಯಲ್ಲಿಕಬ್ಬು ಬೆಳೆಯುವುದ-ರಿಂದಪರಿಸರ ಮತ್ತು ಸಮಾಜಕ್ಕೆ ಬಹು ದೊಡ್ಡಕೊಡುಗೆಯಾಗುತ್ತದೆ' ಎಂದು ಸಮೀರವಾಡಿ ಸಕ್ಕರೆ ಕಾರ್ಖಾನೆಯ ಮಾಲೀಕ (ಸಿಎಂಡಿ) ಸಮೀರ ಸೋಮೈಯಾ ಹೇಳಿದರು.

ಶುಕ್ರವಾರ ತಾಲ್ಲೂಕಿನ ಮೂಡಲಗಿಯ ಪ್ರಗತಿಪರ ರೈತರಾದ ಬಾಳಪ್ಪ ಬಿ.ಬೆಳಕೂಡ ಅವರ ತೋಟಕ್ಕೆ ಭೇಟ್ಟಿ ನೀಡಿ ಕಬ್ಬಿನ ಬೆಳೆಯಲ್ಲಿ ಮಾಡಿರುವ ಸಾಧನೆಯನ್ನು ನೋಡಿ ಮಾತನಾಡಿದರು ಕೃಷಿಯು ಪರಿಸರಕ್ಕೆ ಹಾನಿಯಾಗದಂತೆ ರೈತರು ಕಾಳಜಿವಹಿಸುವುದು ಇಂದಿನ ಅವಶ್ಯಕತೆಇದೆಎಂದರು. ಕಲ್ಲೋಳಿಯ ರೈತ ಬಾಳಪ್ಪ ಬಿ.ಬೆಳಕೂಡ ಅವರು ಕಬ್ಬು ಬೆಳೆಯಲ್ಲಿ ಅತ್ಯುತ್ತಮ ಇಳುವರಿ ಮಾಡತ್ತಿರುವುದು ಶ್ಲಾಘನೀಯವಾಗಿದೆ.ಈ ಹಿಂದೆಎಕರೆಗೆ 125 ಟನ್ ಇಳುವರಿ ಪಡೆದುದಾಖಲೆ ಮಾಡಿದ್ದರು.ಈ ಬಾರಿಎಕರೆಗೆ 140 ಟನ್ ಇಳುವರಿ ತೆಗೆಯುವಅವರಗು-ರಿಮತ್ತುಅವರ ಶ್ರಮವುನಿಜವಗಿಯೂ ಮೆಚ್ಚುವಂತದ್ದುಎಂದರು. ರೈತ ಬಾಳಪ್ಪ ಬೆಳಕೂಡ ಅವರ ತೋಟದಲ್ಲಿ ಎರೆಹುಳ ಗೊಬ್ಬರ ತೊಟ್ಟಿಗಳು, ಬಯೋಡೈಜಿಸ್ಟ್‌ಘಟಕ, ದೇಸಿ ಆಕಳು, ಎಮ್ಮೆಗಳ ಕೊಟ್ಟಿಗೆ, ಜೀವಾಮೃತ ತಯಾರಿಕೆ ಘಟಕ ಇವುಳನ್ನು ಸಮೀರ ಸೋಮೈಯಾಅವರು ವೀಕ್ಷಿಸಿದರು.

ಬೆಳಕೂಡ ಅವರು ನೈಸರ್ಗಿಕ ಸಂಗತಿಗಳನ್ನು ಬಳಸಿ ಕಡಿಮೆಖರ್ಚಿನಲ್ಲಿಅಧಿಕ ಇಳುವರಿ ಪಡೆಯುತ್ತಿರುವ ಕೃಷಿ ಪದ್ಧತಿಯು ಮಾದರಿಯಾಗಿದೆ.ರೈತರುಇಂಥ ಪದ್ಧತಿಯನ್ನು ಅನುಸರಿಸಿಕೃಷಿಯಲ್ಲಿ ಮುಂದೆ ಬರಬೇಕುಎಂದರು.

ಮಾಧವ ಸಮೀರ ಸೋಮೈಯಾ, ಡಾ. ಲ್ಯಾರಿ ವಾಕರ್, ಡಾ. ಲೀಸಾ,ಸಮೀರವಾಡಿಗೋದಾವರಿ ಬೈಯೋರಿಫೈನರಿ ಸಕ್ಕರೆಕಾಯ ರ್ನಿರ್ವಾಹಕ ನಿರ್ದೇಶಕಿ ಸಂಗೀತಾ ಶ್ರೀವಾತ್ಸವ ಕಾರ್ಯನಿರ್ವಾಹಕ ನಿರ್ದೇಶಕ ಬಾಲಚಂದ್ರ ಭಕ್ಷಿ, ಕೆಐಎಎಆರ್ ವಿಭಾಗದ ನಿರ್ದೇಶಕಡಾ. ನಂದಕುಮಾರ, ಕಬ್ಬು ವಿಭಾಗದ ಮಹಾಪ್ರಬಂಧಕ ವಿ.ಎಸ್. ಕಣಬೂರ, ವಿಶ್ವನಾಥ ಭುಜನ್ನವರ, ಸಂದೀಪನ, ಅಶೋಕ ಕುಡಚಿ, ರವಿ ಖಾನಗೌಡ್ರ, ತಾಲ್ಲೂಕು ಕೃಷಿಕ ಸಮಾಜ-ಅಧ್ಯಕ್ಷ ಅಶೋಕ ಗದಾಡಿ, ಶಂಕರ ಬೆಳಕೂಡ, ಬಸವರಾಜ ಬೆಳಕೂಡ, ಪ್ರಭುಕಡಾಡಿ, ಚಿದಾನಂದಕುಂದನವರ, ರಾಜುಕಡಾಲಗಿ, ಭೀಮಶಿ ಹೆಬ್ಬಾಳ, ಮಲ್ಲಪ್ಪಕುರಬೇಟ, ಉಮೇಶ ಪಾಟೀಲ, ಈರಣ್ಣ ಬೆಳಕೂಡ ಮತ್ತು ರೈತರು ಇದ್ದರು.

# ಕೆಂಪೆಗೌಡ ಜಯಂತಿ ಆಚರಣೆ




ತಾಳಿಕೋಟೆ, ಪಟ್ಟಣದ ಸರ್ವಜ್ಞ ವಿದ್ಯಾಪೀಠ ಕನ್ನಡ ಮತ್ತು ಆಂಗ್ಲ ಮಾಧ್ಯಮ ಪ್ರಾಥಮಿಕ ಹಾಗೂ ಪ್ರೌಢಶಾಲೆ ಯಲ್ಲಿ ಇಂದು ಬೆಂಗಳೂರು ನಿರ್ಮಾತೃ ನಾಡಪ್ರಭು ಕೆಂಪೇಗೌಡನವರ ಜಯಂತೋತ್ಸವವನ್ನು ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಸ್ಥಾಪಕ ಅಧ್ಯಕ್ಷರಾದ ಸಿದ್ದನಗೌಡ ಮಂಗಳೂರು ಮುಖ್ಯೋಪಾಧ್ಯರಾದ ಸಂತೋಷ ಪವಾರ, ರಾಜು ಜವಳಗೇರಿ, ಭೀಮನಗೌಡ ಸಾಸನೂರ, ರಸೂಲಸಾ ತುರ್ಕನಗೇರಿ, ರವಿಕುಮಾರ ಮಲ್ಲಾಬಾದಿ, ಬಸವರಾಜ ಸವದತ್ತಿ , ಸಿದ್ದನಗೌಡ ಮೂದನೂರು, ಸಂಗಮೇಶ ಬಿರಾದಾರ, ಶರಣಗೌಡ ಕಾಚಾಪುರ, ಸಂಜೀವಕುಮಾರ ರಾಠೋಡ. ರೂಪಾ ಪಾಟೀಲ, ಶಿವಲೀಲಾ ಚುಂಚನೂರ, ದೇವಿಂದ್ರ ಗುಳೆದ, ಅನಿತಾ ಚೌದ್ರಿ, ಸಂಗೀತ ಬಿರಾದಾರ, ಶಿವಕುಮಾರ ಕುಂಬಾರ, ಮೇಘ ಪಾಟೀಲ, ರಾಜಬಿ ಬಿದರಿ, ತನುಶ್ರೀ ಮಹೇಂದ್ರಕರ್, ಮಾರುತಿ ಕಾರ್ಬಾರಿ, ದೇವರಾಜ್ ದೇಸಾಯಿ, ಶಂಕ್ರಮ್ಮ ಕಿರ್ದಹಳ್ಳಿ, ನಾಗರತ್ನ ಮೈಲೇಶ್ವರ, ಮುಬಿನ ಮುರಾಳ, ಬೋರಮ್ಮ ಜ್ಯೋತಿ ಪೊಲೀಸ ಪಾಟೀಲ, ಶೃತಿ ಚೌದರಿ, ರವಿಕುಮಾರ ಅನದಿನ್ನಿ, ಕುಮಾರ ಮೊಕಾಶಿ, ಹೀನಾಕೌಸರ ಸನದಿ, ಮುಬಾರಕ ಬನಹಟ್ಟಿ, ವಿಶ್ವನಾಥ್ ಭಜಂತ್ರಿ ಮೊದಲಾದವರು ಉಪಸ್ಥಿತರಿದ್ದರು.

# ದೇಶಾಭಿಮಾನ ಮೂಡಿಸುವಲ್ಲಿ ಭಾರತ ಸೇವಾದಳದ ಪಾತ್ರ ಹಿರಿದು




ಬಸವನಬಾಗೇವಾಡಿ, ಮಕ್ಕಳಲ್ಲಿ ದೇಶಾಭಿಮಾನ ಮೂಡಿಸುವಲ್ಲಿ ಭಾರತ ಸೇವಾದಳದ ಪಾತ್ರ ಹಿರಿದು ಎಂದು ಕ್ಷೇತ್ರಶಿಕ್ಷಣಾಧಿಕಾರಿ ವಸಂತ ರಾಠೋಡ ಹೇಳಿದರು.

ಪಟ್ಟಣದ ಬಸವೇಶ್ವರ ಸರ್ಕಾರಿ ಪಪೂ ಕಾಲೇಜಿನ ಆವರಣದಲ್ಲಿರುವ ಭಾರತ ಸೇವಾದಳದ ಕಾರ್ಯಾಲಯದಲ್ಲಿ ಶುಕ್ರವಾರ ಜರುಗಿದ ಭಾರತ ಸೇವಾದಳದ ತಾಲೂಕು ಮಟ್ಟದ ಮಿಲಾಪ್ ಶಿಬಿರವನ್ನು ಉದ್ಘಾಟಿಸಿ, ಭಾರತ ಸೇವಾದಳದ ಚಟುವಟಿ-ಕೆಗಳು ನಿರಂತರವಾಗಿ ಶಾಲೆಗಳಲ್ಲಿ ನಡೆಯಬೇಕು. ನಾಡಗೀತೆ, ರಾಷ್ಟ್ರಗೀತೆಯನ್ನು ಲಯಬದ್ಧವಾಗಿ ಕಲಿಸುವಲ್ಲಿ ಸೇವಾದಳದ ಶಿಕ್ಷಕರು ಮಾಡುತ್ತಿರುವದು ಶ್ಲಾಘನೀಯ. ಮಕ್ಕಳಲ್ಲಿ ಶಿಸ್ತು, ದೇಶಭಕ್ತಿ ಬೆಳೆಯುವಂತೆ ಮಾಡುವ ಮೂಲಕ ಅವರನ್ನು ಸತ್ಪ್ರಜೆಗಳನ್ನಾಗಿ ತಯಾರು ಮಾಡಬೇಕೆಂದರು.

ಭಾರತ ಸೇವಾದಳ ರಾಜ್ಯ ಉಪಾಧ್ಯಕ್ಷ ಶಿವನಗೌಡ ಬಿರಾದಾರ ಮಾತನಾಡಿ, ಮಕ್ಕಳಲ್ಲಿ ಪ್ರಾಥಮಿಕ ಹಂತದಿಂದಲೇ ಶಿಸ್ತು, ಸಂಯಮ, ಧೈರ್ಯ, ಸಹನೆಯ ಗುಣಗಳನ್ನು ಕಲಿಸಬೇಕು. ಸೇವಾದಳದ ಚಟುವಟಿಕೆಗಳ ಮೂಲಕ ರಾಷ್ಟ್ರೀಯ ಭಾವೈಕ್ಯತೆ, ದೇಶಪ್ರೇಮ ಜಾಗೃತಗೊಳಿಸಬೇಕು. ಮಕ್ಕಳಿಗೆ ಶಿಕ್ಷಣದ ಜೊತೆಗೆ ದೇಶಪ್ರೇಮದ ಪಾಠ ಕಲಿಸಬೇಕೆಂದರು.

ತಾಲೂಕು ಭಾರತ ಸೇವಾದಳದ ಕಾರ್ಯದರ್ಶಿ ಆರ್.ಜಿ.ಅಳ್ಳಗಿ ಮಾತನಾಡಿ, ಭಾರತ ಸೇವಾದಳವು ನಾ.ಸು.ಹರ್ಡೀಕರ ನೇತೃತ್ವದಲ್ಲಿ ದೇಶದ ಸ್ವಾತಂತ್ರ್ಯ ತಂದುಕೊಡುವಲ್ಲಿ ಪ್ರಮುಖ ಪಾತ್ರ ವಹಿಸಿದೆ. ಭಾರತ ಸೇವಾದಳದ ಚಟುವಟಿ-ಕೆಗಳು ಮಕ್ಕಳಲ್ಲಿ ದೇಶಪ್ರೇಮ, ಶಿಸ್ತು ಮೈಗೂಡಿಸುತ್ತದೆ. ಭಾರತ ಸೇವಾದಳದ ಶಿಕ್ಷಕರು ಮಕ್ಕಳಲ್ಲಿ ನೈತಿಕ ಶಿಕ್ಷಣ, ದೇಶಪ್ರೇಮದ ಶಿಕ್ಷಣವನ್ನು ನೀಡಬೇಕೆಂದರು.

ಅಧ್ಯಕ್ಷತೆ ವಹಿಸಿದ್ದ ಭಾರತ ಸೇವಾದಳದ ತಾಲೂಕು ಸಮಿತಿ ಅಧ್ಯಕ್ಷ ಎಸ್.ಐ. ಗಚ್ಚಿನವರ, ತಾಲೂಕು ಭಾರತ ಸೇವಾದಳದ ಖಜಾಂಚಿ ವ್ಹಿ.ಬಿ.ಮರ್ತುರ, ತಾಲೂಕು ಭಾರತ ಸೇವಾದಳದ ಗೌರವಾಧ್ಯಕ್ಷ ಎಫ್.ಡಿ.ಮೇಟಿ, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಎಸ್.ಎಸ್.ಅವಟಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಸಮಿತಿ ಸದಸ್ಯ ಅಶೋಕ ಗುಡದಿನ್ನಿ, ಸದಸ್ಯರಾದ ನಾಗಪ್ಪ ಕ್ವಾಟಿ, ಸಾವಿತ್ರಿ ಕಲ್ಯಾಣಶೆಟ್ಟಿ, ಎ.ಐ.ಮಠಪತಿ, ಜಿ.ವೈ.ನಾಗರಾಳ, ತಾಲೂಕು ಸಂಘಟಕ ಬಿ.ವ್ಹಿ.ಚಕ್ರಮನಿ ಇತರರು ಇದ್ದರು. ಭಾರತ ಸೇವಾದಳದ ವಲಯ ಸಂಘಟಕ ನಾಗೇಶ ಡೋಣೂರ ಪ್ರಾಸ್ತವಿಕವಾಗಿ ಮಾತನಾಡಿದರು. ಶಿವು ಮಡಿಕೇಶ್ವರ ಸ್ವಾಗತಿಸಿದರು.ಕೊಟ್ರೇಶ ಹೆಗ್ಡಾಳ ನಿರೂಪಿಸಿದರು. ಇದೇ ಸಂದರ್ಭದಲ್ಲಿ ಭಾರತ ಸೇವಾದಳದ ಕಾರ್ಯಕರ್ತರು ಜೂನ್ ತಿಂಗಳಿಂದ ಮಾರ್ಚ್ ತಿಂಗಳವರೆಗಿನ ವಾರ್ಷಿಕ ಯೋಜನೆಯನ್ನು ವಿತರಿಸಲಾಯಿತು.

# ಬಾಗಲಕೋಟೆ ನಗರದಲ್ಲಿವೆ ಎಐ ಕ್ಯಾಮೆರಾ: ಸಂಚಾರ ನಿಯಮ ಉಲ್ಲಂಘಿಸಿದ್ರೆ ಮನೆಗೆ ಬರಲಿದೆ ದಂಡ ಪಾವತಿ ರಶೀದಿ

ಬಾಗಲಕೋಟೆ : ವಾಹನ ಸವಾರರೇ ಇನ್ನು ಮುಂದೆ ಸಂಚಾರ ನಿಯಮ ಪಾಲಿಸದೇ ಇದ್ದಲ್ಲಿ ಪೊಲೀಸರು ಏನೂ ಮಾಡಲ್ಲ. ಆದ-ರೆ, ದಂಡದ ಪಾವತಿ ಪ್ರತಿ ಮಾತ್ರ ಮನೆಗೆ ಬರುತ್ತದೆ.

ನಗರ ಪ್ರಮುಖ ರಸ್ತೆ ಹಾಗೂ ವೃತ್ತದಲ್ಲಿ ಸಿಸಿಟಿವಿ ಕಣ್ಗಾವಲು ಇರುತ್ತದೆ. ರಸ್ತೆಯನ್ನು ಸುರಕ್ಷತೆಯಾಗಿ ಇಡಲು ಹಾಗೂ ವಾಹನ, ಬೈಕ್ ಸವಾರರು ಸುರಕ್ಷತೆಯಿಂದ ಇರಬೇಕು ಹಾಗೂ ಸಂಚಾರಿ ನಿಯಮಗಳನ್ನು ಪ್ರತಿಯೊಬ್ಬರು ಕಡ್ಡಾಯವಾಗಿ ಪಾಲಿಸಬೇಕು ಎಂದು ಜಿಲ್ಲಾ ಪೊಲೀಸ್ ಇಲಾಖೆ ಹೊಸ ಹೆಜ್ಜೆಯನ್ನು ಇಡುವ ಮೂಲಕ ಕಟ್ಟುನಿಟ್ಟಾದ ಕಾನೂನು ಜಾರಿ ಮಾಡಲು ಮುಂದಾಗಿದೆ.

ಇಂಟಲಿಜಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್??ನಿಂದ (ಐಟಿ-ಎಂಎಸ್) ಸಂಚಾರಿ ನಿಯಮ ಉಲ್ಲಂಘಿ-ಸುವವರ ಮೇಲೆ ದಂಡ ಹಾಕುವ ಕೆಲಸ ನಗರದಲ್ಲಿ ಪ್ರಾರಂಭವಾಗಿದೆ. ಬಾಗಲಕೋಟೆಯ ಹಳೆ ನಗರ, ನವನಗರ, ವಿದ್ಯಾಗಿರಿ ಸೇ-ರಿದಂತೆ ಬಾಗಲಕೋಟೆ ವ್ಯಾಪ್ತಿಯಲ್ಲಿ 325 ಹೈ ರೆಸಲ್ಯೂಷನ್ ಇರುವ ಸಿಸಿ ಕ್ಯಾಮರಾಗಳನ್ನು ಅಳವಡಿಸಲಾಗಿದೆ. ಇದಲ್ಲದೇ 20 ಎಐ ಕ್ಯಾಮರಾ ಹಾಕಿದ್ದು, ಇವುಗಳು ಸಂಚಾರಿ ನಿಯಮ ಉಲ್ಲಂಘಿಸುವ ವಾಹನ ಸವಾರರ ಬೈಕು, ವಾಹನದ ನಂಬರ್ ಪ್ಲೇಟ್‌ಗಳನ್ನು ನಿಚ್ಛಳವಾಗಿ ಗುರುತಿಸಿ, ಭಾವಚಿತ್ರ ನೀಡುವಂತಹ ಸಾಮರ್ಥ್ಯ ಹೊಂದಿವೆ. ಈ ಕ್ಯಾಮರಾಗಳು ನಿಯಮ ಉಲ್ಲಂಘಿಸುವ ಬೈಕು, ವಾಹನ ಸವಾರರನ್ನು ಪತ್ತೆ ಮಾಡಲಿವೆ. ನಗರದಲ್ಲಿ ಕ್ಯಾಮರಾಗಳು ಫುಲ್ ಅಲರ್ಟ್ ಆಗಿವೆ.

ಎಸ್ಪಿ ಆಫೀಸ್ ಕಂಟ್ರೋಲ್ ರೂಮ್‌ನಿಂದ ಎಚ್ಚರ: ಪ್ರಮುಖ ರಸ್ತೆ, ವರ್ತಲುಗಳಲ್ಲಿ ಕ್ಯಾಮರಾ ಜತೆಗೆ ಸಾರ್ವಜನಿಕರಿಗೆ ಎಚ್ಚ-ರಿಕೆಯ ಸಂದೇಶವನ್ನು ನೀಡಲಾಗುತ್ತಿದೆ. ಹೆಲ್ಮೇಟ್, ಸೀಟ್ ಬೆಲ್ಟ್ ಹಾಕಿಲ್ಲದಿರುವುದು, ರ್‍ಯಾಶ್ ಡ್ರೈವಿಂಗ್, ಮೊಬೈಲ್ ನಲ್ಲಿ ಮಾತನಾಡುವುದನ್ನು ಇವು ಪತ್ತೆ ಮಾಡಲಿವೆ.

ಅದನ್ನು ಆಧರಿಸಿ ಅಲ್ಲಲ್ಲಿ ಹಾಕಿರುವ ಧ್ವನಿವರ್ಧಕ ಮೂಲಕ ಕಂಟ್ರೋಲ್ ರೂಮ್‌ನಿಂದ ಎಚ್ಚರಿಕೆಯ ಸಂದೇಶ ನೀಡಲಾಗುತ್ತಿದೆ. ಅಷ್ಟೊಂದು ತಂತ್ರಜ್ಞಾನವನ್ನು ಪೊಲೀಸ್ ಇಲಾಖೆ ಬಳಸಿಕೊಂಡಿದೆ. ಎಸ್ಪಿ ಕಚೇರಿಯಲ್ಲಿ ಸಿಸಿ ಕ್ಯಾಮರಾ ಕಂಟ್ರೋಲ್ ರೂಂ ತೆರೆಯಲಾಗಿದೆ. ನಗರದಲ್ಲಿ ಯಾರೇ ಸಂಚಾರಿ ನಿಯಮ ಉಲ್ಲಂಘಿಸಿಸುವವರ ಮುಖ ಚಹರೆಯನ್ನು ಕ್ಯಾಮರಾಗಳು ಗುರುತಿಸಲಿವೆ.

ಐಟಿಎಂಎಸ್ ಪರಿಣಾಮಕಾ-ರಿಯಾಗಿ ಕೆಲಸ : ಇಂಟಲಿಜಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್ ಪರಿಣಾಮಕಾ-ರಿಯಾಗಿ ಕೆಲಸ ಮಾಡುತ್ತಿದೆ. ನಿಯಮ ಉಲ್ಲಂಘಿಸಿ ರಸ್ತೆ ಬಿಟ್ಟು ವಾಹನ, ಬೈಕು



ಸವಾರರು ಜಾರಿಕೊಂಡು ಮನೆಗೆ ಹೋದರೂ ನಿಯಮ ಉಲ್ಲಂಘಿಸಿದ್ದರ ಬಗ್ಗೆ ನೇರವಾಗಿ ಮನೆಗೆ ದಂಡದ ಪಾವತಿ ಪ್ರತಿ ಬರಲಿದೆ.

ಬೋಜಾ ಕೊಡಲಿದೆ : ನಿಯಮ ಉಲ್ಲಂಘಿಸಿ ದಂಡ ಪಾವತಿಸದ ವಾಹನ ಸವಾರರ ಪೂರ್ಣ ಡಾಟಾ ಎಐ ಕ್ಯಾಮರಾಗಳ ಮೂಲಕ ಪತ್ತೆಯಾಗಿ ಎಸ್ಪಿ ಕಚೇರಿಯ ಕಂಟ್ರೋಲ್ ರೂಂಗೆ ಮಾಹಿತಿ ರವಾನೆಯಾಗಲಿದೆ. ಇದಕ್ಕೆ ಆರ್‌ಟಿಒ ಕಚೇ-ರಿಗೆ ಲಿಂಕ್ ಇದೆ. ದಂಡ ಪಾವತಿಸದಿದ್ದರೆ ವಾಹನಗಳ ಮೇಲೆ ಬೋಜಾ ಕೊಡಲಿದೆ.

ತಂಡವಾಗಿ ಪೊಲೀಸ್ ಇಲಾಖೆ ಕೆಲಸ : ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ, ಹೆಚ್ಚುವರಿ ಪೊಲೀಸ್ ವ-ರಿಷ್ಠಾಧಿಕಾರಿ ಪ್ರಸನ್ ದೇಸಾಯಿ, ಡಿವೈಎಸ್‌ಪಿ ಗಣಪತಿ ಸುತಾರ, ಎಲ್ಲಾ ಠಾಣೆಗಳ ಸಿಪಿಐ, ಪಿಎಸ್‌ಐ ಮತ್ತು ಸಿಬ್ಬಂದಿಯವರು ರಸ್ತೆ ಸುರಕ್ಷತೆ, ವಾಹನ ಸವಾರರ ಸುರಕ್ಷತೆಗೆ ಒತ್ತು ಕೊಟ್ಟು ತಂಡವಾಗಿ ಕೆಲಸ ಮಾಡುತ್ತಿರುವುದು ನಗರದಲ್ಲಿ ಪರಿಣಾಮ ಬೀರಿದೆ.

**ವಾಹನ ಸವಾರರು ಪಾಲಿಸಬೇಕಾದ ನಿಯಮಗಳು :** 'ಬೈಕ್ ಸವಾರರು ಹೆಲ್ಮೇಟ್ ಕಡ್ಡಾಯವಾಗಿ ಹಾಕಿಕೊಳ್ಳಬೇಕು. ತ್ರಿಬಲ್ ರೈಡಿಂಗ್ ಮಾಡಬಾರದು, ವಾಹನ, ಬೈಕುಗಳಲ್ಲಿ ಹೋಗುವಾಗ ಮೊಬೈಲ್ ಬಳಸುವಂತಿಲ್ಲ. ವಾಹನ ಸವಾರರು ಕಡ್ಡಾಯವಾಗಿ ಸೀಟ್ ಬೆಲ್ಟ್, ಡ್ರೆಸ್ ಕೋಡ್ ಹಾಕಿರಬೇಕು. ಮದ್ಯಪಾನ ಮಾಡಿ ವಾಹನ ಓಡಿಸಬಾರದು. ರಸ್ತೆಗಳಲ್ಲಿ ರ್‍ಯಾಶ್ ಡ್ರೈವಿಂಗ್ ಮಾಡಕೂಡದು. ವಾಹನ, ಬೈಕುಗಳಿಗೆ ಸಂಬಂಧಿಸಿದ ಕಾಗದ ಪತ್ರಗಳನ್ನು ಇಟ್ಟುಕೊಳ್ಳಬೇಕು. ಇವುಗಳನ್ನು ಪಾಲಿಸದವರ ಮನೆಗೆ ದಂಡದ ಪಾವತಿ ಪ್ರತಿ ಬರಲಿದೆ' ಎಂದು ಎಸ್‌ಪಿ ಅಮರನಾಥ ರೆಡ್ಡಿ ತಿಳಿಸಿದ್ದಾರೆ.

ಹೆಚ್ಚುವರಿ ಪೊಲೀಸ್ ಇಲಾಖೆ ಅಧಿಕಾರಿ ಪ್ರಸನ್ ದೇಸಾಯಿ ಅವರು ಮಾತನಾಡಿದ್ದು, 'ವಾಹನ ಸವಾರರ ಸುರಕ್ಷತೆ, ರಸ್ತೆ ಸುರಕ್ಷತೆಗೆ ಐಟಿಎಂಎಸ್ ವ್ಯವಸ್ಥೆಯನ್ನು ಬಾಗಲಕೋಟೆಯಲ್ಲಿ ಜಾರಿ ಮಾಡಲಾಗಿದೆ. ಸಂಚಾರಿ ನಿಯಮಗಳನ್ನು ಉಲ್ಲಂಘಿಸುವ ಬೈಕ್, ವಾಹನ ಸವಾರರ ಮೇಲೆ ಮೇಲೆ ಆರ್ಟಿಸಿಪಿಲ್ ಇಂಟಲಿಜಂಟ್ ಕ್ಯಾಮರಾ ಕಣ್ಣು ಇಡಲಿದ್ದು, ನಿಯಮ ಉಲ್ಲಂಘನೆ ಕ್ಯಾಪ್ಚರ್ ಮಾಡಲಿದೆ. ನಿಯಮ ಉಲ್ಲಂಘಿಸಿದ ವಾಹನ, ಬೈಕ್ ಸವಾರರ ಮನೆಗೆ ದಂಡದ ರಸೀದಿ ಬರಲಿದೆ. ಬಾಗಲಕೋಟೆ ಸೇರಿ 19 ಕಡೆ ದಂಡ ಭರಣಾ ಕೇಂದ್ರಗಳನ್ನು ತೆರೆಯಲಾಗಿದೆ. ಅಲ್ಲಿ ದಂಡವನ್ನು ಪಾವತಿಸಬೇಕು. ಸಾರ್ವಜನಿಕರ ಸುರಕ್ಷತೆ, ರಸ್ತೆ ಸುರಕ್ಷತೆಗೋಸ್ಕರ ಈ ಕಾನೂನು ಕಟ್ಟುನಿಟ್ಟಾಗಿ ಪ್ರತಿಯೊಬ್ಬರು ಪಾಲಿಸಬೇಕಾಗಿದೆ' ಎಂದು ತಿಳಿಸಿದ್ದಾರೆ.

ಈ ಕುರಿತು ಡಿಎಸ್‌ಪಿ ಗಜಾನನ ಸುತಾರ ಅವರು ಮಾತನಾಡಿದ್ದು, 'ಜಿಲ್ಲೆಯಲ್ಲಿ ಇಂಟ-ಲಿಜೆಂಟ್ ಟ್ರಾಫಿಕ್ ಮ್ಯಾನೇಜ್‌ಮೆಂಟ್ ಸಿಸ್ಟಮ್ ಜಾರಿಗೊಳಿಸಿದ್ದೇವೆ.

ಎಐ ಕ್ಯಾಮೆರಾ ಮೂಲಕ ಸಂಚಾರ ನಿಯಮ ಉಲ್ಲಂಘನೆಯನ್ನು ಕ್ಯಾಪ್ಚರ್ ಮಾಡುತ್ತೇವೆ. ನಿಯಮ ಉಲ್ಲಂಘನೆಯಾದ ಕೂಡಲೇ ಆರ್‌ಸಿ ಓನರ್‌ಗೆ ದಂಡ ಕಟ್ಟಿ ಎಂದು ಪೋಸ್ಟ್ ಮೂಲಕ ಅಥವಾ ಮೆಸೇಜ್ ಮೂಲಕ ರಶೀದಿಯನ್ನು ಕಳುಹಿಸಿಕೊಡುತ್ತೇವೆ. ಬಿಲ್ ಕಟ್ಟುವವರೆಗೂ ಯಾವುದೇ ಆರ್‌ಟಿಒ ಕೆಲಸವನ್ನು ಮಾಡಿಕೊಳ್ಳಲು ಆಗುವುದಿಲ್ಲ. ಆ ಬಾಕಿ ಬಿಲ್ ಪಾವತಿಯಾಗುವವರೆಗೂ ಅದು ಕ್ಲಿಯರ್ ಆಗಲ್ಲ. ಹೀಗಾಗಿ, ದಯವಿಟ್ಟು ಟ್ರಾಫಿಕ್ ರೂಲ್ಸ್ ಫಾಲೋ ಮಾಡಿ' ಎಂದಿದ್ದಾರೆ.

# ತಮದಡ್ಡಿ-ಹಳಿಂಗಳಿ ಗ್ರಾಮಗಳಲ್ಲಿ ಘಟನೆ ರೈತರ ಪಂಪಸೆಟ್ ಕೇಬಲ್ ಕಳ್ಳತನ



ತೇರದಾಳ-ಕೃಷ್ಣಾ ನದಿ ತೀರದ ತಮದಡ್ಡಿ ಹಾಗೂ ಹಳಿಂಗಳಿ ಗ್ರಾಮಗಳಲ್ಲಿ ರೈತರ ಪಂಸೆಟ್‌ಗಳ ಕೇಬಲ್ ಕಳ್ಳತನ ಮುಂದುವರೆದಿದ್ದು, ತಮದಡ್ಡಿ ಗ್ರಾಮದಲ್ಲಿ ಶುಕ್ರವಾರ ರಾತ್ರಿ ನದಿ ದಡದಲ್ಲಿ ರೈತರು ಅಳವಡಿಸಿರುವ ಪಂಪಸೆಟ್ ಕೇಬಲ್ ಕಳ್ಳತನ ಮಾಡಿಕೊಂಡು ಹೋಗಿರುವ ಘಟನೆ ನಡೆದಿದೆ.

ಈ ಮೊದಲು ಹಳಿಂಗಳಿ ಗ್ರಾಮದಲ್ಲಿ ಎರಡು ಬಾರಿ ಹಾಗೂ ತಮದಡ್ಡಿ ಗ್ರಾಮದಲ್ಲಿ ಒಂದು ಬಾರಿ ಹತ್ತಾರು ರೈತರ ಕೇಬಲ್ ಕಳ್ಳತನ ಮಾಡಲಾಗಿತ್ತು. ಇದರಿಂದ ಲಕ್ಷಾಂತರ ರೂಪಾಯಿ ರೈತರಿಗೆ ನಷ್ಟ ಸಂಭವಿಸಿತ್ತು. ಈಗ ಮತ್ತೆ ತಮದಡ್ಡಿ ಗ್ರಾಮದಲ್ಲಿ ಐದಾರು ರೈತರ ಕೇಬಲ್ ಕಳ್ಳತನ ಮಾಡಲಾಗಿದೆ.

ಕೃಷ್ಣಾ ನದಿ ತುಂಬಿ ಹರಿಯುತ್ತಿದ್ದು, ತೆಪ್ಪೆಯಲ್ಲಿ ಬೇರೆ ಜಿಲ್ಲೆಯ ಗ್ರಾಮದ ಕಳ್ಳರು ಆಗಮಿಸಿ ಕೇಬಲ್ ಕಳ್ಳತನ ಮಾಡಿಕೊಂಡು ಹೋಗುತ್ತಿದ್ದಾರೆಂದು ಗ್ರಾಮಸ್ಥರು ಶಂಕಿಸಿದ್ದಾರೆ. ಕೇಬಲ್ ಕಳ್ಳತನ ಆದ-ಾಗೆಲ್ಲ ಈ ಕುರಿತು ಸ್ಥಳೀಯ ಪೊಲೀಸ್ ಠಾಣಗೆ ರೈತರು ಮಾಹಿತಿ ನೀಡಿದ್ದಾರೆ. ಆದರೆ ಇದುವರೆಗೆ ಯಾವುದೇ ಪ್ರಯೋಜನವಾಗಿಲ್ಲ. ಇನ್ನೂ ಕೇಬಲ್ ಕಳ್ಳತನ ಮಾಡುವ ಖದೀಮರು ಕೇಬಲ್‌ನ್ನು ನದಿ ದಡದಲ್ಲಿಯೇ ಸುಟ್ಟು ಅದರಲ್ಲಿನ ತಾಮ್ರವನ್ನು ಮಾತ್ರ ತಗೆದುಕೊಂಡು ಹೋಗುವ ಮೂಲಕ ಹೊರುವ ಬಾರವನ್ನು ಕಡಿಮೆ ಮಾಡಿಕೊಳ್ಳುತ್ತಿದ್ದಾರೆ. ಕೆಲ ಸಂದರ್ಭದಲ್ಲಿ ರೈತರ ಕೇಬಲ್ ಜತೆಗೆ ಮೋಟಾರಗಳನ್ನು ಕೂಡ ಕಳವು ಮಾಡಿರುವ ಉದಾಹರಣೆಗಳಿವೆ. ನಾಲ್ಕು ಬಾರಿ ಕೇಬಲ್ ಕಳವು ಆಗಿದ್ದರು ಪೊಲೀಸರು ಆರೋಪಿಗಳನ್ನು ಪತ್ತೆ ಮಾಡುವಲ್ಲಿ ವಿಫಲ ಆಗಿರುವುದಕ್ಕೆ ರೈತರು ಅಸಮಾಧಾನ ವ್ಯಕ್ತಪಡಿಸುತ್ತಿದ್ದಾರೆ.

**ಹೇಳಿಕೆ** : ನದಿ ತೀರದ ಗ್ರಾಮಗಳಲ್ಲಿ ಕೇಬಲ್ ಕಳ್ಳತನ ಆಗಿರುವ ಬಗ್ಗೆ ಮಾಹಿತಿ ಬಂದಿದೆ. ನಾನು ಈಗಷ್ಟೇ ಹೊಸದಾಗಿ ತೇರದಾಳ ಠಾಣೆಗೆ ಬಂದಿದ್ದೇನೆ. ಕೇಬಲ್ ಕಳ್ಳತನ ಮಾಡಿರುವ ಆರೋಪಿಗಳ ಬಂಧನಕ್ಕೆ ತಂಡ ರಚಿಸಿ ಕ್ರಮ ಕೈಗೊಳ್ಳಲಾಗುವುದು.

(ಎಸ್.ಕೆ. ಸಿಂಗನ್ನವರ ಪಿಎಸ್ಐ ತೇರದಾಳ.)

# ಗ್ರಾಮದ ಪುರಾತನ ಭಾವಿ ಸ್ವಚ್ಚಗೊಳಿಸಿದ ಯುವಕರು



ತಾಳಿಕೋಟೆ, ತಾಲೂಕಿನ ಚೋಕ್ಕಾವಿ ಗ್ರಾಮದ ಪುರಾತನ ಭಾವಿಯಲ್ಲಿ ಬಿದ್ದಿದ್ದ ತ್ಯಾಜ ಮತ್ತು ಸುತ್ತಮುತ್ತಲಿನನ ಪ್ರದೇಶವನ್ನು ಗ್ರಾಮದ ಸಚೀನ್ ಗೆಳೆಯರ ಬಳಗದವರು ಸ್ವಚ್ಚಗೊಳಿಸುವದರೊಂದಿಗೆ ಗ್ರಾಮಸ್ಥರರ ಮೇಚ್ಚುಗೆಗೆ ಪಾತ್ರರಾಗಿದ್ದಾರೆ.

ಸುಮಾರು ನೂರಾರು ವರ್ಷಗಳ ಹಳೆಯ ಪುರಾತನ ಭಾವಿಯು ಕಳೆದ 1 ವರ್ಷದಿಂದಲೂ ಸ್ವಚ್ಚತೆ ಕಂಡಿದ್ದಿಲ್ಲಾ ಗಾಳಿಗೆ ಭಾವಿಯಲ್ಲಿ ಹಾರಿ ಬಿದ್ದ ತ್ಯಾಜ್ಯದಿಂದ ನೀರು ಕಲುಷಿತಗೊಂಡಂತೆ ಕಾಣುತ್ತಿತ್ತು ಆದರೆ ಶ್ರೀ ಗ್ರಾಮದೇವತೆ ಜಾತ್ರೋತ್ಸವದ ಗಂಗಸ್ಥಳ ಅಲ್ಲದೇ ಸದ್ಯ ಮೋಹರಂ ಹಬ್ಬದ ದೇವರ ದಪನ್‌ದ ಕಾರ್ಯವೂ ಇದೇ ಭಾವಿಯಲ್ಲಿ ಪೂಜೆಯೊಂದಿಗೆ ನಡೆಯುತ್ತಿರುವದರಿಂದ ಗ್ರಾಮದ ಸಚೀನ್ ಗೆಳೆಯರ ಬಳಗದ ತಂಡವು ಭಾವಿ ಸ್ವಚ್ಚತೆಗೆ ಮುಂದಾಗುವದರೊಂದಿಗೆ ಭಾವಿಯ ಸುತ್ತಮುತ್ತಲಿನ ಪ್ರದೇಶವನ್ನೂ ಕೂಡಾ ಸ್ವಚ್ಚಗೊಳಿಸಿ ಮಾದರಿಯ ಕಾರ್ಯವನ್ನು ಮಾಡಿದ್ದಾರೆ.

ಈ ಸ್ವಚ್ಚತಾ ಕಾರ್ಯದಲ್ಲಿ ಗೆಳೆಯರ ಬಳಗದ ಪ್ರವೀಣ್, ಆಕಾಶ, ನಾಗರಾಜ, ಸುರೇಶ, ಅಭಿ, ಪ್ರಶಾಂತ, ಸಚೀನ್, ಸುರೇಶ, ಅನೀಲ, ವಿರೇಶ, ಪ್ರಶಾಂತ, ದೇವಣ್ಣ ಮೊದಲಾದವರು ಪಾಲ್ಗೊಂಡಿದ್ದರು.

# ತಹಸೀಲ್ದಾರ ಕಚೇರಿಯಲ್ಲಿ ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ



ಬಸವನಬಾಗೇವಾಡಿ, ; ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ತಾಲೂಕಾಡಳಿತದಿಂದ ನಾಡಪ್ರಭು ಕೆಂಪೇಗೌಡ ಜಯಂತಿಯನ್ನು ಶುಕ್ರವಾರ ಆಚರಿಸಲಾಯಿತು. ನಾಡಪ್ರಭು ಕೆಂಪೇಗೌಡ ಜಯಂತಿಯಂಗವಾಗಿ ಕೆಂಪೇಗೌಡ ಅವರ ಭಾವಚಿತ್ರಕ್ಕೆ ಶಿರಸ್ತೇದಾರ ಬಿ.ಆರ್.ಪೊಲೇಶಿ ಅವರು ಪೂಜೆ ನೆರವೇರಿಸಿ ನಮನ ಸಲ್ಲಿಸಿದರು. ಈ ಸಂದರ್ಭದಲ್ಲಿ ತಹಸೀಲ್ದಾರ ಕಚೇರಿಯ ಸಿಬ್ಬಂದಿಗಳಾದ ವಿಲಾಸ ಜಾಡರ, ರಿಶಿಕೇಶ ಇಂಗಳೆ, ಪ್ರಸನ್ನ ಕಡಿಜಾಡರ, ಪ್ರವೀಣ ಲಮಾಣಿ, ಆರತಿ ತೆನಹಳ್ಳಿ, ಅನ್ನಪೂರ್ಣ ಪಾಟೀಲ, ಪುರಸಭೆ ಸದಸ್ಯ ಪ್ರವೀಣ ಪೂಜಾರಿ ಇತರರು ಇದ್ದರು.

# ಡೌನಿ ಮಿಲ್ಡ್ಯೂ ರೋಗ ನಿಯಂತ್ರಣಕ್ಕೆ ತುರ್ತು ಕ್ರಮ

ಬಾಗಲಕೋಟೆ, : ಜಿಲ್ಲೆಯಲ್ಲಿ ಸುಮಾರು 50,000 ಹೆಕ್ಟೇರ್ ಪ್ರದೇಶದಲ್ಲಿ ಮೆಕ್ಕೆಜೋಳ ಬೆಳೆ ಇದೆ. ಪ್ರಸಕ್ತ ಮುಂಗಾರು ಹಂಗಾಮಿನಲ್ಲಿ ಹೆಚ್ಚು ತೇವಾಂಶ, ಆದ್ರತೆ ಮತ್ತು ಮೋಡಮೂಡಿದ ವಾತಾವರಣದಿಂದ ಮೆಕ್ಕೆಜೋಳದಲ್ಲಿ ಡೌನಿ ಮಿಲ್ಡ್ಯೂ ರೋಗ ಕಾಣಿಸಿಕೊಂಡಿದೆ. ಈ ರೋಗವು ಪೆರೂನೊಸ್ಕ್ಲೆರೋಸ್ಪೊರಾ ಸೂರ್ಗೈ ಎಂಬ ಶಿಲೀಂದ್ರದಿಂದ ಉಂಟಾಗುತ್ತದೆ. ರೋಗ ನಿಯಂತ್ರಣ-ಕ್ಕಾಗಿ ರೋಗ ನಿರೋಧಕ ತಳಿಗಳು, ಬೀಜೋಪಚಾರ, ಬೆಳೆ ಪರಿವರ್ತನೆ, ಹಾಗೂ ರೋಗಬಾಧಿತ ಸಸ್ಯಗಳ ನಾಶ ಮಾಡುವುದು ಅಗತ್ಯ. ನಿಯಂತ್ರಣಕ್ಕಾಗಿ ಮ್ಯಾಂಕೋಜೆಬ್ 75%ತಿರಿ ಅಥವಾ ಮೆಟಾಲಾಕ್ಸಿಲ್ 35%ಥಿ ಅಥವಾ ರಿಡೋಮಿಲ್ ಗೋಲ್ಡ್ 3 ಗ್ರಾಂ ಪ್ರತಿ ಲೀಟರ್ ನೀರಿಗೆ ಬೆರೆಸಿ ಸಿಂಪಡಿಸಬೇಕು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

# ಕ್ಷಯರೋಗಿಗಳಿಗೆ ಪೌಷ್ಠಿಕ ಆಹಾರ ವಿತರಣಾ ಕಾರ್ಯಕ್ರಮ
## ಆರೋಗ್ಯ ಇಲಾಖೆಯ ಕ್ರಿಕೇಟ್ ಪಂದ್ಯಾವಳಿಗೆ ಡಿಸಿ, ಸಿಇಓ ಚಾಲನೆ




ಬಾಗಲಕೋಟೆ, : ನವನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ಮೂರು ದಿನಗಳ ಕಾಲ ಹಮ್ಮಿಕೊಂಡ ಜಿಲ್ಲಾ ಮಟ್ಟದ ಕ್ರಿಕೇಟ್ ಪಂದ್ಯಾವಳಿಗೆ ಜಿಲ್ಲಾಧಿಕಾರಿ ಸಂಗಪ್ಪ ಎಂ, ಹಾಗೂ ಜಿ.ಪಂ ಸಿಇಓ ಶಶಿಧರ ಕುರೇರ ಜಂ-ಟಿಯಾಗಿ ಚಾಲನೆ ನೀಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿಗಳ ಕಾರ್ಯಾಲಯದ ಆಶ್ರಯದಲ್ಲಿ ಹಮ್ಮಿಕೊಂಡ ಕ್ರಿಕೇಟ್ ಪಂದ್ಯಾವಳಿಗೆ ಚಾಲನೆ ನೀಡಿದ ಮಾತನಾಡಿದ ಅವರು ಒತ್ತಡದ ಬದುಕಿನಿಂದ ಹೊರಬರಲು ಕ್ರೀಡಾ ಚಟುವಟಿಕೆಗಳು ಅವಶ್ಯವಾಗಿವೆ. ಇಂತಹ ಚಟುವಟಿಕೆಗಳಲ್ಲಿ ಎಲ್ಲರೂ ಭಾಗವಹಿಸಲು ಮುಂದಾಗಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯಾದ್ಯಂತ ಚಿಕಿತ್ಸೆ ಕ್ಷಯ ರೋಗಿಗಳಿಗೆ ಸಾಂಕೇತಿಕವಾಗಿ 10 ಜನ-ರಿಗೆ ಪೌಷ್ಠಿಕ ಆಹಾರ ಕಿಟ್‌ಗಳನ್ನು ವಿತ-ರಿಸಲಾಯಿತು. ಕಾರ್ಯಕ್ರಮದಲ್ಲಿ ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಸುವರ್ಣ ಕುಲಕರ್ಣಿ, ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರುಪಾದ ಡೂಗನವರ, ಆರೋಗ್ಯ ಇಲಾಖೆಯ ಜಗನ್ನಾಥ ದೇಶಪಾಂಡೆ, ರಾಘು ಕುಲಕರ್ಣಿ, ರಾಜಶೇಖರ ಅಂಬಿಗೇರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮೂರು ದಿನಗಳ ಕಾಲ ವಸ್ತು ಪ್ರದರ್ಶನ: ಆಕರ್ಷಿಸಿದ ಸೆಲ್ಫಿ ಕಾರ್ನರ್ ಸರಕಾರದ ಸಾಧನೆ ಬಿಂಬಿಸುವ ವಸ್ತು ಪ್ರದರ್ಶಕ್ಕೆ ಮೇಟಿ ಚಾಲನೆ

ಬಾಗಲಕೋಟೆ, : ಸರಕಾರದ 2 ವರ್ಷದ ಸಾಧನೆ ಹಾಗೂ ಸರ್ಕಾರದ ಯೋಜನೆಗಳನ್ನು ಬಿಂಬಿಸುವ ಉದ್ದೇಶದಿಂದ ನವನಗರದ ಬಸ್ ನಿಲ್ದಾಣದ ಆವರಣದಲ್ಲಿ ಜೂನ್ 28 ರಿಂದ 30 ವರೆಗೆ ಹಮ್ಮಿಕೊಂಡ ವಸ್ತು ಪ್ರದರ್ಶನ ಮಳಿಗೆಗೆ ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ದಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್.ಮೇಟಿ ಶುಕ್ರವಾರ ಚಾಲನೆ ನೀಡಿದರು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಹಮ್ಮಿಕೊಂಡ ವಸ್ತು ಪ್ರದರ್ಶನಕ್ಕೆ ಚಾಲನೆ ನೀಡಿದ ಅವರು ಸರಕಾರದ ಯೋಜನೆಗಳು ಹಾಗೂ ಸಾಧನೆ ಬಿಂಬಿಸುವ ಮಾಹಿತಿಗಳನ್ನು ವೀಕ್ಷಣೆ ಮಾಡಿದರು. ನಂತರ ಸರಕಾರದ ಯೋಜಗಳ ಮಾಹಿತಿಗಳ ವಸ್ತು ಪ್ರದರ್ಶನ ಕು-ರಿತು ತಮ್ಮ ಅನಿಸಿಕೆಗಳನ್ನು ಪುಸ್ತಕದಲ್ಲಿ



ಬರೆಯುವ ಮೂಲಕ ವ್ಯಕ್ತಪಡಿಸಿದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಸರಕಾರದ ಸಾಧನೆಗಳನ್ನು ಬಿಂಬಿಸುವ ಹಾಗೂ ಜನಪರ ಯೋಜನೆಗಳ ಮಾಹಿತಿಯನ್ನು ನೀಡುವ ವಸ್ತು ಪ್ರದರ್ಶನ ಹಮ್ಮಿಕೊಂಡಿರುವುದು ಶ್ಲಾಘನೀಯವಾದುದು.

ಕಾರ್ಯಕ್ರಮದಲ್ಲಿ ಜಿಲ್ಲಾಧಿಕಾರಿ ಸಂಗಪ್ಪ ಎಂ, ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕಿ ಕಸ್ತೂರಿ ಪಾಟೀಲ, ತಹಶೀಲ್ದಾರ ಅಮರೇಶ ಪಮ್ಮಾರ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಹಾಯಕ ಸಂಚಾರಿ ನಿಯಂತ್ರಣಾಧಿಕಾರಿ ಕಳ್ಳೊಳ್ಳಿ, ತಾಲೂಕಾ ಗ್ಯಾರಂಟಿ ಯೋಜನೆ ಪ್ರಾಧಿಕಾರದ ಅಧ್ಯಕ್ಷ ಎಸ್.ಎನ್.ರಾಂಪೂರ ಸೇರಿದಂತೆ ನಾಗರಾಜ ಹದ್ಲಿ, ದ್ಯಾಮಣ್ಣ ಗಾಳಿ ಹಾಗೂ ಇತರರು ಉಪಸ್ಥಿತರಿದ್ದರು.

ವಸ್ತು ಪ್ರದರ್ಶನದಲ್ಲಿ ಗೃಹಲಕ್ಷ್ಮೀ, ಗೃಹಜ್ಯೋತಿ, ಅನ್ನಭಾಗ್ಯ, ಶಕ್ತಿ ಯೋಜನೆ ಹಾಗೂ ಯುವನಿಧಿ ಯೋಜನೆಗಳ ಸಮಗ್ರ ಮಾಹಿತಿ ಜೊತೆಗೆ ಅನ್ನದಾತನ ಮೊಗದಲ್ಲಿ ಮಂದಹಾಸ, ಸರ್ವರಿಗೂ ಸೂರು, ಮಹಿಳೆಯ-ರಿಗೆ ಶಕ್ತಿ, ಸರ್ವರಿಗೂ ಗುಣಮಟ್ಟದ ಆರೋಗ್ಯ ಸೌಲಭ್ಯ, ಗ್ಯಾರಂಟಿ ಬದುಕು, ಪ್ರಗತಿಯತ್ತ ಕರ್ನಾಟಕ ಹಾಗೂ ಪಂಚ ಗ್ಯಾರಂಟಿ ಯೋಜನೆಗಳ ಲಾಭ ಪಡೆದ ಫಲಾನುಭವಿಗಳ ಮಾಹಿತಿ ಸೇರಿದಂತೆ ಅನೇಕ ಯೋಜನೆಗಳ ಸಾಧನೆಗಳ ಮಾಹಿತಿಗಳನ್ನು ಅಳವಡಿಸಲಾಗಿತ್ತು.

# ಕೆಎಲ್ಇ ಬಿಸಿಎ ವಿಭಾಗಕ್ಕೆ ಶೇ.100 ಫಲಿತಾಂಶ



ಮಹಾಲಿಂಗಪುರ: ಪಟ್ಟಣದ ನಗರದ ಕೆಎಲ್ಇ ಸಂಸ್ಥೆಯ ಬಿಸಿಎ ಕಾಲೇಜಿನ ಮೊದಲ ಬ್ಯಾಚ್ ವಿದ್ಯಾರ್ಥಿಗಳು 6ನೇ ಸೆಮಿಸ್ಟರ್‌ನ ಎಲ್ಲಾ 33 ವಿದ್ಯಾರ್ಥಿಗಳು ಉತ್ತೀರ್ಣರಾಗುವ ಮೂಲಕ ಕಾಲೇಜಿನ ಫಲಿತಾಂಶ ಶೇ.100 ರಷ್ಟಾಗಿದೆ. ಬಹುತೇಕ ವಿದ್ಯಾರ್ಥಿಗಳು ಡಿಸ್ಟಿಂಕ್ಷನ್‌ಲ್ಲಿ ಪಾಸಾಗಿದ್ದಾರೆ. ಪವನ ಕುಮಾರ ಗೊಂಧಳಿ (ಎಸ್‌ಜಿಪಿಎ 9.71) ಪ್ರಥಮ, ನಂದಿನಿ ಗಸ್ತಿ (ಎಸ್‌ಜಿಪಿಎ 9.56) ದ್ವಿತೀಯ, ಹರ್ಶಿತಾ ಫಕಿರ್‌ಪುರ್ (ಎಸ್‌ಜಿಪಿಎ 9.52) ತೃತೀಯ ಸ್ಥಾನ ಪಡೆದಿದ್ದಾರೆ ಎಂದು ವಿಭಾಗದ ಸಂಂ-ಯೋಜನ ಐ.ಎಸ್.ಪಾಟೀಲ, ಪ್ರಾಚಾರ್ಯ ಡಾ.ಕೆ.ಎಂ.ಅವರಾದಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ವಾಹನ ಚಾಲಕರು ಮಕ್ಕಳ ಸುರಕ್ಷತೆಗೆ ಆದ್ಯತೆ ನೀಡಿ

ಕಾರವಾರ, : ಪ್ರಸುತ್ತ ಬೇಸಿಗೆಯ ರಜೆಯು, ಕಳೆದು ಶಾಲಾ/ಕಾಲೇಜುಗಳ ಪ್ರಾರಂಭವಾಗಿದ್ದು, ಮಳೆಗಾಲವೂ ಸಹ ಪ್ರಾರಂಭವಾಗಿರುವುದರಿಂದ, ವಾಹನಗಳ ಚಾಲಕರು ಮತ್ತು ಮಾಲೀಕರು ವಾಹನ ಚಲಾಯಿಸುವಾಗ, ರಸ್ತೆ ದಾಟುವ ಮಕ್ಕಳು ಕಂಡು ಬಂದಲ್ಲಿ ನಿಧಾನವಾಗಿ ವಾಹನವನ್ನು ಚಲಾಯಿಸಬೇಕು. ಮಕ್ಕಳ ಮೈಮೇಲೆ ಕೆಸರು ಹಾರಿಸಬಾರದು, ಚಿಕ್ಕ ಮಕ್ಕಳು ರಸ್ತೆಯಲ್ಲಿ ನಡೆದಾಡುವಾಗ ಅವರಿಗೆ ಟ್ರಾಫಿಕ್ ನಿಯಮಗಳ ಅರಿವಿರುವುದಿಲ್ಲ, ಅವರು ರಸ್ತೆಯ ಮಧ್ಯದಲ್ಲಿ ನಡೆದಾಡಬಹುದು ಅಥವಾ ಆಟವಾಡುತ್ತಾ ರಸ್ತೆ ದಾಟಬಹುದು ಇವುಗಳನ್ನು ಗಮನದಲ್ಲಿಟ್ಟುಕೊಂಡು ಜಾಗೃತೆಯಿಂದ ತಮ್ಮ ವಾಹನಗಳನ್ನು ಚಲಾಯಿಸಬೇಕು. ಮಕ್ಕಳ ಸುರಕ್ಷತೆಯ ಬಗ್ಗೆ ಜಾಗೃತಿ ವಹಿಸುವುದು ಎಲ್ಲಾ ವಾಹನಗಳ ಚಾಲಕರು ಮತ್ತು ಮಾಲೀಕರ ಜವಾಬ್ದಾರಿಯಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಸಾರಿಗೆ ಅಧಿಕಾರಿ ಜಾನ್ ಬಿ ಮಿಸ್ಕಿತ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಂದು ಜಿಲ್ಲಾ ಲೇಖಕಿಯರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭ

ಬೆಳಗಾವಿ: ಇಲ್ಲಿನ ಕನ್ನಡ ಸಾಹಿತ್ಯ ಭವನದಲ್ಲಿ ಜಿಲ್ಲಾ ಲೇಖಕಿಯರ ಸಂಘದ ವಾರ್ಷಿಕೋತ್ಸವ ಹಾಗೂ ಪ್ರಶಸ್ತಿ ಪ್ರದಾನ ಸಮಾರಂಭವನ್ನು ಭಾನುವಾರ 29 ರಂದು 10 30ಕ್ಕೆ ಹಮ್ಮಿಕೊಳ್ಳಲಾಗಿದೆ.

ಈ ವೇಳೆ ದತ್ತಿ ದಾನಿಗಳಿಗೆ ಹಾಗೂ ಪ್ರಶಸ್ತಿ ಪುರಸ್ಕೃತರಿಗೆ ಗೌರವ ಸನ್ಮಾನ ಸಮಾರಂಭ, ಕಥಾ ವಿಜೇತರಿಗೆ ಬಹುಮಾನ ವಿರತಣೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿವೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷರಾದ ಸುಮಾ ಕಿತ್ತೂರ ಅವರು ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಶ್ವೇತಾ ನರಗುಂದ ಹಾಗೂ ಪ್ರಭಾ ಬೋರಗಾಂವಕರ ಆಗಮಿಸಲಿದ್ದಾರೆ.

ಲಿಂ. ಶಿವಪುತ್ರಪ್ಪ ಯಾದವಾಡ, ಹಾಗೂ ಶಶಿಕಲಾ ಯಾದವಾಡ ಪುಸ್ತಕ ಪ್ರಶಸ್ತಿ( ಪ್ರಥ-'ಮ ಕವನ ಸಂಕಲನ) ಹಾಗೂ ದಾನಿಗಳಾದ ರೋಹಿಣಿ ಯಾದವಾಡ, ಅಥಣಿ ಪ್ರಶಸ್ತಿ ಪುರಸ್ಕೃತರಾದ ಗಂಗಾದೇವಿ ಚಕ್ರಸಾಲಿ ಅವ-ರಿಂದ ಮನದಂಗಳದ ಮಲ್ಲಿಗೆ ಕವನ ಸಂಕಲನ ಕಾರ್ಯಕ್ರಮ ನಡೆಯಲಿದೆ. ಈ ಸಂದರ್ಭದಲ್ಲಿ ಸಂಘದ ವಾರ್ಷಿಕ ವರದಿ, ಲೆಕ್ಕಪತ್ರ ವರದಿ ವಾಚನ ಎಂದು ಸಂಘದ ಪ್ರಧಾನ ಕಾರ್ಯದರ್ಶಿ ಆಶಾ.ಎಸ್. ಯಮಕನಮರಡಿ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

# ಬಸವೇಶ್ವರ ಅರ್ಬನ್ ಕೋ-ಆಪ್ ಕ್ರೆಡಿಟ ಸೊಸೈಟಿ ಅಭಿವೃದ್ಧಿಯಲ್ಲಿ ಸದಸ್ಯರ ಪ್ರಮುಖ ಪಾತ್ರ

ಯರಗಟ್ಟಿ: ಬಸವೇಶ್ವರ ಅರ್ಬನ್ ಕೋ-ಆಪ್ ಕ್ರೆಡಿಟ ಸೊಸೈಟಿ ಅಭಿವೃದ್ಧಿಯಲ್ಲಿ ಸದಸ್ಯರ ಪಾತ್ರ ಪ್ರಮುಖವಾಗಿದೆ ಎಂದು ಎಡೆಯೂರ ಶ್ರೀ ತೋಂಟದಾರ್ಯ ಮಠದ ಡಾ.ಸಿದ್ದರಾಮ ಸ್ವಾಮೀಜಿ ಹೇಳಿದರು.

ಯರಗಟ್ಟಿ ಪಟ್ಟಣದ ಶ್ರೀಶೈಲ ಮಲ್ಲಿಕಾರ್ಜುನ ಕಲ್ಯಾಣ ಮಂಟಪದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಬಸವೇಶ್ವರ ಅರ್ಬನ್ ಕೋ-ಆಪ್ ಕ್ರೆಡಿಟ ಸೊಸೈಟಿಯ 25ನೇ ವರ್ಷದ ರಜ-ತ ಮಹೋತ್ಸವದ ನಿಮಿತ್ಯ ಸಹಕಾರ ಸಂಗಮ ಸಮಾರಂಭದಲ್ಲಿ ಸಸಿಗೆ ನೀರು ಹಾಕುವ ಮೂಲಕ ಉದ್ಘಾಟಿಸಿ ಮಾತನಾಡಿದ ಅವರು, ಮಹಾಬಳೇಶ್ವರ ಹಾದಿಮನಿ ಯವರ ಹಾಗೂ ಆಡಳಿತ ಮಂಡಳಿಯ ಸಹಕಾರದಿಂದ ಇಂದು ಈ ಸಂಸ್ಥೆ ಎತ್ತರಕ್ಕೆ ಬೆಳೆದಿದೆ ಎಂದು ಹೇಳಿದರು.

ಸವದತ್ತಿ ಬಿಜೆಪಿ ಮಂಡಲ ಅಧ್ಯಕ್ಷ ವಿರುಪಾಕ್ಷ ಮಾಮನಿ ಮಾತನಾಡಿ, "ಶ್ರೀ ಬಸವೇಶ್ವರ ಅರ್ಬನ್ ಕೋ ಆಪ್ ಕ್ರೆಡಿಟ್ ಸೊಸೈಟಿ 2024-25ನೇ ಸಾಲಿನಲ್ಲಿ 2 ಕೋಟಿ ರೂ. ನಿವ್ವಳ ಲಾಭ ಗಳಿಸಿದೆ. ಸಂಘವು ಮೂರು ಶಾಖೆಗಳನ್ನು ಹೊಂದಿದ್ದು, 2.25 ಕೋಟಿ ಷೇರು ಬಂಡವಾಳ, 64.87 ಕೋಟಿ ದುಡಿಯುವ ಬಂಡವಾಳ, 7.28 ಕೋಟಿ ಕಾಯ್ದಿಟ್ಟ ಹಾಗೂ ಇತರ ನಿಧಿ ಹೊಂದಿದೆ. 49.30 ಕೋಟಿ ಸಾಲ ವಿತರಿಸಿದ್ದು, 52.58 ಕೋಟಿ ಠೇವು ಹೊಂದಿದೆ", ಎಂದು ಮಾಹಿತಿ ನೀಡಿದರು. ಕರ್ನಾಟಕ ರಾಜ್ಯ ಸಹಕಾರ ಪತ್ತಿನ ಸಂಘಗಳ ಮಹಾಮಂಡಳದ ನಿರ್ದೇಶಕ ಉಮೇಶ ಬಾಳಿ, ಬಿಡಿಸಿಸಿ ಬ್ಯಾಂಕ್ ನಿರ್ದೇಶಕ ಪಂಚನಗೌಡ ದ್ಯಾಮನಗೌಡರ ಮಾತನಡಿ, ಸೊಸೈಟಿ ಅಧ್ಯಕ್ಷರು, ಉಪಾಧ್ಯಕ್ಷರು, ನಿರ್ದೇಶಕರು ಶ್ರೀಗಳನ್ನು, ಗಣ್ಯರನ್ನು ಸನ್ಮಾನಿಸಿದರು.



ಉಡುಪಿಯ ಸ್ಯಾಕ್ರೋಪೋನ್ ವಾದಕಿ ಮೇಘನಾ ಸಾಲಿಗ್ರಾಮ ಹಾಗೂ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ, ಖ್ಯಾತ ವಾಗ್ಮಿ ಸಿದ್ದಪ್ಪ ಬಿದರಿ, ಜಾನಪದ ವಿದ್ವಾಂಸ ಡಾ. ಶಂಭು ಬಳಿಗಾರ, ಗಂಗಾವತಿ ಪ್ರಾಣೇಶ, ನರಸಿಂಹ ಜೋಶಿ, ಬಸವರಾಜ ಮಹಾಮನಿ ಅವರಿಂದ ನಾನಾ ಕಾರ್ಯಕ್ರಮಗಳು ಜರುಗಿದವು.

ಕಟಕೋಳ ಕುಮಾರೇಶ್ವರ ವಿರಕ್ತಮಠದ ಸಚ್ಚಿದಾನಂದ ಸ್ವಾಮೀಜಿ, ಗೋಕಾಕ ಶೂನ್ಯ ಸಂಪಾದನಾ ಮಠದ ಮುರುಘರಾಜೇಂದ್ರ ಸ್ವಾಮೀಜಿ, ಬಟಕುರ್ಕಿಯ ಬಸವಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ಸಂಸ್ಥೆ ಅಧ್ಯಕ್ಷ ಮಹಾಬಳೇಶ್ವರ ಹಾದಿಮನಿ ಅಧ್ಯಕ್ಷತೆ ವಹಿಸಿದ್ದರು. ಉಪಾಧ್ಯಕ್ಷ ಎಸ್.ಜಿ.ಪತ್ತಾರ, ಯರಗಟ್ಟಿ ತಹಶೀಲ್ದಾರ ಎಂ.ವ್ಹಿ.ಗುಂಡಪ್ಪಗೋಳ, ಪಿಕೆಪಿಎಸ್ ಅಧ್ಯಕ್ಷ ಅಜೀತಕುಮಾರ ದೇಸಾಯಿ, ಮುಖಂಡ ಸಂತೋಷ ಹಾದಿಮನಿ, ಸಂಜಯ ಹೊಸಮಠ, ತಮ್ಮಣ್ಣ ಕೆಂಚರಡ್ಡಿ, ಉದ್ದಿಮೆದಾರ ವಿಜಯ ಮೆಟಗುಡ್ಡ, ಸಂಘದ ಕಾನೂನು ಸಲೆಹಗಾರ ಸುಧೀರ ಸಕ್ರಿ, ರಾಜೇಶ ಆಲದಕಟ್ಟಿ, ಮುರಗೋಡ ಸಿಪಿಐ ಆಯ್.ಎಮ್.ಮಠಪತಿ, ಬ್ಯಾಂಕ ವ್ಯವಸ್ಥಾಪಕ ಎಸ್.ಎಸ್.ಶೀಲವಂತರ, ರಮೇಶ ಹಳ್ಳಂಡಿ, ರಜೇಶ ಕತ್ತಿಶೆಟ್ಟಿ, ಶಿವಾನಂದ ಪಟ್ಟಣಶೆಟ್ಟಿ, ಚಂದ್ರಶೇಖರ ಅಳಗೋಡಿ, ದೇಶನೂರ, ಯಾದವಾಡ, ಮಮದಾಪೂರ ಶಾಖೆಗಳ ಸಲಹಾ ಸಮೀತಿ ಸದಸ್ಯರು ಇದ್ದರು. ಬ್ಯಾಂಕ್ ಸಿಬ್ಬಂದಿಯಾದ ಪಿ. ಎಮ್. ಅವಟೆ, ಪಿ. ಐ. ಸಣ್ಣಲಿಂಗನ್ನವರ, ಎಸ್. ಆರ್. ಚನ್ನಮೇತ್ರಿ, ಶ್ರೀಮತಿ ವಿ. ಜಿ. ಕಾಳಗಿ, ಕು. ಎಸ್. ಎಮ್. ತೋರಗಲ್ಲಮಠ, ವಿ. ಎಲ್. ಪಚ್ಚನ್ನವರ, ಹೆಚ್. ಎ. ಹಳ್ಳಮಡಿ, ಬಿ. ಜೆ. ಬಸನ್ನವರ, ಎನ್. ವಿ. ತೇಣಗಿ, ವಿ. ಎಮ್. ದಿಡಗನ್ನವರ, ಉಪನ್ಯಾಸಕಿ ಶಾಮಾ ಹಾದಿಮನಿ ನಿರೂಪಿಸಿದರು. ಸದಾನಂದ ಹಣಬರ ವಂದಿಸಿದರು.

# ನಾಡಪ್ರಭು ಕೆಂಪೇಗೌಡ ಜಯಂತಿ ಆಚರಣೆ



ಕಾರವಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಂ-ಯುಕ್ತ ಆಶ್ರಯದಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶುಕ್ರವಾರ ಅಯೋಜಿಸಲಾದ ನಾಡ ಪ್ರಭು ಕೆಂಪೇಗೌಡ ಜಯಂತಿ ಕಾರ್ಯಕ್ರಮವನ್ನು, ಕೆಂಪೇಗೌಡ ಅವರ ಭಾವ ಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವ ಮೂಲಕ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ಉದ್ಘಾಟಿಸಿದರು. ಅಪರ ಜಿಲ್ಲಾಧಿಕಾರಿ ಸಾಜಿದ್ ಮುಲ್ಲಾ ಮಾತನಾಡಿ, ಇಡೀ ಜಗತ್ತಿನಲ್ಲೇ ಕರ್ನಾಟಕ ವಿಶೇಷ ಸ್ಥಾನ ಮಾನ ಪಡೆದ ಭಾರತದ ರಾಜ್ಯವಾಗಿದ್ದು, ವಿಶ್ವದ ಜನರು ನಮ್ಮನ್ನು ಗುರುತಿಸುವುದು ಸಿಲಿಕಾನ್ ಸಿಟಿ ಬೆಂಗಳೂ-ರಿನಿಂದ, ವಿಶ್ವದ ಭೂಪಟದಲ್ಲಿ ಬೆಂಗಳೂ-ರಿಗೆ ವಿಶೇಷ ಸ್ಥಾನ ಮಾನವಿದೆ. ನಾಡಪ್ರಭು ಕೆಂಪೇಗೌಡ ಎಂದರೇ ನಮಗೆ ನೆನಪಗುವುದು ಬೆಂಗಳೂರು ಅವರ ಪರಿಶ್ರಮದ ಪ್ರತಿಫಲ ಮತ್ತು ದೂರದೃಷ್ಟಿಯಿಂದಾಗಿ ಬೆಂಗಳೂರು ಜಾಗತಿಕ ಮಟ್ಟದಲ್ಲಿ ಸಿಲಿಕಾನ್ ಸಿಟಿಯಾಗಿ ನಿರ್ಮಾಣವಾಗಿದೆ ಎಂದರು.

ವಿಜಯನಗರದ ಅರಸರ ಆಳ್ವಿಕೆ ನಂತರ ಬೆಂಗಳೂರಿನ ಆಡಳಿತವನ್ನು ಕೆಂಪೇಗೌಡರು ಮುಂದುವರಿಸುತ್ತಾರೆ. ಅನೇಕ ರಾಜ್ಯಗಳಿಗೆ ಉತ್ತಮ ಸಂಪರ್ಕ ವ್ಯವಸ್ಥೆ , ಮೂಲ ಸೌಲಭ್ಯಗಳು ಇರುವುದರಿಂದ ಇಲ್ಲಿ ನವನಗರ ನಿರ್ಮಿಸುವ ಕನಸು ಕಂಡು ಸುಭದ್ರವಾದ ನಾಡು ನಿರ್ಮಾಣ ಮಾಡಿ, ಯಾವುದೇ ಜಾತಿ ಧರ್ಮ ಎನ್ನದೇ ಕೌಶಲ್ಯಾಭಿವೃದ್ದಿಗೆ ಅವಕಾಶ ಕಲ್ಪಿಸಿದರು. ಕೃಷಿಯ ಅಭಿವೃದ್ಧಿಗೆ ನೀರಿನ ಕೊರತೆ ಆಗದಂತೆ ಕೆರಕಟ್ಟೆ, ಕಾಲುವೆ ನಿರ್ಮಾಣ ಮಾಡಿದರು, ಅನೇಕ ದೇವಾಲಯ, ಪೇಟೆಗಳನ್ನು ನಿರ್ಮಾಣ ಮಾಡಿ ಧರ್ಮಪ್ರಭು ಎಂಬ ಹೆಸರನ್ನು ಪಡೆದರು ಎಂದರು.

ನಿವೃತ್ತ ಕನ್ನಡ ಉಪನ್ಯಾಸಕ ಮಾಹೇಶ್ವರ ನಾರಾಯಣ ನಾಯಕ ಕೆಂಪೇಗೌಡ ಅವರ ಕುರಿತು ಉಪನ್ಯಾಸ ನೀಡಿ, ಮಾತನಾಡಿ, ಪರೋಪಕಾ-ರಿ,ಜನಾನುರಾಂಯಾಗಿ,ಅದ್ಬುತವಾದ,ದಕ್ಷ ಪ್ರಾಮಾಣಿಕ ಆಡಳಿತಗಾರನಾಗಿ, ಬೆಂಗಳೂರು ನಿರ್ಮಾತೃರಾಗಿ ಇಡೀ ಪ್ರಪಂಚದಲ್ಲಿ ತನ್ನ ಅಚ್ಚ ಅರಿಯದ ಹೆಸರನ್ನು ಉಳಿಸಿಹೊದ ಕೆಂಪೇಗೌಡರು ಇಂದಿಗೂ ಜನಮಾನಸರಲ್ಲಿ ಚಿರಸ್ಥಾಯಿಯಾಗಿದ್ದಾರೆ. ಆಳಿಯುವುದು ಕಾಯ, ಉಳಿಯುವುದು ಕೀರ್ತಿ ಎನ್ನುವಂತೆ ಕೆಂಪೇಗೌಡರವರು ಮಾಡಿದ ಕೆಲಸಗಳು ನೆನೆಪಲ್ಲಿ ಉಳಿದಿವೆ.

ಕೆಂಪೇಗೌಡರು ಒಬ್ಬ ಶ್ರೇಷ್ಠ ಜನ ನಾಯಕರಾಗಿದ್ದು, ಬಾಲ್ಯದಿಂದಲೇ ಬಹಳ ಚುರುಕಾಗಿದ್ದರು. ಶೈಕ್ಷಣಿಕ ವಿಚಾರಗಳನ್ನು ಅಧ್ಯಯನ ಮಾಡುವುದರ ಜೊತೆಗೆ ತನ್ನ ರಾಜ್ಯದ ಆಡಳಿತಕ್ಕೆ ಬೇಕಾದ ಮಲ್ಲ ಯುದ್ಧ, ಕುದುರೆ ಸವಾರಿ, ಕತ್ತಿ ವರಸೆ ಎಲ್ಲವನ್ನು ಕೂಡ ಕಲಿತಿದ್ದರು. ಕೃಷಿ ಬಗ್ಗೆ ಬಹಳ ಆಸಕ್ತಿಯನ್ನು ಹೊಂದಿದ್ದರು. ಕೃಷಿಗೆ ಪ್ರಾಮುಖ್ಯತೆಯನ್ನು ನೀಡುವುದರ ಜೊತೆಗೆ ರಾಜ್ಯಧಾನಿಯನ್ನು ಕಟ್ಟುವ ಸಲುವಾಗಿ ನಾಡಿನ ಹಿತಕ್ಕಾಗಿ ಕೆರ-ಕಟ್ಟೆಗಳನ್ನು ನಿರ್ಮಾಣ , 4 ಪ್ರಮುಖ ದ್ವಾರಗಳನ್ನು ಮತ್ತು 5 ಉಪ ದ್ವಾರಗಳನ್ನು ನಿರ್ಮಾಣ ಮಾಡಿದರು ಎಂದರು.

ಕೆಂಪೇಗೌಡ ಜಯಂತಿ ಪ್ರಯುಕ್ತ ವಿವಿಧ ಸ್ಪರ್ಧೆ ಗಳನ್ನು ಆಯೋಜಿಸಲಾಗಿದ್ದು, ವಿಜೇತರಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕಿ ಲತಾ ನಾಯಕ, ವಿವಿಧ ಇಲಾಖೆಗಳ ಅಧಿಕಾರಿಗಳು, ಸಿಬ್ಬಂದಿಗಳು, ವಿದ್ಯಾರ್ಥಿಗಳು ಮತ್ತಿತರರು ಉಪಸ್ಥಿತ-ರಿದ್ದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕಿ ಮಂಗಲಾ ವೆಂ ನಾಯ್ಕ ಸ್ವಾಗತಿಸಿದರು. ಶಿಕ್ಷಕಿ ವನಿತಾ ಶೆಟ್ ನಿರೂಪಿಸಿ, ವಂದಿಸಿದರು.

# ಸಮುದಾಯ ಭವನ ನಿರ್ಮಾಣ ಮುಂದುವರೆದ ಕಾಮಗಾರಿಗೆ ಭೂಮಿ ಪೂಜೆ

ಮೂಡಲಗಿ : ರಾಜ್ಯ ರಾಜಕಾರಣದಲ್ಲಿ ಕ್ಷಿಪ್ರಗತಿಯ ಬೆಳವಣಿಗೆಗಳು ನಡೆಯುತ್ತಿದ್ದು ಅಕ್ಟೋಂಬರ್-ನವ್ಹೆಂಬರ ತಿಂಗಳಿನಲ್ಲಿ ಬಾರಿ ಬದಲಾವಣೆ ಆಗಲಿದೆ ಎಂದು ರಾಜ್ಯ ಸರ್ಕಾರದ ಸಹಕಾರ ಸಚಿವ ಕೆ. ಎನ್. ರಾಜಣ್ಣ ಹೇಳಿಕೆ ಗಮನಿಸಿದರೆ ಮತ್ತು ಕಾಂಗ್ರೇಸ್‌ನಲ್ಲಿ ಆಗುತ್ತಿರುವ ವಿದ್ಯಮಾನಗಳನ್ನು ಅವಲೋಕಿಸಿದರೇ ಮುಂದಿನ ದಿನಗಳಲ್ಲಿ ಡಂಬಲ್ ಇಂಜಿನ ಸರ್ಕಾರ ರಾಜ್ಯದಲ್ಲಿ ಅಧಿಕಾರಕ್ಕೆ ಬಂದರೆ ಆಶ್ಚರ್ಯ ಪಡಬೇಕಾಗಿಲ್ಲ ಎಂದು ರಾಜ್ಯಸಭೆ ಸಂಸದ ಈರಣ್ಣ ಕಡಾಡಿ ಹೇಳಿದರು.

ಶನಿವಾರ ಹಳ್ಳೂರ ಗ್ರಾಮದ ಹಳ್ಳದರಂಗ ದೇವಸ್ಥಾನ ಹತ್ತಿರ ರಾಜ್ಯಸಭಾ ಸಂಸದರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 50 ಲಕ್ಷ ರೂ,ಗಳ ವೆಚ್ಚದಲ್ಲಿ ಸಮುದಾಯ ಭವನ ನಿರ್ಮಾಣ ಮುಂದುವರೆದ ಕಾಮಗಾ-ರಿಗೆ ಭೂಮಿ ಪೂಜೆ ನೇರವೇರಿಸಿ ಅವರು ಮಾತನಾಡಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಅತಿ ಹೆಚ್ಚು ಬಹುಮತದೊಂದಿಗೆ ಅಧಿಕಾರಕ್ಕೆ ಬಂದ ಕಾಂಗ್ರೇಸ್ ದಿನನಿತ್ಯ ಹಗರಣಗಳು, ಮಂತ್ರಿಗಳ ಕಚ್ಚಾಟ, ರಾಜ್ಯದಲ್ಲಿ ಅರಾಜಕತೆ, ಆರ್ಥಿಕ ಸಂಕಷ್ಟಗಳು ಈ ರೀತಿ ಸಮಸ್ಯೆಗಳ ಸರಮಾಲೆಯಲ್ಲಿ ಸಿಕ್ಕಿ ಹಾಕಿಕೊಂಡಿದೆ. ರಾಜ್ಯದ ಜನರಿಗೆ ಅಭಿವೃದ್ಧಿ ಎಂಬುವುದು ಮ-



ರಿಚಿಕೆಯಾಗಿದೆ. ಕಾಂಗ್ರೇಸ್ ಶಾಸಕರೆ ಸರ್ಕಾರದ ಕಾರ್ಯ ವೈಖರಿಗಳ ಬಗ್ಗೆ ಬೇಸರ ವ್ಯಕ್ತ ಪಡಿಸುತ್ತಿರುವುದು ಎದ್ದು ಕಾಣುತ್ತಿದೆ. ರಾಜ್ಯದ ಜನ ಅಭಿವೃದ್ದಿ ಪರವಾದ ಸರ್ಕಾರವನ್ನು ಬಯಸುತ್ತಿದ್ದಾರೆ ಎಂದರು.

ಈಗಾಗಲೇ ಹಳ್ಳೂರ ಗ್ರಾಮಕ್ಕೆ ರಾಜ್ಯಸಭಾ ಸಂಸದರ ನಿಧಿಯಿಂದ ಹಳ್ಳದರಂಗ ಸಮುದಾಯ ಭವನಕ್ಕೆ 50 ಲಕ್ಷ ರೂ.ಗಳು, ಚಂದ್ರವ್ವದೇವಿ ಸಮುದಾಯ ಭವನಕ್ಕೆ 5 ಲಕ್ಷ ರೂ.ಗಳು, ಮಲ್ಲಿಕಾರ್ಜುನ ಸಮುದಾಯ ಭವನಕ್ಕೆ 5 ಲಕ್ಷ ರೂ.ಗಳು, ಗಾಂಧಿ ನಗರದ ಬಸವೇಶ್ವರ ಸಮುದಾಯ ಭವನಕ್ಕೆ 5 ಲಕ್ಷ ರೂ.ಗಳು, ಆಧಿನಾಥ ಸಮುದಾಯ ಭವನಕ್ಕೆ 5 ಲಕ್ಷ ರೂ. ಗಳು, ಬಸ್ ಪ್ರಯಾಣಿಕರ ತಂಗುದಾನಕ್ಕೆ 5 ಲಕ್ಷ ರೂ.ಗಳು ಹೀಗೆ ಎಲ್ಲ ಸಮುದಾಯದವರಿಗೂ ಕೂಡಾ ದೊಡ್ಡ ಪ್ರಮಾಣದಲ್ಲಿ ಅನುದಾನವನ್ನು ವಿತರಿಸುವ ಮೂಲಕ ಹಳ್ಳೂರ ಗ್ರಾಮದ ಅಭಿವೃದ್ದಿಯಲ್ಲಿ ನಾನು ಕೂಡಾ ಅಳಿಲು ಸೇವೆ ಸಲ್ಲಿಸುತ್ತಿದ್ದೇನೆ. ಅದೇ ರೀತಿ ಬರುವಂತಹ ದಿನಗಳಲ್ಲಿ ಯುವಕರ ಅನುಕೂಲಕ್ಕಾಗಿ ಗ್ರಾಮದಲ್ಲಿ ಒಂದು ಓಪ್ ಜಿಮ್ ಸೌಲಭ್ಯ ಒದಗಿಸಿ ಕೊಡಲು ನಾನು ಪ್ರಯತ್ನಿಸುತ್ತಿದ್ದೇನೆ, ಇನ್ನೂ ಹೆಚ್ಚು ಸೇವೆಯನ್ನು ಮಾಡಲು ನಾನು ಸಿದ್ದನಿದ್ದೇನೆ, ತಾವು ಅದರ ಸದುಪಯೋಗ ಪಡೆದುಕೊಳ್ಳಬೇಕೆಂದು ವಿನಂತಿಸಿದರು.

ಇದೇ ಸಂದರ್ಭದಲ್ಲಿ ಗ್ರಾಮದ ಚನ್ನಮ್ಮ ವೃತ್ತದ ಹತ್ತಿರ ಬಸ್ ಪ್ರಯಾಣಿಕರ ತಂಗುದಾನಕ್ಕೆ ಪೂಜೆ ನೇರವೇರಿಸಿದರು. ತದನಂತರ ಚಂದ್ರವ್ವದೇವಿ ದೇವಸ್ಥಾನದ ಹತ್ತಿರ ನಿರ್ಮಾಣಗೊಂಡ ಸಮುದಾಯ ಭವನ ಕಟ್ಟಡವನ್ನು ಉದ್ಘಾಟಿಸಿದರು,

ಈ ಸಂದರ್ಭದಲ್ಲಿ, ಗ್ರಾ.ಪಂ ಅಧ್ಯಕ್ಷೆ ನೀಲವ್ವ ಹೊಸಟ್ಟಿ, ಸದಸ್ಯರಾದ ಸದಾಶಿವ ಮಾವರಕರ, ಪ್ರಮುಖರಾದ ಬಸವಣೆಪ್ಪ ಡಬ್ಬನ್ನವರ, ಶಂಕರ ಲೋಕನ್ನವರ, ಕುಮಾರ ಲೋಕನ್ನವರ, ಶಿವಪ್ಪ ಕೌಜಲಗಿ, ಶ್ರೀಕಾಂತ ಕೌಜಲಗಿ, ಸುರೇಶ ಮಗದುಮ್ಮ, ತುಕಾರಾಮ ಸನದಿ, ಮುತ್ತೆಪ್ಪ ಬೋಳನ್ನವರ, ಬಾಳಗೌಡ ಪಾಟೀಲ, ಗೂಳಪ್ಪ ನೇಸೂರ, ಯಲ್ಲಪ್ಪ ಕುಲಗೋಡ, ಆನಂದ ಸಂತಿ ಗಿರಿಮಲ್ಲಪ್ಪ ಕಲ್ಲೋಳಿ, ಗಿರಮಲ್ಲಪ್ಪ ಸಂತಿ, ಲಕ್ಷ್ಮಣ ಹೊಸಟ್ಟಿ, ಈರಪ್ಪ ಢವಳೇಶ್ವರ, ಶ್ರೀಶೈಲ ಪೂಜೇರಿ, ಬಸವರಾಜ ಗಾಡವಿ, ಚಂದ್ರಶೇಖರ ಸಪ್ತಸಾಗರ, ಪ್ರವೀಣ ಮಾವರಕರ ಸೇರಿದಂತೆ ಸ್ಥಳೀಯ ಮುಖಂಡರು, ಗ್ರಾಮಸ್ಥರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 07, Issue :124, Postal Reg No. PMG/KA/NK/BM/135/25-27 / POST AT Vantamury Colony Post Office